ಸಂಪುಟ : 13 Volume | ಸಂಚಿಕೆ : 199 Issue | ಪುಟಗಳು : 08 Pages | ಶನಿವಾರ 20 ಸೆಪ್ಟೆಂಬರ್ 2025 | ₹2 | RNINO:KARKAN/2011/48371 | BDR/054/2026-20274 | www.mallammanudi.in | mallammanudi@gmail.com | 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

MN ಸತ್ಯಮೇವ ಜಯತೆ ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

" ನಮ್ಮಲ್ಲಿ ನಮಗೆ ಶ್ರದ್ಧೆಯಿರಲಿ , ಸಕಲ ಶಕ್ತಿಯೂ ಅಡಗಿದೆ
ನಮ್ಮಲ್ಲಿ ಇದನ್ನರಿತು ಭಾವಿಸುತ್ತಾ ಆ ಶಕ್ತಿಯನ್ನು ಪ್ರಕಟಗೊಳಿಸಿಕೊಳ್ಳಿರಿ ನಮ್ಮವ್ಯಕ್ತಿತ್ವದಲ್ಲಿ ಹೇಳಿಕೊಳ್ಳಿ "
-ಸ್ವಾಮಿ ವಿವೇಕಾನಂದ

ಲಿಂಗಾಯತ ಎಂದು ಬರೆಸಿ 2
ಸಮೀಕ್ಷೆಯಲ್ಲಿಮರಾಠಾಎಂದುನಮೂದಿಸಿ 4
ನೌಕರರಿಂದ ಬೃಹತ್ ಪ್ರತಿಭಟನೆ 8

# ಜಾತಿ ಗಣತಿ ಮುಂದೂಡಿಕೆ ಇಲ್ಲ: ಸಿಎಂ

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಸೆ.19:ಹಿಂದುಳಿದಜಾತಿಗಳ ಸಾಮಾಜಿಕ-ಶೈಕ್ಷಣಿಕಸಮೀಕ್ಷೆಯನ್ನು ಮುಂದೂಡಲಾಗುವುದಿಲ್ಲಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಶುಕ್ರವಾರ ಹೇಳಿದ್ದಾರೆ.

ಹಿಂದುಳಿದವರ್ಗಗಳಆಯೋಗವು ಸಮೀಕ್ಷೆಯನ್ನುಹೇಗೆನಡೆಸಬೇಕೆಂದು ನಿರ್ಧರಿಸುತ್ತದೆ ಎಂದು ಅವರು ಹೇಳಿದರು.ಕೆಲವು ಸಚಿವರು ಜಾತಿಸಮೀಕ್ಷೆಯನ್ನುವಿರೋಧಿಸಿ ಮುಂದೂಡಲುಪ್ರಯತ್ನಿಸಿದ್ದಾರೆ ಎಂಬವರದಿಗಳಕುರಿತುವರದಿಗಾರರ ಪ್ರಶ್ನೆಗಳಿಗೆಉತ್ತರಿಸಿದಸಿದ್ದರಾಮಯ್ಯ, ನಾವುಅದನ್ನುಮುಂದೂಡುವುದಿಲ್ಲ. ಹಿಂದುಳಿದವರ್ಗಗಳಆಯೋಗವು ಸಾಂವಿಧಾನಿಕವಾಗಿರೂಪುಗೊಂಡ ಶಾಸನಬದ್ಧಸಂಸ್ಥೆಯಾಗಿದೆ.ನಾವು ಅದಕ್ಕೆ ಯಾವುದೇ ನಿರ್ದೇಶನ ನೀಡಲು ಸಾಧ್ಯವಿಲ್ಲ. ಅವರು ಅಭಿಪ್ರಾಯ ಕೇಳಿದ್ದಾರೆ. ಅದು



(ಆಯೋಗ) ನಿರ್ಧರಿಸುತ್ತದೆ ಎಂದು ಹೇಳಿದರು. ಸೆ. 22ರಿಂದ ಕೆಲಸಣ್ಣಪುಟ್ಟಬದಲಾವಣೆಗಳೊಂದಿಗೆ ಸಮೀಕ್ಷೆಮುಂದುವರಿಸಲುಸೂಚನೆ ನೀಡಿದ್ದೇನೆಎಂದಿದ್ದಾರೆ.ಸಚಿವರು ಸಮೀಕ್ಷೆಯಬಗ್ಗೆಅತೃಪ್ತರಾಗಿದ್ದಾರೆ ಎಂಬ ಹೇಳಿಕೆಗಳನ್ನು ತಳ್ಳಿಹಾಕಿದ ಸಿಎಂ, ಬಿಜೆಪಿ ರಾಜಕೀಯ ಮಾಡುತ್ತಿದೆ - ಅವರು ಕಾಂಗ್ರೆಸ್ ಸರ್ಕಾರವನ್ನು ಹಿಂದೂ ವಿರೋಧಿ ಎಂದುಬಿಂಬಿಸುತ್ತಿದ್ದಾರೆ. ಅದನ್ನು ಖಂಡಿಸಿಅವರಿಗೆಸರಿಯಾದಉತ್ತರ ನೀಡುವಂತೆ ನಾನು ಸಚಿವರಿಗೆ ಹೇಳಿದ್ದೇನೆಎಂದರು.ಗುರುವಾರದ ಸಚಿವ ಸಂಪುಟ ಸಭೆಯಲ್ಲಿ, ಜಾತಿ ಜನಗಣತಿಎಂದುಬಿಂಬಿಸಲಾಗುತ್ತಿರುವ ಸಮೀಕ್ಷೆಯಬಗ್ಗೆಯಾವುದೇನಿರ್ಧಾರ ತೆಗೆದುಕೊಳ್ಳಲಾಗಿಲ್ಲ.ಒಕ್ಕಲಿಗಕ್ರೈಸ್ತರು, ಲಿಂಗಾಯತಕ್ರೈಸ್ತರು, ವಿಶ್ವಕರ್ಮ ಬ್ರಾಹ್ಮಣಕ್ರೈಸ್ತರು, ಗಾಣಿಗಕ್ರೈಸ್ತರು ಮತ್ತು ಮಡಿವಾಳ ಕ್ರೈಸ್ತರನ್ನು ಸೇರ್ಪಡೆಗೊಳಿಸುವ ಬಗ್ಗೆ ಕೆಲವು ಸಚಿವರುಕಳವಳವ್ಯಕ್ತಪಡಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ.

## ಸೆ.22 ರಿಂದ ಜಾತಿ ಜನಗಣತಿ ಆರಂಭ ಸರ್ಕಾರದಿಂದ ಅಧಿಕೃತ ಆದೇಶ

ಜಾತಿ ಜನಗಣತಿ ನಡೆಯುವುದು ಖಚಿತವಾಗಿದ್ದು ಸರ್ಕಾರ ಅಧಿಕೃತ ಆದೇಶ ಪ್ರಕಟಿಸಿದೆ. ಸೆ.22 ರಿಂದ ಅ.07 ರವರೆಗೆ ಸಮೀಕ್ಷೆ ನಡೆಸಲಾಗುವುದು ಎಂದು ಆದೇಶಲ್ಲಿ ತಿಳಿಸಲಾಗಿದೆ.ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ರಾಜ್ಯದ ನಾಗರಿಕರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗಳ ಕುರಿತು ಸಮೀಕ್ಷೆ ನಡೆಸಲಾಗುತ್ತಿದ್ದು ಸಮೀಕ್ಷೆಗೆ ಸಿದ್ಧರಿರುವಂತೆ ರಾಜ್ಯದ ಜನತೆಗೆ ತಿಳಿಸಲಾಗಿದೆ. ಆದರೆ ಈಗ ಎದ್ದಿರುವ ಗೊಂದಲ ಬಗೆಹರಿಸುವ ಬಗ್ಗೆ ಆದೇಶದಲ್ಲಿ ಯಾವುದೇ ಸ್ಪಷ್ಟನೆ ನೀಡಿಲ್ಲ.ಈಗಾಗಲೇ ಜಿಲ್ಲಾಧಿಕಾರಿಗಳು ಹಾಗೂ ಮುಖ್ಯ ಕಾರ್ಯನಿರ್ವಾಹಕಅಧಿಕಾರಿಗಳು, ಜಿಲ್ಲಾಪಂಚಾಯತ್ ರವರಿಗೆವಿಡಿಯೋಕಾನ್ಸ ರೆನ್ಸ್ ಮೂಲಕಜಿಲ್ಲಾಮತ್ತು ತಾಲ್ಲೂಕು ಹಂತದಲ್ಲಿ ಹಾಗೂ ಸಮೀಕ್ಷಾದಾರರಿಗೆ ಅಗತ್ಯ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು ಹಾಗೂ ಸಾರ್ವಜನಿಕರನ್ನು ಸಮೀಕ್ಷಾ ಕಾರ್ಯದಲ್ಲಿ ಪೂರ್ಣವಾಗಿ ಪಾಲ್ಗೊಳ್ಳಲು ಅರಿವು ಮೂಡಿಸಬೇಕೆಂದು ತಿಳಿಸಲಾಗಿದೆ.ಸರ್ಕಾರದ ಸಚಿವರಲ್ಲೇ ಜಾತಿ ಜನಗಣತಿಯ ಬಗ್ಗೆ ಗೊಂದಲ ಎದ್ದ ಕಾರಣ ಜಾತಿ ಜನಗಣತಿ ನಡೆಯುತ್ತದೆಯೋ ಇಲ್ವೋ ಎಂಬ ಗೊಂದಲ ಎದ್ದಿತ್ತು. ಆದರೆ ಈಗ ಸರ್ಕಾರವೇ ಅಧಿಕೃತ ಆದೇಶ ಪ್ರಕಟಿಸುವ ಮೂಲಕ ಎಲ್ಲಾ ಗೊಂದಲಗಳಿಗೆ ತೆರೆ ಎಳೆದಿದೆ.

## ಇಂದಿನಿಂದ ಮಕ್ಕಳಿಗೆ ದಸರಾ ರಜೆ

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಸೆ.19: ಸೆ.20 ರಿಂದ ರಾಜ್ಯದ ಎಲ್ಲಾ ಶಾಲಾಗಳಿಗೆ ದಸರಾ ರಜೆ ಘೋಷಣೆ ಮಾಡಲಾಗಿದೆ. ಈ ಕುರಿತಂತೆ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.ಪ್ರಸಕ್ತ ಶೈಕ್ಷಣಿಕ ವರ್ಷದ ಶಾಲಾ ವಿದ್ಯಾರ್ಥಿಗಳ ದಸರಾ ರಜೆ ನಾಳೆ ಸೆಪ್ಟೆಂಬರ್ 20ರಂದು ಆರಂಭ. ಮೈಸೂರು ವಿಶ್ವವಿಖ್ಯಾತ ನಾಡಹಬ್ಬ ದಸರಾ ಮಹೋತ್ಸವವನ್ನು ಮಕ್ಕಳು ಸಹ ನೋಡಿ ಕಣ್ತುಂಬಿಕೊಳ್ಳಲಿ ಎಂದು ಶಿಕ್ಷಣ ಇಲಾಖೆ ನಾಳೆಯಿಂದ 18 ದಿನ ಸರ್ಕಾರಿ ಶಾಲೆಗಳಿಗೆ ಹಬ್ಬದ ರಜೆ ಘೋಷಿಸಿದೆ.ಈ ಬಗ್ಗೆ ಶಿಕ್ಷಣ ಇಲಾಖೆ ಇಂದು ಆದೇಶ ಹೊರಡಿಸಿದ್ದು, ಸೆ. 20 ರಿಂದ ಅಕ್ಟೋಬರ್ 7ರವರೆಗೆ ಸರ್ಕಾರಿ ಶಾಲೆಗಳಿಗೆ ಒಟ್ಟು 18 ದಿನ ಹಬ್ಬದ ರಜೆ ಘೋಷಿಸಿದೆ. ಕಡ್ಡಾಯವಾಗಿ ಅಕ್ಟೋಬರ್ 2ರಂದು ನಡೆಯಲಿರುವ ಗಾಂಧಿ ಜಯಂತಿ ಮತ್ತು ಲಾಲ್ ಬಹದ್ದೂರ್ ಶಾಸ್ತ್ರಿ ಜಯಂತಿ ಕಾರ್ಯಕ್ರಮಗಳಿಗೆ ಹಾಜರಾಗುವಂತೆ ಸೂಚಿಸಲಾಗಿದೆ.ರಾಜ್ಯ ಶಿಕ್ಷಣ ಇಲಾಖೆ ಹೊರಡಿಸಿರುವ ಶೈಕ್ಷಣಿಕ ವೇಳಾಪಟ್ಟಿಯ ಪ್ರಕಾರ 18 ದಿನ ರಜೆ ನೀಡಲಾಗಿದೆ. ಸೆಪ್ಟೆಂಬರ್ 22ರಂದು ಈ ಬಾರಿ ವಿಶ್ವವಿಖ್ಯಾತ ಮೈಸೂರು ದಸರಾಕ್ಕೆ ನಾಡ ಅಧಿದೇವತೆ ತಾಯಿ ಚಾಮುಂಡೇಶ್ವರಿ ಸನ್ನಿಧಾನದಲ್ಲಿ ಚಾಲನೆ ಸಿಗುತ್ತಿದೆ.ಅಂದಿನಿಂದ ಅಕ್ಟೋಬರ್ 2ವರೆಗೆ ಅಂದರೆ 11 ದಿನಗಳ ಕಾಲ ದಸರಾ ಹಬ್ಬ ನೆರವೇರಲಿದೆ.

## ರಾಜ್ಯದ 9 ಮುಜರಾಯಿ ದೇಗುಲಗಳ ಸೇವಾಶುಲ್ಕ ಏರಿಕೆ : ಅ.1ರಿಂದ ಜಾರಿ

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಸೆ.19: ಕರ್ನಾಟಕದ ಮುಜರಾಯಿ ಇಲಾಖೆ ವ್ಯಾಪ್ತಿಯ ಕೆಲ ದೇವಾಲಯಗಳ ಸೇವಾಶುಲ್ಕ ಸದ್ದಿಲ್ಲದೇ ಏರಿಕೆಯಾಗಿದ್ದು, ಇನ್ಮೇಲೆ ದೇವರ ಸೇವೆ ಭಕ್ತಾದಿಗಳ ಜೇಬು ಸುಡಲಿದೆ.ರಾಜ್ಯದ ಧಾರ್ಮಿಕ ದತ್ತಿ ಇಲಾಖೆಯಡಿ 35 ಸಾವಿರ ದೇವಾಲಯಗಳಿದ್ದು, ಈ ದೇವಾಲಯಗಳ ಪೈಕಿ 9 ದೇವಸ್ಥಾನಗಳ ಸೇವಾಶುಲ್ಕ ಏರಿಕೆ ಮಾಡಲಾಗಿದೆ. ಅಕ್ಟೋಬರ್ 1ರಿಂದ ಪರಿಷ್ಕೃತ ದರ ಅನ್ವಯವಾಗಲಿದೆ. ಕಳೆದ 4-5 ವರ್ಷದಿಂದ ಸೇವಾಶುಲ್ಕ ಪರಿಷ್ಕರಣೆ ಮಾಡದ, ಯಾವ ದೇವಾಲಯಗಳು ಸೇವಾಶುಲ್ಕ ಪರಿಷ್ಕರಣೆಗೆ ಮನವಿ ಸಲ್ಲಿಸಿದ್ದವೋ ಆ ದೇವಾಲಯಗಳ ಸೇವಾಶುಲ್ಕವನ್ನ, ಆಗಮ ಪಂಡಿತರ ಪರಿಶೀಲನೆ ನಂತರ 5-10% ವರೆಗೂ ಮುಜರಾಯಿ ಇಲಾಖೆ ಆಯುಕ್ತರು ಏರಿಕೆ ಮಾಡಿದ್ದಾರೆ. ಇದು ದೇವಾಲಯಗಳ ಆಡಳಿತ ಮಂಡಳಿ ತೀರ್ಮಾನವೇ ಹೊರತು ಸರ್ಕಾರದ ನಿರ್ಧಾರವಲ್ಲವೆಂದು ಮುಜರಾಯಿ ಇಲಾಖೆ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದ್ದಾರೆ. ಬೆಂಗಳೂರು ನಗರದಲ್ಲಿ ಯೋಗ ನರಸಿಂಹಸ್ವಾಮಿ ದೇವಾಲಯ, ಮಲ್ಲೇಶ್ವರಂ , ನಂದಿ ತೀರ್ಥ ದೇವಾಲಯ, ಮಲ್ಲೇಶ್ವರಂ, ಮಹಾಗಣಪತಿ ದೇವಾಲಯ, ಮಲ್ಲೇಶ್ವರಂ ಚಿಕ್ಕಬಳ್ಳಾಪುರದಲ್ಲಿ ವಿಧುರಾಶ್ವಥ ನಾರಾಯಣ ಸ್ವಾಮಿ ದೇವಾಲಯ,ವೆಂಕಟರಮಣ ದೇವಾಲಯ, ತಲಕಾಯ ಬೆಟ್ಟದಕ್ಷಿಣ ಕನ್ನಡದಲ್ಲಿಮಹಾಲಿಂಗೇಶ್ವರ ದೇವಾಲಯ, ಪುತ್ತೂರು,ಕುಕ್ಕೆ ಸುಬ್ರಹ್ಮಣ್ಯ ದೇವಾಲಯ,ಸೌತಡ್ಕ ಮಹಾಗಣಪತಿ ದೇವಾಲಯ,ಸೂರ್ಯನಾರಾಯಣ ಸ್ವಾಮಿ ದೇವಾಲಯ, ಮಾರಾಳಿ ಇನ್ನೂ ನಾಗಾರಾಧನೆ, ದೈವರಾಧನೆಗೆ ಹೆಸರಾದ ಕುಕ್ಕೆ ಸುಬ್ರಹ್ಮಣ್ಯದಲ್ಲಿ 2010ರಲ್ಲಿ ಸೇವಾಶುಲ್ಕ ಏರಿಕೆ ಮಾಡಲಾಗಿತ್ತು. 15 ವರ್ಷಗಳ ನಂತರ ಇದೀಗ ಸೇವಾಶುಲ್ಕ ಏರಿಕೆ ಮಾಡಲಾಗಿದೆ. ಕುಕ್ಕೆಯಲ್ಲಿ ಆಶ್ಲೇಷ ಪೂಜೆ ಸೇವೆಗೆ ಈ ಹಿಂದೆ ಇದ್ದ ದರ 400 ರೂಪಾಯಿ, ಪರಿಷ್ಕೃತ ದರ 500 ರೂ.ಗೆ ಏರಿಕೆಯಾಗಿದೆ. ನಾಗಪ್ರತಿಷ್ಠೆಗೆ ಈ ಹಿಂದೆ ಇದ್ದ ದರ 400 ರೂಪಾಯಿ. ಆದರೆ ಧಾರ್ಮಿಕ ದತ್ತಿ ಇಲಾಖೆ ಪರಿಷ್ಕೃತ ದರ 500 ರೂಪಾಯಿ ಹೆಚ್ಚಿಸಿದೆ. ಹೀಗೆ ಉಳಿದ ಸೇವೆಗಳಲ್ಲೂ ಭಾರೀ ಹೆಚ್ಚಳ ಮಾಡಲಾಗಿದೆ.

## ಸಖಿ ಸೆಂಟರ್ ನ ನೂತನ ವಾಹನಗಳಿಗೆ ಡಿ.ಸಿ. ಚಾಲನೆ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ,ಸೆ.19ಕೇಂದ್ರ ಸರ್ಕಾರದ ಮಿಷನ್ ಶಕ್ತಿ ಯೋಜನೆಯಡಿ ಜಿಲ್ಲಾ ಮಹಿಳಾ ಸಬಲೀಕರಣ ಘಟಕದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಖಿ ಒನ್ ಸ್ಟಾಫ್ ಸೆಂಟರ್ ಗೆ ನೊಂದ ಮಹಿಳೆಯರಿಗೆ ಸಹಾಯ ಒದಗಿಸಲು ಬಾಡಿಗೆ ಮೇಲೆ ಪಡೆಯಲಾದ ಎರಡು ವಾಹನಗಳಿಗೆ ಗುರುವಾರ ನಗರದ ಪ್ರಗತಿ ಕಾಲೋನಿಯಲ್ಲಿರುವ ಸಖಿ ಸೆಂಟರ್ ಅವರಣದಲ್ಲಿ ಡಿ.ಸಿ. ಬಿ.ಫೌಜಿಯಾ ತರನ್ನುಮ್ ಚಾಲನೆ ನೀಡಿದರು.

ಒನ್ ಸ್ಟಾಪ್ ಸೆಂಟರ್ ದೌರ್ಜನ್ಯಕ್ಕೆ ಒಳಗಾದ ಮಹಿಳೆಯರಿಗೆ ಒಂದೇ ಸೂರಿನಡಿ ಅಪ್ತ ಸಮಾಲೋಚನೆ, ವೈದ್ಯಕೀಯ ಚಿಕಿತ್ಸೆ , ಕಾನೂನು ನೆರವು, ಪೊಲೀಸ್ ನೆರವು ಹಾಗೂ ತಾತ್ಕಾಲಿಕ ವಸತಿ ಸೌಲಭ್ಯ ಒದಗಿಸಲಾಗುತ್ತಿದೆ.

ನೂತನವಾಹನಗಳನ್ನು ಬಳಸಿಕೊಂಡುನೊಂದ, ಸಂಕಷ್ಟದಲ್ಲಿದ್ದಹಾಗೂದೌರ್ಜನ್ಯಕ್ಕೆಒಳಗಾದಮಹಿಳೆಯರಿಗೆಸೂಕ್ತ ಸೇವೆಹಾಗೂಸೂಕ್ತ ನೆರವು ಒದಗಿಸಲುತ್ವರಿತವಾಗಿ ಧಾವಿಸಬೇಕು ಮತ್ತು ವಿವಿಧ ಇಲಾಖೆಗಳೊಮದಿಗೆಸಮನ್ವಯ ಸಾಧಿಸಬೇಕೆಂದು ಅಧಿಕಾರಿಗಳಿಗೆ ಡಿ.ಸಿ. ಸೂಚಿಸಿದರು. ಇದೇಸಂದರ್ಭದಲ್ಲಿ ಪೋಷಣ ಅಭಿಯಾನ್ ಯೋಜನೆಯಡಿ




ಸಖಿ ಕೇಂದ್ರಕ್ಕೆ ಸ್ಮಾರ್ಟ ಮೋಬೈಲ್ ಸಹ ವಿತರಿಸಲಾಯಿತು. ಡಿ.ಎಚ್.ಓ ಡಾ.ಶರಣಬಸಪ್ಪಕ್ಯಾತನಾಳ, ಮಹಿಳಾ ಮತ್ತು ಮಕ್ಕಳ ಅಭಿವರಸ್ದಿ ಇಲಾಖೆಯ ಉಪನಿರ್ದೇಶಕರಾಜಕುಮಾರರಾಠೋಡ, ಮಹಿಳಾಮತ್ತುಮಕ್ಕಳಅಭಿವೃದ್ದಿಅಧಿಕಾರಿ ಶಿವಶರಣಪ್ಪ, ಜಿಲ್ಲಾನಿರೂಪಣಾಧಿಕಾರಿ ಮುರುಗೇಶ ಗುಣಾರಿ, ಡಿ.ಸಿ.ಪಿ.ಓ ಮಂಜುಳಾಪಾಟೀಲ್, ವಿಜಯಲಕ್ಷ್ಮೀ ಜಾಧವ್, ಗೀತಾ ಪಾಟೀಲ್ ಹಾಗೂ ಸಿಬ್ಬಂದಿಗಳು ಹಾಜರಿದ್ದರು.

## ಎಸ್‌ಬಿಐ ಬ್ಯಾಂಕ್‌ನಲ್ಲಿ ದರೋಡೆಯಾಗಿದ್ದ ಚಿನ್ನಾಭರಣ, ನಗದು ಮಹಾರಾಷ್ಟ್ರದಲ್ಲಿ ಪತ್ತೆ

ಮಲ್ಲಮ್ಮ ನುಡಿ ವಾರ್ತೆ ವಿಜಯಪುರ:ಸೆ.19: ಚಡಚಣ ಎಸ್‌ಬಿಐ ಬ್ಯಾಂಕ್ ದರೋಡೆ ಪ್ರಕರಣದಲ್ಲಿ ದೋಚಿದ್ದ ಚಿನ್ನಾಭರಣ ಪತ್ತೆ ಹಚ್ಚುವಲ್ಲಿ ವಿಜಯಪುರ ಪೊಲೀಸರು ಯಶಸ್ವಿಯಾಗಿದ್ದಾರೆ. ಸದ್ಯ ಚಿನ್ನಾಭರಣ, ನಗದಿನ ಬ್ಯಾಗ್ ಪತ್ತೆಯಾಗಿದೆ. ದರೋಡೆಗೆ ಬಳಸಿದ ವಾಹನದಲ್ಲೂ ಸ್ವಲ್ಪ ಹಣ, ಚಿನ್ನಾಭರಣ ಪತ್ತೆಯಾಗಿದೆ. ವಿಜಯಪುರ ಜಿಲ್ಲೆಯ ಚಡಚಣ ಪಟ್ಟಣದಲ್ಲಿ ಕಳೆದ 16 ರಂದು ಸಂಜೆ 6ರ ಸುಮಾರಿಗೆ ದರೋಡೆ ನಡೆದಿತ್ತು. ಐದು ಜನ ದರೋಡೆಕೋರರ ತಂಡ ಪಿಸ್ತೂಲ್ ತೋರಿಸಿ ನಗದು, ಚಿನ್ನಾಭರಣ ದೋಚಿ ಪರಾರಿಯಾಗಿದ್ದರು. ಪರಾರಿಯಾಗುವ ವೇಳೆ ಮಹಾರಾಷ್ಟ್ರದ ಸೋಲಾಪುರ ಜಿಲ್ಲೆಯ ಮಂಗಳವಾಡೆ ತಾಲೂಕಿನ ಹುಲ್ಲಜಂತಿ ಗ್ರಾಮದಲ್ಲಿ ದರೋಡೆಕೋರರ ವಾಹನ ಬೈಕ್ ಒಂದಕ್ಕೆ ಡಿಕ್ಕಿಯಾಗಿ ಗಲಾಟೆ ನಡೆದಿತ್ತು. ಆಗ ವಾಹನವನ್ನು ಅಲ್ಲೆ ಬಿಟ್ಟು ದರೋಡೆಕೋರರು ನಗದು, ಚಿನ್ನಾಭರಣದ ಬ್ಯಾಗ್ ತೆಗೆದುಕೊಂಡು ಪರಾರಿಯಾಗಿದ್ದರು. ಆಗ ವಾಹನದಲ್ಲಿ ಚಿನ್ನಾಭರಣದ ಪ್ಯಾಕೆಟ್ ಸಿಕ್ಕಿದ್ದವು. ಆದರೆ, ಇದೀಗ ಮತ್ತೊಂದು ಬ್ಯಾಗ್ ಪತ್ತೆಯಾಗಿದೆ. ನಿನ್ನೆ ಮಧ್ಯಾಹ್ನ ಮಹಾರಾಷ್ಟ್ರ ಪೊಲೀಸರು ಹಾಗೂ ವಿಜಯಪುರ ಪೊಲೀಸರು



ಹುಲ್ಲಜಂತಿ ಗ್ರಾಮದಲ್ಲಿ ಸಭೆ ನಡೆಸಿದ ಗ್ರಾಮಸ್ಥರಲ್ಲಿ ದರೋಡೆಕೋರನ ಹಾಗೂ ಕಳ್ಳತನ ಬ್ಯಾಗ್‌ಗಳ ಬಗ್ಗೆ ಮಾಹಿತಿ ನೀಡಲು ಮನವಿ ಮಾಡಿದ್ದರು. ಇದಾದ ನಂತರ ಪೊಲೀಸರು ಹುಲ್ಲಜಂತಿ ಗ್ರಾಮದ ತೀವ್ರ ಶೋಧ ಕಾರ್ಯ ಮಾಡಿದ್ದರು. ಸಂಜೆ 5 ಗಂಟೆ ಸುಮಾರಿಗೆ ಗ್ರಾಮದ ಒಂದು ಪಾಳುಬಿದ್ದ ಮನೆಯ ಮೇಲ್ಛಾವಣಿಯಲ್ಲಿ ಒಂದು ಬ್ಯಾಗ್ ಪತ್ತೆಯಾಗಿದೆ.

## ಹಿರಿಯ ಪತ್ರಕರ್ತ ಬಿ.ಬಾಬು ನಿಧನ



ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ,ಸೆ.19-ಜಿಲ್ಲೆಯ ಇಳಕಲ್ಲ ನಗರದ ಹಿರಿಯ ಪತ್ರಕರ್ತ ಬಿ.ಬಾಬು(72)ಶನಿವಾರ ಬೆಳಗಿನ ಜಾವ ಹೃದಯಘಾತದಿಂದ ನಿಧನ ಹೊಂದಿದರು. ಪತ್ರಿಕಾ ಕ್ಷೇತ್ರದಲ್ಲಿ ಸುದೀರ್ಘ ಅವಧಿಯ ಸೇವೆ ಸಲ್ಲಿಸಿದ್ದ ಬಾಬು, ಪ್ರಜಾವಾಣಿ, ಸಂಯುಕ್ತ ಕರ್ನಾಟಕ, ನಾಗರಿಕ, ನಾಡನುಡಿ ಪತ್ರಿಕೆಗಳ ವರದಿಗಾರರಾಗಿ ತಮ್ಮ ವಿಶಿಷ್ಟ ಬರವಣಿಗೆಯ ಮೂಲಕ ಗಮನ ಸೆಳೆದಿದ್ದರು. ಸ್ನೇಹಜೀವಿಯಾಗಿದ್ದ ಬಿ.ಬಾಬು ಸಧ್ಯ ಸಂಯುಕ್ತ ಕರ್ನಾಟಕ ಪತ್ರಿಕೆಯ ಇಳಕಲ್ಲ ವರದಿಗಾರರಾಗಿ ಸೇವೆ ಸಲ್ಲಿಸುತ್ತಿದ್ದರು. ಮೃತರಿಗೆ ಇಬ್ಬರು ಪುತ್ರಿಯರು, ಬಂಧು ಬಳಗ ಇದ್ದಾರೆ.

ಬಾಬು ಅವರ ನಿಧನಕ್ಕೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಜಿಲ್ಲಾ ಘಟಕದ ಅಧ್ಯಕ್ಷ ಆನಂದ ಧಲಬಂಜನ, ರಾಜ್ಯ ಕಾರ್ಯಕಾರಿಣಿ ಸದಸ್ಯ ಮಹೇಶ ಅಂಗಡಿ, ಕಾನಿಪ ಜಿಲ್ಲಾ ಘಟಕದ ಎಲ್ಲ ಪದಾಧಿಕಾರಿಗಳು ಹಾಗೂ ಸರ್ವ ಸದಸ್ಯರು, ಹುನಗುಂದ ಹಾಗೂ ಇಳಕಲ್ಲ ತಾಲೂಕು ಘಟಕಗಳ ಅಧ್ಯಕ್ಷರು, ಸದಸ್ಯರು ತೀವ್ರ ಶೋಕ ವ್ಯಕ್ತಪಡಿಸಿ ಸಂತಾಪ ಸೂಚಿಸಿದ್ದಾರೆ.

## ಭೀಕರ ಅಪಘಾತ: ಮೂವರು ಪೊಲೀಸ್ ಸಿಬ್ಬಂದಿ ಸಾವು

ಗದಗ,ಸೆ.19: ಗೋವಾದ ಕದಂಬ ಬಸ್ ಹಾಗೂ ಕಾರಿನ ನಡುವೆ ಅಪಘಾತ ಸಂಭವಿಸಿ ಕಾರಿನಲ್ಲಿದ್ದ ಮೂವರುಪೊಲೀಸ್‌ಸಿಬ್ಬಂದಿಸ್ಥಳದಲ್ಲೇಸಾವನ್ನಪ್ಪಿರುವ ದುರ್ಘಟನೆ ಹರ್ಲಾಪೂರ ಕ್ರಾಸ್ ಬಳಿ ನಡೆದಿದೆ. ಹಾವೇರಿ ಜಿಲ್ಲೆ ಪೊಲೀಸ್ ಕಂಟ್ರೋಲ್ ರೂಮ್ ನಲ್ಲಿ ಕೆಲಸ ಮಾಡುತ್ತಿದ್ದ ಪೇದೆ ಅರ್ಜುನ್ ನೆಲ್ಲೂರ (32), ಸಹೋದರ ಸಂಬಂಧಿ ರವಿ ನೆಲ್ಲೂರ (35) ಹಾಗೂ ಕೊಪ್ಪಳ ಜಿಲ್ಲಾ ಪೊಲೀಸ್ ಕಂಟ್ರೋಲ್ ರೂಮಿನಲ್ಲಿ ಕೆಲಸಮಾಡುತ್ತಿದ್ದಪೇದೆಈರಣ್ಣಉಪ್ಪಾರ(36)ಮೃತ ದುರ್ದೈವಿಗಳು.

ಮೃತರು ಹಾವೇರಿ ಜಿಲ್ಲೆ ಬಂಕಾಪೂರ ತಾಲೂಕಿನ ಹುನಗುಂದ ನಿವಾಸಿಯಾಗಿದ್ದಾರೆ.

## ತಂದೆ ಮೇಲಿನ ಸೇಡಿಗಾಗಿ ಮಗಳ ಕೊಂದವನ ಬಂಧನ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:ಸೆ.19:ಸೇಡಂತಾಲ್ಲೂಕಿನ ಮಳಖೇಡಗ್ರಾಮದಲ್ಲಿಕಾಣೆಯಾಗಿದ್ದ ಯುವತಿಭಾಗ್ಯಶ್ರೀತಂದೆಚನ್ನವೀರಪ್ಪ ಸೂಲಹಳ್ಳಿಗ್ರಾಮದಸಿಮೆಂಟ್‌ಕಾರ್ಖಾನೆಯ ಪಕ್ಕದಲ್ಲಿರುವ ಕಾಲುವೆಯಲ್ಲಿಕೊಳೆತ ಶವವಾಗಿ ಪತ್ತೆಯಾಗಿದ್ದಾಳೆ. ತಂದೆ ಮೇಲಿನಸೇಡಿಗಾಗಿಪುತ್ರಿಯನ್ನು ಹತ್ಯೆ ಮಾಡಿದ ಆರೋಪದ ಮೇಲೆ ಮಳಖೇಡ ಠಾಣೆಯ ಪೋಲಿಸರು ಓರ್ವನಿಗೆ ಬಂಧಿಸಿ ವಿಚಾರಣೆ ಮಾಡುತ್ತಿದ್ದಾರೆ.






ಪ್ರಕರಣದಲ್ಲಿ ಮಂಜುನಾಥ ಎಂಬ ಆರೋಪಿಯನ್ನು ಬಂಧಿಸಲಾಗಿದೆ.ಬಂಧಿತ ವ್ಯಕ್ತಿಯು ಕೊಲೆ ಮಾಡಿರುವ ಕುರಿತು ವಿಚಾರಣೆಯ ವೇಳೆ ಒಪ್ಪಿದ್ದಾನೆ. ಯುವತಿಯ ತಲೆಗೆ ಕಬ್ಬಿಣದ ರಾಡ್‌ನಿಂದ ಹೊಡೆದು ಬರ್ಬರ ಹತ್ಯೆ ಮಾಡಿದ್ದ ಎನ್ನಲಾಗಿದೆ. ಆರಂಭದಲ್ಲಿ ಭಾಗ್ಯಶ್ರೀಯನ್ನು ಕತ್ತು ಬಿಗಿದು ಉಸಿರುಗಟ್ಟಿಸಿ ಕೊಲೆಗೈದಿರುವ ಶಂಕೆ ವ್ಯಕ್ತವಾಗಿತ್ತು. ಆದಾಗ್ಯೂ, ಪ್ರಾಥಮಿಕ ತನಿಖೆಯಲ್ಲಿ ಕಬ್ಬಿಣದ ರಾಡ್‌ನಿಂದ ತಲೆಗೆ ಹೊಡೆದು ಹತ್ಯೆ ಮಾಡಲಾಗಿದೆ ಎಂಬುದು ಬೆಳಕಿಗೆ ಬಂದಿದೆ. ಕಳೆದ ಸೆಪ್ಟೆಂಬರ್ 11ರಂದು ತನ್ನ ಅಕ್ಕನ ಜೊತೆ ಪ್ರತಿನಿತ್ಯದಂತೆ ರಾತ್ರಿ 8 ಗಂಟೆಗೆ ವಾಯು ವಿಹಾರಕ್ಕೆ ಭಾಗ್ಯಶ್ರೀ ಹೋಗಿದ್ದಳು. ಆ ವೇಳೆ ಆಕೆಯ ಅಕ್ಕ ಕಿರಾಣಿ ಅಂಗಡಿಗೆ ದಿನಸಿ ತರಲು ಹೋಗಿ ಬರುವಷ್ಟರಲ್ಲಿ ಭಾಗ್ಯಶ್ರೀ ನಾಪತ್ತೆಯಾಗಿದ್ದಳು. ಅದಾದ ಬಳಿಕ ಈಕೆಯ ಕುಟುಂಬಸ್ಥರು ಮಳಖೇಡ ಪೊಲೀಸ್ ಠಾಣೆಗೆ ಹೋಗಿ ಭಾಗ್ಯಶ್ರೀ ಕಾಣೆಯಾಗಿರುವ ಕುರಿತು ದೂರು ದಾಖಲಿಸಿದ್ದರು. ಪೊಲೀಸರು ಆಕೆಯ ಹುಡುಕಾಟ ನಡೆಸುತ್ತಿರುವಾಗಲೇ ಶುಕ್ರವಾರ ಬೆಳಿಗ್ಗೆ ಮಳಖೇಡದ ಸಿಮೆಂಟ್ ಕಾರ್ಖಾನೆ ಪಕ್ಕದಲ್ಲಿನ ನಾಲೆಯಲ್ಲಿ ಭಾಗ್ಯಶ್ರೀ ಮೃತದೇಹ ಕೊಳೆತ ಸ್ಥಿತಿಯಲ್ಲಿ ಪತ್ತೆಯಾಗಿದೆ. ಕಳೆದ ಒಂದು ತಿಂಗಳ ಹಿಂದೆ ಕೊಲೆ ಆರೋಪಿ ಮಂಜುನಾಥನ ಸಹೋದರ ವಿನೋದ್ ಸಿಮೆಂಟ್ ಕಾರ್ಖಾನೆಯಲ್ಲಿ ನೌಕರಿ ಖಾಯಂ ಆಗದ ಹಿನ್ನೆಲೆ ಆತ್ಮಹತ್ಯೆ ಮಾಡಿಕೊಂಡಿದ್ದ. ಘಟನೆಯಲ್ಲಿ ಕಾರ್ಮಿಕ ಸಂಘದ ಅಧ್ಯಕ್ಷ ಚನ್ನವೀರಪ್ಪ ಸುಲಹಳ್ಳಿ ಕಾರಣ ಎಂದು ವಿನೋದನ ಕುಟುಂಬ ಆರೋಪ ಮಾಡಿತ್ತು. ನಮ್ಮ ಮಗನ ಆತ್ಮಹತ್ಯೆಗೆ ಚನ್ನವೀರಪ್ಪನೇ ಹೊಣೆ ಎಂದು ಕುಟುಂಬದವರು ಆಕ್ರೋಶ ವ್ಯಕ್ತಪಡಿಸಿದ್ದರು. ಅದೇ ಕಾರ್ಖಾನೆಯಲ್ಲಿ ಯೂನಿಯನ್ ಲೀಡರ್ ಆಗಿದ್ದ ಭಾಗ್ಯಶ್ರೀ ತಂದೆ ವಿನೋದ್ ನೌಕರಿ ಖಾಯಂ ಆಗದಂತೆ ಮಾಡಿದ್ದ. ಹೀಗಾಗಿ ವಿನೋದ್ ಆತ್ಮಹತ್ಯೆ ಮಾಡಿಕೊಂಡಿದ್ದ. ಆತನ ಸಾವಿಗೆ ಪ್ರತೀಕಾರವಾಗಿ ಚೆನ್ನಬಸಪ್ಪ ಅವರ ಪುತ್ರಿ ಭಾಗ್ಯಶ್ರೀಯನ್ನ ಕೊಲೆ ಮಾಡಿರುವುದು ವಿಚಾರಣೆ ವೇಳೆ ಬೆಳಕಿಗೆ ಬಂದಿದೆ. ಇನ್ನು ಕೊಲೆ ಆರೋಪಿ ಮಂಜುನಾಥ್ ಸಹ ಚೆನ್ನಬಸಪ್ಪ ಮನೆಯ ಓರ್ವ ಸದಸ್ಯರನ್ನು ಕೊಲೆ ಮಾಡುವುದಾಗಿ ಗ್ರಾಮಸ್ಥರ ಮುಂದೆ ಹೇಳಿದ್ದನಂತೆ. ಆಗ ಗ್ರಾಮಸ್ಥರು ಮಂಜುನಾಥಗೆ ಬುದ್ಧಿ ಮಾತು ಹೇಳಿದರೂ ಸಹ ಪ್ರಯೋಜನವಾಗಿಲ್ಲ. ಪೋಲಿಸರ ಪ್ರಾಥಮಿಕ ತನಿಖೆಯ ಪ್ರಕಾರ ಭಾಗ್ಯಶ್ರೀ ಹಾಗೂ ಮಂಜುನಾಥ ನಡುವೆ ಸ್ನೇಹ ಇದ್ದುದರಿಂದ ಆಕೆಯು ಆತನೊಂದಿಗೆ ಸಲುಗೆಯಿಂದ ಮಾತನಾಡುತ್ತಿದ್ದಳು. ಕೊನೆಗೆ ಅದೇ ಕ್ರೂರ ಹತ್ಯೆಗೆ ಮುಳುವಾಯಿತೇ ಎಂಬುದರ ಕುರಿತು ಪೋಲಿಸರು ತನಿಖೆ ಕೈಗೊಂಡಿದ್ದಾರೆ.ಪ್ರಕರಣದಲ್ಲಿ ಮಂಜುನಾಥನ ತಂದೆ, ದೊಡ್ಡಪ್ಪ ಹಾಗೂ ಮತ್ತೊಬ್ಬ ಸಹೋದರ ಕೂಡ ಭಾಗಿಯಾಗಿರುವ ಶಂಕೆ ವ್ಯಕ್ತವಾಗಿದೆ.

## ಕಳ್ಳರಿಗೆ ಕಳ್ಳತನ ಬಗ್ಗೆ ಗೊತ್ತಿರುತ್ತೆ ರಾಹುಲ್ ವಿರುದ್ಧ ಶೋಭಾ ವಾಗ್ದಾಳಿ

ಮಲ್ಲಮ್ಮ ನುಡಿ ವಾರ್ತೆ ಬೀದರ್:ಸೆ.19: ಕಳ್ಳತನ ಮಾಡುವವರಿಗೆ ಕಳ್ಳತನದ ಕುರಿತು ಗೊತ್ತಿರುತ್ತದೆ. ರಾಹುಲ್ ಗಾಂಧಿ ಅವರನ್ನೇ ತನಿಖೆ ಮಾಡಿದರೆ ಎಲ್ಲವೂ ಗೊತ್ತಾಗುತ್ತದೆ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಟೀಕಿಸಿದ್ದಾರೆ.ಬೀದರ್ ನಲ್ಲಿಮಾತನಾಡಿದ ಅವರು, ದೇಶದ ಮೇಲೆ ಅಪನಂಬಿಕೆ ಬರುವ ರೀತಿಯಲ್ಲಿ ಮಾಡುವುದು ರಾಹುಲ್ ಗಾಂಧಿ ವಿಚಾರ. ದೇಶದಲ್ಲಿ ಕಲಹಸೃಷ್ಟಿ ಮಾಡಿ ಅಶಾಂತಿ ಹುಟ್ಟಿಸುವುದು ಕಾಂಗ್ರೆಸ್‌ನ ಉದ್ದೇಶ.ಇದರ ಹಿಂದೆ ಜಾರ್ಜ್ ಸೊರೊಸ್ ಇದ್ದಾರೆ, ಅವರ ಉದ್ದೇಶ ಅಶಾಂತಿ ಹುಟ್ಟಿಸುವುದು. ಅಮೆರಿಕ ಸೇರಿದಂತೆ ಬೇರೆ ಬೇರೆ ದೇಶಗಳು, ಜಾರ್ಜ್ ಸೊರೊಸ್ ಶಾಂತಿ ಕದಡುವ ಉದ್ದೇಶಕ್ಕೆ ಹಣ ನೀಡುತ್ತಾರೆ. ಜಾರ್ಜ್ ಸೊರೊಸ್ ಹಾಗು ರಾಹುಲ್ ಗಾಂಧಿ ಕುರಿತಾಗಿ ತನಿಖೆ ಆಗಬೇಕು ಎಂದರು.ಆಳಂದ ಕ್ಷೇತ್ರದ ಬಗ್ಗೆ ರಾಹುಲ್ ಆರೋಪ ಮಾಡಿದ್ದಾರೆ. ಆಳಂದದಲ್ಲಿ ಗೆದ್ದಿರುವುದು ಕಾಂಗ್ರೆಸ್ ಅಭ್ಯರ್ಥಿ ಅಲ್ಲವೇ. ಸಿದ್ದರಾಮಯ್ಯರ ವರುಣ ಕ್ಷೇತ್ರದಲ್ಲೂ ಮನೆ ಸಂಖ್ಯೆ ಜೀರೊ ಇದೆ. 20-25 ಮತದಾರರ ಪಟ್ಟಿ ನೋಡಿದರೆ ಈಗಲೂ ಜೀರೋ ಜೀರೋ ಮನೆ ನಂ. ಇದೆ.ಮಹದೇವಪುರದಲ್ಲೂ ರಾಹುಲ್ ಗಾಂಧಿ ಆರೋಪ ಮಾಡಿದ್ದರು. ಬಾಡಿಗೆ ಮನೆಯಲ್ಲಿ ಇದ್ದವರು, ಮನೆ ನಂಬರ್ ಎ,ಬಿ,ಸಿ,ಡಿ ಮಾಡಿರ್ತಾರೆ. ಮನೆ ನಂಬರ್ ಸರಿಯಾಗಿ ಫೀಡ್ ಆಗಿರಲ್ಲಾ, ಡಾಟಾ ಆಪರೇಟರ್ ಸರಿಯಾಗಿ ಫೀಡ್ ಮಾಡಿರಲ್ಲ. ಮನೆ ನಂಬರ್ ಎಬಿಸಿಡಿ ಹಾಕಿದರೆ ಆಗುವುದಿಲ್ಲ, ಆಗ ಜೀರೊ ಜೀರೊ ಹಾಕ್ತಾರೆ. ರಾಹುಲ್ ಗಾಂಧಿ ಅವರಿಗೆ ಇದೂ ಅರ್ಥ ಅಗಲ್ಲವೆಂದರೆ ಏನೂ ಹೇಳುವುದು. ಲೋಕಸಭಾ ವಿಪಕ್ಷ ನಾಯಕನಾಗಿ ರಾಹುಲ್



ಗಾಂಧಿಗೆಸಾಮಾನ್ಯ ಜ್ಞಾನಇಲ್ಲವೆಎಂದುಕಿಡಿಕಾರಿದರು.ಮಾಲೂರುಕಾಂಗ್ರೆಸ್ ಶಾಸಕರನ್ನು ಕೋರ್ಟ್ ಅಸಿಂಧುಗೊಳಿಸಿದ್ದು ಯಾಕೆ. ಇದಕ್ಕೆ ರಾಹುಲ್ ಗಾಂಧಿ ಉತ್ತರ ನೀಡಬೇಕು. ಮೋಸ ಮಾಡಿದವರು ಯಾರು, ಮೋಸ ಮಾಡಿ 135 ಸ್ಥಾನಗೆದ್ದವರುಕಾಂಗ್ರೆಸ್. ಮಾಲೂರಿನಲ್ಲಿಮೋಸಮಾಡಿಗೆದ್ದವರುಕಾಂಗ್ರೆಸ್ ನವರು. ರಾಜ್ಯದ ಕಾಂಗ್ರೆಸ್ ಸದ್ಯ ಬರ್ಬಾದ್ ಆಗಿದೆ ಎಂದರು.ತೆಲಂಗಾಣ ಸರ್ಕಾರ ಇತ್ತಿಚೆಗೆ ಬಂದಿದೆ. ಆದರೆ ರಾಜ್ಯ ಸರ್ಕಾರ ಬಂದು 2.5 ವರ್ಷ ಮೇಲೆ ಆಗಿದೆ. ಯಾವುದಕ್ಕೂ ದುಡ್ಡಿಲ್ಲಾ, ಎಲ್ಲಾ ಕಂಪನಿಗಳು ಬೆಂಗಳೂರು ಬಿಟ್ಟು ಹೋಗುತ್ತಿವೆ. ರಸ್ತೆ ಗುಂಡಿಗಳನ್ನು ಮುಚ್ಚಲು ಕಾಂಗ್ರೆಸ್ ಬಳಿ ಹಣವಿಲ್ಲ, ಬಸ್ ಓಡಿಸಲು ಹಣವಿಲ್ಲ, ನೀವು ಮೊದಲು ಖರ್ಚಿ ಬಿಟ್ಟು ತೊಲಗಿ ಎಂದು ಶೋಭಾ ಆಗ್ರಹಿಸಿದ್ದಾರೆ.

## ದಸರಾಗೆ ಬಾನು ಮುಷ್ತಾಕ್‌ಗೆ ಆಹ್ವಾನ: ಸುಪ್ರೀಂನಲ್ಲಿ ಅರ್ಜಿ ವಜಾ

ಮಲ್ಲಮ್ಮ ನುಡಿ ವಾರ್ತೆ ನವದೆಹಲಿ, ಸೆ.19- ವಿಶ್ವ ವಿಖ್ಯಾತಮೈಸೂರು ದಸರಾ ಉದ್ಘಾಟನೆಗೆಅಂತರರಾಷ್ಟ್ರೀಯಬೂಕರ್ ಪ್ರಶಸ್ತಿ ವಿಜೇತೆ ಬಾನು ಮುಷ್ತಾಕ್ ಅವರನ್ನುಆಹ್ವಾನಿಸಿರುವ ಕರ್ನಾಟಕಸರ್ಕಾರದನಿರ್ಧಾರವನ್ನು ಪ್ರಶ್ನಿಸಿಸಲ್ಲಿಸಲಾಗಿದ್ದಅರ್ಜಿಯನ್ನು ಸುಪ್ರೀಂ ಕೋರ್ಟ್ ಇಂದುವಜಾಗೊಳಿಸಿದೆ.ಕರ್ನಾಟಕ ಹೈಕೋರ್ಟ್ ನೀಡಿದ್ದಆದೇಶವನ್ನು ಎತ್ತಿ ಹಿಡಿದಿದೆ.

**ಏಷ್ಯಾ ಕಪ್:ಕ್ರಿಕೇಟ್ ಕಪ್ ಟೂರ್ನಿಯಲ್ಲಿ ಒಂದೇ ಓವರ್‌ನಲ್ಲಿ ಅಫಘಾನಿಸ್ಥಾನ ಆಟಗಾರ ಮೊಹಮ್ಮದ್ ನಬಿ 5 ಸಿಕ್ಸರ್ ಸಿಡಿಸಿದ್ದಾರೆ**

# ಧರ್ಮದ ಕಾಲಂನಲ್ಲಿ ಲಿಂಗಾಯತ ಎಂದು ಬರೆಸಿ: ಶ್ರೀಕಾಂತ ಸ್ವಾಮಿ




ಬೀದರ. ಸೆ. 19 : ಧರ್ಮದ ಕಾಲಂನಲ್ಲಿ ಹಿಂದೂ ಬದಲು ಲಿಂಗಾಯತ ಎಂದು ಬರೆಸುವಂತೆ ಅಖಿಲ ಭಾರತ ಲಿಂಗಾಯತ ಸಮನ್ವಯ ಸಮಿತಿಯ ರಾಜ್ಯ ಸಂಚಾಲಕ ಶ್ರೀಕಾಂತ ಸ್ವಾಮಿ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಶುಕ್ರವಾರ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ಧರ್ಮದ ಕಾಲಂನಲ್ಲಿ 11ನೇ ಕಾಲಂನಲ್ಲಿರುವ ಇತರೆ ಧರ್ಮ ಎಂಬ ಕಾಲಂನಲ್ಲಿ ಲಿಂಗಾಯತ ಎಂದು ಬರೆಸಬೇಕು.

ನಿಮ್ಮ ಮೂಲ ಕಸುಬಿರುವ ಲಿಂಗಾಯತರು ಜಾತಿ ಕಾಲಂನಲ್ಲಿ ತಮ್ಮ ತಮ್ಮ ಜಾತಿಯನ್ನು ಮತ್ತು ಉಪಜಾತಿಯನ್ನು ಬರೆಸಬೇಕೆಂದು ಕರೆ ನೀಡಿದರು.

1994ರಲ್ಲಿಯೇ ಲಿಂ. ಮಾತೆ ಮಹಾದೇವಿಯವರು ಆ ಸಂದರ್ಭದಲ್ಲಿಯೇ ಲಿಂಗಾಯತ ಧರ್ಮಕ್ಕೆ ಪ್ರಾಧಾನ್ಯತೆ ನೀಡಬೇಕೆಂದು ರಾಜ್ಯ ಸರ್ಕಾರದ ಮೇಲೆ ಒತ್ತಡ ಹೇರಿದ್ದರು. 1999–2000ನೇ ಇಸವಿಯಲ್ಲಿ ಲಿಂಗಾಯತ ಧರ್ಮದ ಸ್ವತಂತ್ರ ಧರ್ಮದ ಮಾನ್ಯತೆಗಾಗಿ ದೊಡ್ಡ ಪ್ರಮಾಣದ ಹೋರಾಟ ಸಹ ಮಾಡಿದ್ದೇವು. ನಂತರ 2017ರಲ್ಲಿ ಮಾತಾಜಿಯವರ ನೇತೃತ್ವದಲ್ಲಿಯೇ ಪ್ರತ್ಯೇಕ ಲಿಂಗಾಯತ ಧರ್ಮಕ್ಕಾಗಿ ಬೃಹತ್ ಹೋರಾಟ ಬೀದರನಲ್ಲಿ ಜರುಗಿತ್ತು.

ಪ್ರಸ್ತುತದಲ್ಲಿ ರಾಜ್ಯದಲ್ಲಿ ಎರಡು ಕೋಟಿಗೂ ಅಧಿಕ ಲಿಂಗಾಯತ ಸಮುದಾಯವಿದ್ದರೂ ಕಾಂತರಾಜು ವರದಿಯಲ್ಲಿ ಕೇವಲ 60 ರಿಂದ 75 ಲಕ್ಷ ಮಾತ್ರ ಲಿಂಗಾಯತರಿದ್ದಾರೆ ಎಂದು ಗುರುತಿಸಲಾಗಿದೆ. ನಮ್ಮಲ್ಲಿನ ಭಿನ್ನಾಭಿಪ್ರಾಯಗಳಿಂದ ಹಾಗೂ ಅರಿವಿನ ಕೊರತೆಯಿಂದ ಬೇರೆ ಬೇರೆ ರೀತಿಯಲ್ಲಿ ಬರೆಸಿದ್ದರಿಂದ ಸಮುದಾಯದ ಜನಸಂಖ್ಯೆ ಕ್ಷೀಣಿಸಿದೆ.

ಮತ್ತೆ ಇದು ಪುನರಾವರ್ತನೆಯಾಗದಿರಲು ಎಲ್ಲರೂ ಒಗ್ಗಟ್ಟು ಪ್ರದರ್ಶಿಸಿ ಇತರೆ ಧರ್ಮದ ಕಾಲಂನಲ್ಲಿ ಲಿಂಗಾಯತ ಎಂದು ಕಡ್ಡಾಯವಾಗಿ ನಮೂದಿಸುವಂತೆ ಕರೆ ನೀಡಿದರು.

12ನೇ ಶತಮಾನದಲ್ಲಿ ಎಲ್ಲಾ ಜಾತಿ ಲಿಂಗ ವರ್ಗ ವರ್ಣದವರು ಬಸವಾದಿ ಶರಣರು ಸೇರಿ ಸ್ಥಾಪಿಸಿದ ವಿಶ್ವದ ಪ್ರಪ್ರಥಮ ಸಮಾನತೆ, ವೈಚಾರಿಕತೆ, ಪ್ರಜಾಪ್ರಭುತ್ವ ಮಾದರಿ ಧರ್ಮವೆಂದರೆ ಲಿಂಗಾಯತ ಧರ್ಮ.

ಈ ಧರ್ಮದಲ್ಲಿ ಸುಮಾರು 92 ಒಳಪಂಗಡಗಳನ್ನೊಳಗೊಂಡ ಲಿಂಗಾಯತ ಧರ್ಮ ಬಾಂಧವರಿದ್ದಾರೆ. ಈ ಹಿನ್ನೆಲೆಯಲ್ಲಿ ಲಿಂಗಾಯತ ಧರ್ಮಿಯರು ಬಸವಾದಿ ಶರಣರ ಸಂಕುಲದವರು ಪ್ರಸ್ತುತ ಸಾಮಾಜಿಕ ಮತ್ತು ಶೈಕ್ಷಣಿಕ ಗಣತಿಯಲ್ಲಿ 11ನೇ ಕಾಲಂನಲ್ಲಿ ಲಿಂಗಾಯತ ಎಂದು ಬರೆಸುವ ಮೂಲಕ ನಮಗೆ ಸಿಕ್ಕಿರುವ ಈ ಅವಕಾಶ ಸದುಪಯೋಗ ಮಾಡಿಕೊಳ್ಳೋಣ.

ಯಾವುದೇ ಕಾರಣಕ್ಕೂ ದಾರಿ ತಪ್ಪಿಸುವ ಅನ್ಯರ ಮಾತಿಗೆ ಕಿವಿಗೊಡದೆ ಲಿಂಗಾಯತ ಎಂಉ ಮಾತ್ರ ಬರೆಸಬೇಕು. ಲಿಂಗಾಯತ ಧರ್ಮದ ಅಸ್ಮಿತತೆ ಮತ್ತು ಆಸ್ತಿತ್ವವನ್ನು ಕಾಪಾಡಿಕೊಂಡು ಅದನ್ನು ಉಳಿಸಿ ಬೆಳೆಸೋಣ, ಭವಿಷ್ಯದಲ್ಲಿ ಲಿಂಗಾಯತ ಧರ್ಮದ ಮಕ್ಕಳ ಉಜ್ವಲ ಭವಿಷ್ಯಕ್ಕಾಗಿ ಇದನ್ನು ಗಂಭೀರವಾಗಿ ತೆಗೆದುಕೊಳ್ಳಬೇಕಿದೆ ಎಂದರು.

ಇದೇ ವೇಳೆ ಬಸವ ಮಂಟಪದ ಪೂಜ್ಯ ಶ್ರೀ ಸದ್ಗುರು ಮಾತೆ ಸತ್ಯಾದೇವಿ, ಪ್ರಮುಖರಾದ ಶಿವರಾಜ ಪಾಟೀಲ ಅತಿವಾಳ, ಬಸವಂತರಾವ ಬಿರಾದಾರ, ರವಿಕಾಂತ ಬಿರಾದಾರ, ಮಲ್ಲಿಕಾರ್ಜುನ್ ಬುಕ್ಕಾ, ವಿಶ್ವನಾಥ ಪಾಟೀಲ ಗೊಂದೆಗಾವ, ಓಂಪ್ರಕಾಶ ರೊಟ್ಟೆ, ಸತೀಶ ಪಾಟೀಲ ಹಾಗೂ ಇತರರು ಇದ್ದರು.



ಅಕ್ಟೋಬರ್ 11ರಿಂದ ಬಸವಕಲ್ಯಾಣದಲ್ಲಿ 4ನೇ ಸ್ವಾಭಿಮಾನಿ ಕಲ್ಯಾಣ ಪರ್ವ: 25 ಸಾವಿರ ಬಸವ ಭಕ್ತರು ಭಾಗಿ:

ಚನ್ನಬಸವಾನಂದ ಶ್ರೀ ಅ. 11 ಮತ್ತು 12 ರಂದು ಎರಡು ದಿವಸಗಳ ಕಾಲ ಬಸವಕಲ್ಯಾಣದ ಸಸ್ತಾಪುರ ಬಂಗ್ಲಾ ಹತ್ತಿರದ ಬಸವೇಶ್ವರ ಭವ್ಯ ಕಮಾನ್ ಹತ್ತಿರ ಇರುವ ಎಂ.ಎಂ.ಬೇಗ್ ಕಲ್ಯಾಣ ಮಂಟಪದಲ್ಲಿ 4ನೇ ಸ್ವಾಭಿಮಾನಿ ಕಲ್ಯಾಣ ಪರ್ವ ಹಮ್ಮಿಕೊಳ್ಳಲಾಗಿದ್ದು, ದೇಶದ ನಾನಾ ಕಡೆಗಳಿಂದ ಸುಮಾರು 25 ಸಾವಿರಕ್ಕೂ ಅಧಿಕ ಬಸವ ಭಕ್ತರು ಪಾಲ್ಗೊಳ್ಳುವ ನಿರೀಕ್ಷೆಯಿದೆ ಎಂದು ಸ್ವಾಭಿಮಾನಿ ಕಲ್ಯಾಣ ಪರ್ವ ಉತ್ಸವ ಸಮಿತಿಯ ಅಧ್ಯಕ್ಷ ಪೂಜ್ಯ ಶ್ರೀ ಜಗದ್ಗುರು ಡಾ. ಚನ್ನಬಸವಾನಂದ ಸ್ವಾಮೀಜಿ ತಿಳಿಸಿದರು.

ಶುಕ್ರವಾರ ಪತ್ರಿಕಾ ಭವನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ವರ್ಷದ ಸ್ವಾಭಿಮಾನಿ ಕಲ್ಯಾಣ ಪರ್ವ ಸಹ ಯಶಸ್ಸು ಕಾಣಲಿದೆ. ಬಸವಣ್ಣನವರ ಕಾಲದಲ್ಲಿ ಗಣಪರ್ವ ಎಂದು ಆಚರಿಸಲಾಗುತ್ತಿತ್ತು. ಈಗ ನಾವು ಬಸವಣ್ಣನವರ ವಿಚಾರಗಳನ್ನು ಮೈಗೂಡಿಸಿಕೊಂಡು ಸ್ವಾಭಿಮಾನಿ ಕಲ್ಯಾಣ ಪರ್ವ ಎಂದು ಆಚರಿಸುತ್ತಿದ್ದೇವೆ. ಅ. 11 ರ ಬೆ. 11 ಗಂಟೆಗೆ ಉದ್ಘಾಟನಾ ಸಮಾರಂಭ ಜರುಗಲಿದ್ದು, ಅಂದು ಬೆಳಿಗ್ಗೆ 5 ಗಂಟೆಗೆ ಸುಪ್ರಭಾತ ಸಮಯದಲ್ಲಿ ಸಾಮೂಹಿಕ ಇಷ್ಟಲಿಂಗ ಪೂಜೆ, ಬಸವ ಚಿಂತನ ಪ್ರಭೆಯ ಮೂಲಕ ವೇದಿಕೆಯ ದೈವೀಕರಣ ನಡೆಯಲಿದೆ. ಅಂದು ಸಾ. 5 ಗಂಟೆಗೆ ಧರ್ಮಚಿಂತನ ಗೋಷ್ಠಿ– 1 ಜರುಗಲಿದೆ. ಅ. 12 ರಂದು ಬೆಳಿಗ್ಗೆ 8 ಗಂಟೆಗೆ ಸಾಮೂಹಿಕ ಪ್ರಾರ್ಥನೆ, ಇಷ್ಟಲಿಂಗ ಪೂಜೆ ಹಾಗೂ ಬೆ. 10–30 ಕ್ಕೆ ಶರಣ ವಂದನೆ 770 ಶರಣರಿಗೆ ಶರಣಾರ್ಥಿ ಹೃದಯಸ್ಪರ್ಶಿ ಕಾರ್ಯಕ್ರಮ ನಡೆಯಲಿದೆ.

ಮ. 12 ರಿಂದ 2 ರ ವರೆಗೆ ಮಹಿಳಾಗೋಷ್ಠಿ ಮ. 3 ರಿಂದ 5 ರ ವರೆಗೆ ಯುವಗೋಷ್ಠಿ ಹಾಗೂ ಸಾಯಂಕಾಲ ಸಮಾರೋಪ ಸಮಾರಂಭ ಜರುಗಲಿದೆ. ಹೀಗಾಗಿ ಈ ಎರಡು ದಿವಸಗಳ ಕಾಲ ಬಸವಕಲ್ಯಾಣದ ಭವ್ಯ ಸ್ವಾಗತ ಕಮಾನ್ ಹತ್ತಿರ ಇರುವ ಬೇಗ್ ಸಭಾಮಂಟಪದ ಆವರಣದಲ್ಲಿ "ಸ್ವಾಭಿಮಾನಿ ಕಲ್ಯಾಣ ಪರ್ವ"ಕ್ಕೆ ಆಗಮಿಸುವ ಶರಣ ಬಂಧುಗಳಿಗಾಗಿ ಪ್ರಸಾದದ ವ್ಯವಸ್ಥೆ, ವಸತಿ ವ್ಯವಸ್ಥೆ ಇರುತ್ತದೆ. ಭವ್ಯ ಸಭಾಮಂಟಪ, ಶಾಮಿಯಾನಾ, ಕೊಠಡಿಗಳು, ವಿಶಾಲವಾದ ಪ್ರಸಾದದ ಮಂಟಪ ಮುಂತಾದವುಗಳ ವ್ಯವಸ್ಥೆ ಮಾಡಲು ಅಪಾರವಾದ ಹಣದ ಅವಶ್ಯಕತೆ ಇರುತ್ತದೆ. ದಾನಿಗಳು ಉದಾರವಾಗಿ ಧನಸಹಾಯ ಮಾಡಲು ಅವಕಾಶವಿರುತ್ತದೆ ಎಂದು ಸ್ವಾಮೀಜಿ ತಿಳಿಸಿದರು.



ಕಮಲನಗರ : ಪಟ್ಟಣದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ, ವಿಶ್ವಾಸನಗರ ನಲ್ಲಿ ಕಲ್ಯಾಣ ಕರ್ನಾಟಕ ದಿನಾಚರಣೆ ಆಚರಿಸಲಾಯಿತು ಹಾಗೂ ವಿಶ್ವಕರ್ಮ ಜಯಂತಿಯನ್ನು ಆಚರಿಸಲಾಯಿತು . ಈ ಸಂದರ್ಭದಲ್ಲಿ ವಲಯ ಸಂಪನ್ಮೂಲ ವ್ಯಕ್ತಿ ನಾಗೇಶ್ ಸಂಗಮೆ ಮುಖ್ಯ ಗುರುಗಳು ಲಲಿತ ಸ್ವಾಮಿ ಸಹ ಶಿಕ್ಷಕಿ ರಾಹು ಹಾಗೂ ಎಸ್ ಡಿ ಎಮ್ ಸಿ ಅಧ್ಯಕ್ಷರು ಹಾಗೂ ಮಕ್ಕಳು ಇದ್ದರು.

# ತ್ಯಾಗ ಬಲಿದಾನದ ಪ್ರತೀಕ ಕಲ್ಯಾಣ ಕರ್ನಾಟಕ ಉತ್ಸವ : ಮನೋಜ ಹಿರೇಮಠ




ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಸೆ.19:ಹೈದರಾಬಾದ್ ನಿಜಾಮನ ದಬ್ಬಾಳಿಕೆ ವಿರುದ್ಧ ನಡೆದ ಹೋರಾಟ ನೂರಾರು ಜನರ ತ್ಯಾಗ, ಬಲಿದಾನದ ಪ್ರತೀಕವಾಗಿದೆ ಈ ಕಲ್ಯಾಣ ಕರ್ನಾಟಕ ಉತ್ಸವ ಎಂದು ಮುಖ್ಯ ಶಿಕ್ಷಕ ಮನೋಜಕುಮಾರ ಹಿರೇಮಠ ಹೇಳಿದರು.

ಪಟ್ಟಣದ ಭಾಗಿರಥಿ ಪಬ್ಲಿಕ್ ಶಾಲೆಯಲ್ಲಿ ಬುಧವಾರ ಕಲ್ಯಾಣ ಕರ್ನಾಟಕ ಉತ್ಸವ ಮತ್ತು ವಿಶ್ವಕರ್ಮ ದಿನಾಚರಣೆ ಅಂಗವಾಗಿ ಹಮ್ಮಿಕೊಂಡ ಕಾರ್ಯಕ್ರಮದಲ್ಲಿ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು.

ಕಲ್ಯಾಣ ಕರ್ನಾಟಕ ಭಾಗದ ಜನರು ಮೊದಲು ಬ್ರಿಟಿಷರ ವಿರುದ್ಧ ಹೋರಾಡಿದರೇ, ನಂತರ ನಮ್ಮದೇ ದೇಶದ ಹೈದರಾಬಾದ್ ನಿಜಾನ ವಿರುದ್ಧ ಹೋರಾಡಿ ಸ್ವಾತಂತ್ರ್ಯ ಪಡೆಯಬೇಕಾಯಿತು. ಕಲ್ಯಾಣ ಕರ್ನಾಟಕ ಸೇರಿದಂತೆ ಹೈದರಾಬಾದ್ ಪ್ರಾಂತ್ಯಕ್ಕೆ ಸ್ವಾತಂತ್ರ್ಯ ಸಿಗಲು ಕಾರಣೀಭೂತರಾಗಿದ್ದು, ಉಕ್ಕಿನ ಮನುಷ್ಯ ಸರ್ದಾರ್ ವಲ್ಲಭಬಾಯಿ ಪಟೇಲರು ಎಂದರು.

ಡಾ. ಅಜಿತಕುಮಾರ ಶಾಸ್ತ್ರೀ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಅವರು ಭಾವಚಿತ್ರಗಳಿಗೆ ಪೂಜೆ ಸಲ್ಲಿಸಿದ ನಂತರ ಮಾತನಾಡಿ, ವಿಶ್ವಕರ್ಮ ದೇವತೆಗಳಿಗೆ ಆಯುಧಗಳು, ರಥಗಳನ್ನು ವಿನ್ಯಾಸಗೊಳಿಸಿದ ಆದಿಗುರು. ಇವರನ್ನು ಪೂಜಿಸುವುದರಿಂದ ಕೆಲಸದಲ್ಲಿ ಸಮೃದ್ಧಿ ಮತ್ತು ಯಶಸ್ಸು ಸಿಗುತ್ತದೆ ಎಂದು ನಂಬಲಾಗಿದೆ ಎಂದು ಹೇಳಿದರು.

ಶಿಕ್ಷಕಿ ಶ್ರೀದೇವಿ ಸೋನಕಾಂಬಳೆ, ಸಂಗೀತಾ ಕಾಂಬಳೆ, ದೀಪಮಾಲಾ ಸೂರ್ಯವಂಶಿ, ರಾಜಶ್ರೀ ಸಿರಗಿ–ರೆ, ಶೀತಲ ಹಂಗರಗೆ, ಅಚಿಜಲಿ ಕಾಂಬಳೆ, ಅಂಬಿಕಾ ಗಾಯಕವಾಡ್, ಮಲ್ಲಿಕಾರ್ಜುನ ಮೇತ್ರೆ, ಪಂಚಫುಲಾ, ಅಶ್ವೀನಿ ಮನೋಜ ಹಾಗೂ ಮಕ್ಕಳು ಇದ್ದರು.

ಪ್ರತಿಭಾವಂತ ವಿದ್ಯಾರ್ಥಿಗಳಾದ ಅಭಿಜೀತ ಜಗನ್ನಾಥ, ಅರ್ಪಿತಾ, ಶೀತಲ ಮೊದಲಾದವರು ಕಲ್ಯಾಣ ಕರ್ನಾಟಕ ಉತ್ಸವ ಕುರಿತು ಭಾಷಣ ಮಾಡಿದರು.

# ಜಾತಿ ಕಾಲಂನಲ್ಲಿ ಕಡ್ಡಾಯವಾಗಿ ಮಡಿವಾಳ ಎಂದು ಬರೆಸಿ: ರಾಜ್ಯಾಧ್ಯಕ್ಷ ಸಿ.ನಂಜಪ್ಪ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಸೆ. 19: ಧರ್ಮದ ಕಾಲಂನಲ್ಲಿ ಹಿಂದೂ ಎಂದು, ಜಾತಿ ಕಾಲಂನಲ್ಲಿ ಮಡಿವಾಳ ಎಂದು ಬರೆಸುವಂತೆ ಮಡಿವಾಳ ಸಮಾಜದ ರಾಜ್ಯಾಧ್ಯಕ್ಷರಾದ ಸಿ.ನಂಜಪ್ಪ ತಿಳಿಸಿದರು. ಶುಕ್ರವಾರ ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ರ್ನಾಟಕ ರಾಜ್ಯ ಹಿಂದುಳಿದ ರ್ಗಗಳ ಆಯೋಗ 2025ರ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ರ್ನಾಟಕ ರಾಜ್ಯಾದ್ಯಂತ ಹಮ್ಮಿಕೊಂಡಿದ್ದು ಗಣತಿದಾರರು ಮನೆಗೆ ಬಂದಾಗ ಸಮಾಜದ ಕುಲಬಾಂದವರು ಜಾತಿ ಕಾಲಂ–9 ರಲ್ಲಿ ರ್ಕಾರದ ಗೆಜ–'ಟ್ ನಂ. ೦–903 ಮಡಿವಾಳ ಎಂಬುದಾಗಿ ಕಡ್ಡಾಯವಾಗಿ ನಮೂದಿಸಬೇಕೆಂದು ತಿಳಿಸಿದರು. ಮಡಿವಾಳ ಸಮಾಜವನ್ನು ನಾನ ಹೆಸರುಗಳಿಂದ ಗುರುತಿಸಲ್ಪಟ್ಟಿದ್ದು ಅವುಗಳು ಅಗಸ, ಪರಿಟ, ಚಾಕಲ, ದೋಬಿ, ರಜಕ ಇತ್ಯಾದಿ ಹೆಸರುಗಳಿದ್ದು ಅವುಗಳನ್ನು ಬಿಟ್ಟು ಮಡಿವಾಳ ಎಂದು ನೊಂದಾಯಿಸಲು ಹಾಗೂ 60 ಕಾಲಂಗಳಲ್ಲಿ 9ನೇ ಕಾಲಂನಲ್ಲಿ, ಜಾತಿ ಮಡಿವಾಳ ಎಂದು ನೊಂದಾಯಿಸಲು ಹೇಳಿದರು. ರಾಜ್ಯದಲ್ಲಿ ನಮ್ಮ ಸಮಾಜ 13 ಲಕ್ಷ ಜನಸಂಖ್ಯೆ ಹೊಂದಿದ್ದು ಹಿಂದೆ ಸಮೀಕ್ಷೆ ಮಾಡಿದ ಕಾಂತರಾಜ್ ಆಯೋಗವು ಕೇವಲ ಆರು ಲಕ್ಷ 20 ಸಾವಿರ ಜನಸಂಖ್ಯೆ ತೋರಿಸಿತ್ತು. ಅದಕ್ಕಾಗಿ ಮತ್ತೆ ರಾಜ್ಯ ರ್ಕಾರ ದುಪ್ಪಟ್ಟು ಹಣ ರ್ಚು ಮಾಡಿ ಈಗ ಮತ್ತೆ ಸಾಮಾಜಿಕ ಹಾಗೂ ಶೈಕ್ಷಣಿಕ ಸಮೀಕ್ಷೆ ನಡೆಸುತ್ತಿದೆ. ಈಗಾಗಲೇ ಎಂಟುವರೆ ಲಕ್ಷ ನಮ್ಮ ಸಮಾಜದ ಮತಬಾಂಧವರಿದ್ದು ಈ ಸಮೀಕ್ಷೆಯಲ್ಲಿ ರ್ಯಾಯ ಪದಗಳನ್ನು ಬಳಸದೆ ಕೇವಲ ಮಡಿವಾಳ ಎಂದು ಮಾತ್ರ ಬಳಸಲು ರಾಜ್ಯಾದ್ಯಂತ ಕರೆ ಕೊಡಲಾಗಿದೆ. ಈಗಾಗಲೇ ಶಿವಮೊಗ್ಗ, ಚಿತ್ರದರ್ಗ, ಚಿಕ್ಕಮಂಗಳೂರು ಸೇರಿದಂತೆ ರಾಜ್ಯದ ಹಲವೆಡೆ ನಾವು ಪ್ರವಾಸ ಕೈಗೊಂಡು ನಮ್ಮ ಸಮಾಜ ಬಾಂಧವರಿಗೆ ಅರಿವು ಮೂಡಿಸುವ ಕೆಲಸ ಮಾಡುತ್ತಿದ್ದೇವೆ. ಶುಕ್ರವಾರ ಬೀರ್ನಲ್ಲಿ ಈ ಒಂದು ಅಭಿಯಾನ ಹಮ್ಮಿಕೊಂಡು ಕಲಬರ್ಗಿ, ಯಾದಗಿರಿ ರಾಯಚೂರು ಸೇರಿದಂತೆ ರಾಜ್ಯದ ಎಲ್ಲೆಡೆ ಸಂಚರಿಸಿ ಈ ತಿಂಗಳ 22 ರಿಂದ ಕೈಗೊಳ್ಳಲಿರುವ ಸಾಮಾಜಿಕ ಹಾಗೂ ಶೈಕ್ಷಣಿಕ ಸಮೀಕ್ಷೆಯಲ್ಲಿ ನಮ್ಮ ಸಮಾಜ ಬಾಂಧವರು ಕೇವಲ ಮಡಿವಾಳ ಎಂಬುದಾಗಿ ಬರೆಸಲು ನಾವು ಜಾಗೃತಿ ಮೂಡಿಸುತ್ತಿದ್ದೇವೆ. ಈಗಾಗಲೇ ನಮ್ಮ ಸಮಾಜದ ಕರ್ಯರ್ತರು ಎಲ್ಲ ಕಡೆ ಸಂಚರಿಸಿ ಸಮಾಜ ಬಾಂಧವರಿಗೆ ಜಾಗೃತಿ ಉಂಟು ಮಾಡುತ್ತಿರುವರು. ಬೀದರ್ ಜಿಲ್ಲೆಯಲ್ಲೂ ಸಹ ನಮ್ಮ ಸಮಾಜ ಬಾಂಧವರು 35,000 ಕ್ಕಿಂತ ಅಧಿಕ ಜನಸಂಖ್ಯೆ ಹೊಂದಿದ್ದು ಈ ಸಮೀಕ್ಷೆ ಮೂಲಕ ನಾವು ಕೇವಲ ಮಡಿವಾಳ ಎಂದು ಬರೆಸಿದರೆ ನಮಗೆ ಭವಿಷ್ಯದಲ್ಲಿ ಎಲ್ಲ ರೀತಿಯ ಸೌಲತ್ತು ಹಾಗೂ ಮೀಸಲಾತಿ ದೊರೆಯುವ ಸಾಧ್ಯತೆ ಇರುವುದರಿಂದ ಸಮಾಜ ಬಾಂಧವರು ಇದನ್ನು ಗಂಭೀರವಾಗಿ ಪರಿಗಣಿಸಬೇಕಿದೆ ಎಂದರು. ರಾಜ್ಯಕ್ಕೆ ಹೋಲಿಸಿದರೆ ಶಿವಮೊಗ್ಗ ಜಿಲ್ಲೆಯಲ್ಲಿ ನಮ್ಮ ಸಮಾಜ ಬಾಂಧವರು ಅಧಿಕ ಸಂಖ್ಯೆಯಲ್ಲಿ ವಾಸಿಸಿದ್ದು, ಕೇವಲ ಸೊರಬ ತಾಲೂಕಿನಲ್ಲಿಯೇ 28,000 ನಮ್ಮ ಸಮಾಜ ಬಾಂಧವರು ವಾಸಿಸುತ್ತಿರುವರು. ಶಿವಮೊಗ್ಗ, ಜಿಲ್ಲೆಯಲ್ಲಿ ಒಟ್ಟು 35,000 ಕ್ಕಿಂತ ಅಧಿಕ ನಮ್ಮ ಸಮಾಜ ಬಾಂಧವರು ನೆಲೆಯೂರಿದ್ದು, ತಾವೆಲ್ಲರೂ ಕಡ್ಡಾಯವಾಗಿ ಮಡಿವಾಳ ಎಂದೇ ಬರಿಸಬೇಕು ಹಾಗೆ ಇತರರಿಗೂ ಈ ಬಗ್ಗೆ ಅರಿವು ಮೂಡಿಸಬೇಕೆಂದು ಸಿ ನಂಜಪ್ಪ ಕರೆ ಕೊಟ್ಟರು. ಸಮಾಜದ ರಾಜ್ಯ ಪ್ರಧಾನ ಕಾರ್ಯದರ್ಶಿ ಬಿ ಆರ್ ಪ್ರಕಾಶ, ರಾಜ್ಯ ಕರ್ಯಾಧ್ಯಕ್ಷ ಡಿಗಂಬರ ಮಡಿವಾಳ, ಜಿಲ್ಲಾಧ್ಯಕ್ಷ ಸುಭಾಷ ಮಡಿವಾಳ, ಪ್ರಧಾನ ಕಾರ್ಯದರ್ಶಿ ಶಿವಕುಮಾರ ಕಂದಗೊಳ, ತಾಲೂಕ ಅಧ್ಯಕ್ಷ ಮಲ್ಲಿಕಾರ್ಜುನ್ ಕಪಲಾಪುರೆ, ಪ್ರಮುಖರಾದ ನಾಗರಾಜ ಮಡಿವಾಳ, ಧನರಾಜ ಮಡಿವಾಳ ಹಾಗೂ ಇತರರಿದ್ದರು.




# ವಿಶ್ವಕರ್ಮ ಜಯಂತಿ ಆಚರಣೆ: ಸಮುದಾಯ ರಾಜಕೀಯ ಅಧಿಕಾರ ಪಡೆಯಬೇಕು



ಕಲಬುರಗಿ,ಸೆ.19: ವಿರಾಟ ಸ್ವರೂಪವನ್ನು ಹೊಂದಿರುವ ವಿಶ್ವಕರ್ಮನು ದೇವಶಿಲ್ಪಿ ಎಂದೇ ಹೆಸರುವಾಸಿಯಾದವನು. ಇಂತಹ ವಿಶ್ವಕರ್ಮ ಸಮುದಾಯಕ್ಕೆ ಸೂಕ್ತ ರಾಜಕೀಯ ಪ್ರಾತಿನಿಧ್ಯ ಇಲ್ಲ. ರಾಜಕಿಂ–ು ಅಧಿಕಾರ ಪಡೆದಿದ್ದಲ್ಲಿ ಮಾತ್ರ ಸಮುದಾಯ ಅಭಿವೃದ್ಧಿ ಹೊಂದಲು ಸಾಧ್ಯ ಎಂದು ಸುಲೆಪೇಟ್ ವಿಶ್ವಕರ್ಮ ಏಕದಂಡಗಿ ಮಠದ ಪೂಜ್ಯ ಶ್ರೀ ದೊಡ್ಡೇಂದ್ರ ಮಹಾಸ್ವಾಮಿಗಳು ಹೇಳಿದರು.

ನಗರದ ಡಾ.ಎಸ್.ಎಂ.ಪಂಡಿತ್ ರಂಗಮಂದಿರದಲ್ಲಿ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಹಾಗೂ ಜಿಲ್ಲಾ ಪಂಚಾಯತ್ ಸಂಯುಕ್ತಾಶ್ರಯದಲ್ಲಿ ವಿಶ್ವಕರ್ಮ ಜಯಂತ್ಯೋತ್ಸವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮತಾಭಿಮಾನ ಬಿಟ್ಟು ಮತಾಭಿಮಾನಕ್ಕೆ ನೀವಿಂದಿಲ್ಲಿ ಒಟ್ಟಾಗಿ ಸೇರಿರುವುದು ಸಂತೋಷ. ಈ ಒಗ್ಗಟ್ಟು ಹೀಗೆ ಮುಂದುವರೆಸಿಕೊಂಡು ಹೋಗಬೇಕು. ಒಗ್ಗಟ್ಟಿನಲ್ಲಿ ಬಲವಿದೆ ಎಂಬುದನ್ನು ಮರೆಯದಿರಿ ಎಂದು ಸಮಾಜ ಬಾಂಧವರಿಗೆ ಕಿವಿಮಾತು ಹೇಳಿದ ಅವರು, ಕುಲಬಾಂಧವರು ವಿವಿಧ ರಂಗದಲ್ಲಿದರೂ ರಾಜಕೀಯದಲ್ಲಿ ಪ್ರಾತಿನಿಧ್ಯ ಸಿಕ್ಕಿಲ್ಲ. ರಾಜಕೀಯ ಅಧಿಕಾರ ಪಡೆಯಬೇಕು. ಇನ್ನು ಮಕ್ಕಳಿಗೆ ಗುಣಮಟ್ಟದ. ಶಿಕ್ಷಣ ಕೊಡಿಸುವಲ್ಲಿ ಹೆತ್ತವರು ಹೆಚ್ಚು ಪ್ರಾಮುಖ್ಯತೆ ನೀಡಬೇಕೆಂದು ಆಶೀರ್ವಚನ ನೀಡಿದರು.

ಅಫಜಲಪೂರಿನ ಪೂಜ್ಯ ಪ್ರಣವ ನಿರಂಜನ ಮಹಾಸ್ವಾಮಿಗಳು ಮಾತನಾಡಿ, ಹಿಂದೂ ಪುರಾಣಗಳ ಪ್ರಕಾರ ಭಗವಾನ್ ವಿಶ್ವಕರ್ಮನನ್ನು ನಾಲ್ಕು ಕೈಗಳಿಂದ, ದೈವಿಕ ಬಾತುಕೋಳಿಯ ಮೇಲೆ ಸವಾರಿ ಮಾಡಿ, ಅಳತೆಯ ಟೇಪ್, ಮಾಪಕ, ಪುಸ್ತಕ ಮತ್ತು ಮಡಕೆಯನ್ನು ಹಿಡಿದಿರುವಂತೆ ಚಿತ್ರಿಸಲಾಗಿದೆ. ಈ ಚಿಹ್ನೆಗಳು ಬ್ರಹ್ಮಾಂಡದ ಪ್ರಧಾನ ವಾಸ್ತುಶಿಲ್ಪಿಯಾಗಿ ಅವರ ಸ್ಥಾನಮಾನವನ್ನು ಪ್ರತಿನಿಧಿಸುತ್ತವೆ ಎಂದು ಹೇಳಿದರು. ಮುಖಂಡ ಗುಂಡಪ್ಪ ವಿಶ್ವಕರ್ಮ ಸಹ ಮಾತನಾಡಿದರು.

ವೇದಿಕೆಯ ಮೇಲೆ ಪೂಜ್ಯರಾದ ಶ್ರೀ ಸುರೇಂದ್ರ ಮಹಾಸ್ವಾಮಿಗಳು, ಶ್ರೀ ದೇವೇಂದ್ರ ಮಹಾಸ್ವಾಮಿ, ಶ್ರೀ ಈರಣ್ಣ ಮುತ್ಯಾ, ಶ್ರೀ ಶರಣ ಶಂಕರಲಿಂಗ ಮಹಾರಾಜರು, ಬೀದರಿನ ಶ್ರೀ ಸಿದ್ದೇಶ್ವರಾನಂದ ಮಹಾಸ್ವಾಮಿಗಳು, ಶ್ರೀ ನಾಗೇಶ್ ಮುತ್ಯಾ, ಶ್ರೀ ಶಿವರಾಜ್ ಶಾಸ್ತ್ರಿಗಳು, ಚುನಾವಣಾ ತಹಶೀಲ್ದಾರ ಪಂಪಯ್ಯ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಉಪನಿರ್ದೇಶಕಿ ಜಗದೀಶ್ವರಿ ನಾಶಿ ಸೇರಿದಂತೆ ಇನ್ನಿತರ ವಿಶ್ವಕರ್ಮ ಸಮಾಜದ ಮುಖಂಡರು ಭಾಗವಹಿಸಿದ್ದರು.

# ವಿಶ್ವ ಕೌಶಲ್ಯ ಸ್ಪರ್ಧೆ: ಹೆಸರು ನೋಂದಣಿಗೆ ಅವಕಾಶ

ಬೀದರ, ಸ.19 : ಪ್ರಸಕ್ತ 2026 ವರ್ಲ್ಡ್ ಸ್ಕಿಲ್ಸ್ ಸ್ಪರ್ಧೆಯು ಚೈನಾ ದೇಶದ ಶಾಂಘೈ ನಗರದಲ್ಲಿ ನಡೆಯಲಿದ್ದು, ಇದರ ಪೂರ್ವ ಸಿದ್ಧತೆಯ ಭಾಗವಾಗಿ ಕರ್ನಾಟಕ ಕೌಶಲ್ಯ ಅಭಿವೃಧಿ ನಿಗಮ (ಕೆ. ಎಸ್.ಡಿ.ಸಿ) ಬೆಂಗಳೂರು ರವರು ಕರ್ನಾಟಕ ರಾಜ್ಯ ಕೌಶಲ್ಯ ಒಲಿಂಪಿಕ್ಸ (IndiaSkills-Karnataka-2025) ಸ್ಪರ್ಧಾ ಕಾರ್ಯಕ್ರಮವನ್ನು ಜಿಲ್ಲಾ, ವಲಯ ಹಾಗೂ ರಾಜ್ಯ ಮಟ್ಟಗಳಲ್ಲಿ ಕೈಗೊಳ್ಳಲು ಯೋಜಿಸಲಾಗಿದ್ದು, ಆಸಕ್ತರು ಹೆಸರು ನೋಂದಾಯಿಸಿಕೊಳ್ಳಬಹುದಾಗಿದೆ ಎಂದು ಬೀದರ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಈ ಸ್ಪರ್ಧೆಯ ವಿಜೇತರು ಅಂತರಾಷ್ಟ್ರೀಯ ಮಟ್ಟದಲ್ಲಿ ಭಾರತ ದೇಶವನ್ನು ಪ್ರತಿನಿಧಿಸಲು ಮುಂದುವರೆದ ತರಬೇತಿಯ ಆಯ್ಕೆಗೆ ಒಳಗಾಗುತ್ತಾರೆ. ಅದರಂತೆ ಜಿಲ್ಲೆಯ 16 ರಿಂದ 25 ವರ್ಷ ವಯಸ್ಸಿನ ಯುವಕ/ಯುವತಿಯರು, ಒಟ್ಟು 63 ವಿವಿಧ ಬಗೆಯ ಕೌಶಲ್ಯ ಸ್ಪರ್ಧೆಯಲ್ಲಿ ಭಾಗವಹಿಸಬಹುದು. ಸ್ಪರ್ಧೆಯಲ್ಲಿ ಭಾಗವಹಿಸುವ ಅಭ್ಯರ್ಥಿಗಳು https://www.skillindiadigital.gov.in/home ನಲ್ಲಿ ಸೆಪ್ಟೆಂಬರ್.30 ರೊಳಗಾಗಿ ತಮ್ಮ ಹೆಸರುಗಳನ್ನು ನೋಂದಣಿ ಮಾಡಿಕೊಂಡು ಹೆಚ್ಚಿನ ಸಂಖ್ಯೆಯಲ್ಲಿ ನೋಂದಣಿ ಮಾಡಿಕೊಂಡು ವಿಶ್ವ ಕೌಶಲ್ಯ ಸ್ಪರ್ಧೆಯಲ್ಲಿ ಭಾಗವಹಿಸಬೇಕು. ಇಂಡಿಯಾ ಸ್ಕಿಲ್ 2025ರ ಸ್ಪರ್ಧೆಯ ಕುರಿತಾದ ಸಂಪೂರ್ಣ ಮಾಹಿತಿಗಾಗಿ www.skillindiadigital.gov.in ಗೆ ಲಾಗಿನ ಮಾಡಿ ಅಗತ್ಯ ಮಾಹಿತಿ ಪಡೆದುಕೊಳ್ಳಬಹುದು ಹಾಗೂ ಹೆಚ್ಚಿನ ಮಾಹಿತಿಗಾಗಿ +919606492216 ನಂಬರಿಗೆ ಕರೆಮಾಡಬಹುದಾಗಿದೆಂದು ಅವರು ತಿಳಿಸಿದ್ದಾರೆ.

# ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯಿಂದ ಅರ್ಜಿ ಆಹ್ವಾನ

ಬೀದರ, ಸೆ.19 : ಕರ್ನಾಟಕ ರಾಜ್ಯ ಬ್ರಾಹ್ಮ ಅಭಿವೃದ್ಧಿ ಮಂಡಳಿ ವಿಪ್ರ ಸ್ವ ಉದ್ಯಮ ನೇರ ಸಾಲ ಯೋಜನೆಯಡಿ 2025–26ನೇ ಸಾಲಿಗೆ ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ ವ್ಯವಸ್ಥಾಪಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಈ ಯೋಜನೆಯಲ್ಲಿ ಆರ್ಥಿಕವಾಗಿ ಹಿಂದುಳಿದ ಬ್ರಾಹ್ಮಣ ಸಮುದಾಯದವರು ಸ್ವಯಂ ಉದ್ಯೋಗ ಕೈಗೊಳ್ಳಲು ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯವತಿಯಿಂದ ನೇರವಾಗಿ ಸಾಲ– ಸಹಾಯಧನ ಮಂಜೂರು ಮಾಡಲು ಉದ್ದೇಶಿಸಿದೆ. ಹಲವು ವೃತ್ತಿಗಳಾದ ಹಸು ಸಾಕಾಣಿಕೆ, ಗುಡಿಕೈಗಾರಿಕೆ, ಸಣ್ಣ ಕೈಗಾರಿಕೆ, ಹೋಟೆಲ್ ಉದ್ಯಮ, ಟ್ಯಾಕ್ಸಿ ಇತ್ಯಾದಿ ವ್ಯಾಪಾರ ವಹಿವಾಟುಗಳನ್ನು ಕೈಗೊಳ್ಳಲು ಕನಿಷ್ಠ ರೂ.1.00 ಲಕ್ಷ ಹಾಗೂ ಗರಿಷ್ಠ ರೂ.2.00 ಲಕ್ಷಗಳ ಆರ್ಥಿಕ ನೆರವು ಒದಗಿಸಲಾಗುವುದು. ಅರ್ಹತೆಗಳು: ಬ್ರಾಹ್ಮಣ ಸಮುದಾಯದ ಸಾಮಾನ್ಯ ವರ್ಗಕ್ಕೆ ಸೇರಿದ ಅರ್ಜಿದಾರರು ಚಾಲ್ತಿಯಲ್ಲಿರುವ ಆರ್ಥಿಕವಾಗಿ ಹಿಂದುಳಿದ ಪ್ರಮಾಣ ಪತ್ರ (ಇಡಬ್ಲ್ಯೂಎಸ್ ಪ್ರಮಾಣ ಪತ್ರ) ಹೊಂದಿರಬೇಕು. ಅರ್ಜಿದಾರರು ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು. ಅರ್ಜಿದಾರರ ವಯಸ್ಸು 18 ರಿಂದ 65 ವರ್ಷದ ಒಳಗಿನವರಾಗಿರಬೇಕು. ಒಂದು ಕುಟುಂಬದಿಂದ ಒಬ್ಬರು ಮಾತ್ರ ಅರ್ಜಿ ಸಲ್ಲಿಸಬಹುದಾಗಿರುತ್ತದೆ, ಮಹಿಳೆಯರಿಗೆ 33%, ವಿಶೇಷಚೇತನರಿಗೆ ಶೇ 5% ಮೀಸಲಾತಿಯನ್ನು ನೀಡಲಾಗುವುದು, ಅರ್ಜಿದಾರರ ಆಧಾರ್ ಗೆ ಮೊಬೈಲ್ ಸಂಖ್ಯೆ ಲಿಂಕ್ ಆಗಿರಬೇಕು ಮತ್ತು ಬ್ಯಾಂಕ್ ಖಾತೆ ಸೀಡ್ ಆಗಿರಬೇಕು. ಅರ್ಹರು ವೆ???ಸೈಟ್: ಇ bdb.karnataka.gov.in ನಲ್ಲಿ ದಿನಾಂಕ: 31–10–2025 ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ: 8762249230 ಗೆ ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ಜಿಲ್ಲಾ, ತಾಲೂಕು ಮಟ್ಟದ ಸ್ವೀಪ್ ಸಮಿತಿ ನೇಮಕ

ಯಾದಗಿರಿ:ಸೆ19:ಕರ್ನಾಟಕ ವಿಧಾನ ಪರಿಷತ್ತಿಗೆ ಈಶಾನ್ಯ ಶಿಕ್ಷಕರ ಕ್ಷೇತ್ರದ ದ್ವೈವಾರ್ಷಿಕ ಚುನಾವಣೆ ಕುರಿತಾದ ಮಹತ್ವದ ನಿರ್ದೇಶನಗಳನ್ನು ನೀಡುವ ಹಾಗೂ ಜಿಲ್ಲಾ ಮತ್ತು ತಾಲೂಕು ಮಟ್ಟದ ಸ್ವೀಪ್ ಸಮಿತಿ ರಚಿಸಲಾಗಿದೆ ಎಂದು ಕಲಬುರಗಿ ವಿಭಾಗ ಪ್ರಾದೇಶಿಕ ಆಯುಕ್ತರು ಹಾಗೂ ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರ ಮತದಾರರ ನೋಂದಣಾಧಿಕಾರಿಗಳು, ಚುನಾವಣಾಧಿಕಾರಿ ಅವರು ತಿಳಿಸಿದ್ದಾರೆ. ಭಾರತ ಚುನಾವಣಾ ಆಯೋಗವು ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ವಿಧಾನಪರಿಷತ್ ಸದಸ್ಯರ ಪದಾವಧಿಯು 2026 ನವೆಂಬರ್ 11 ರಂದು ಮುಕ್ತಾಯಗೊಳ್ಳಲಿರುತ್ತದೆ. ಈ ಹಿನ್ನೆಲೆ ಮತದಾರರ ಪಟ್ಟಿಯನ್ನು ಸಿದ್ದಪಡಿಸಿಕೊಳ್ಳಲು ಸೂಚಿಸಿ ವೇಳಾಪಟ್ಟಿಯನ್ನು ನಿಗದಿಪಡಿಸಿದೆ.

2025ರ ಸೆಪ್ಟೆಂಬರ್ 30ರ ಮಂಗಳವಾರ ರಂದು ಮತದಾರರ ನೋಂದಣಿ ನಿಯಮಗಳು 1960 ರ ನಿಯಮ 31(3) ರ ಅಡಿಯಲ್ಲಿ ಸಾರ್ವಜನಿಕ ಪ್ರಕಟಣೆ ಹೊರಡಿಸುವುದು. 2025ರ ಅಕ್ಟೋಬರ್ 15ರ ಬುಧವಾರ ರಂದು 1960 ರ ಮತದಾರರ ನೋಂದಣಿ ನಿಯಮಗಳ ನಿಯಮ 31(4) ರ ಅಡಿಯಲ್ಲಿ ಪತ್ರಿಕೆಗಳಲ್ಲಿ ಪ್ರಕಟಣೆಯ ಮೊದಲ ಪ್ರಕಟ. 2025ರ ಅಕ್ಟೋಬರ್ 25ರ ಶನಿವಾರ ರಂದು 1960ರ ಮತದಾರರ ನೋಂದಣಿ ನಿಯಮಗಳ ನಿಯಮ 31(4) ರ ಅಡಿಯಲ್ಲಿ ಪತ್ರಿಕೆಗಳಲ್ಲಿ ಪ್ರಕಟಣೆಯ ಎರಡನೇ ಪ್ರಕಟ. 2025ರ ನವೆಂಬರ್ 6ರ ಗುರುವಾರ ರಂದು ಅರ್ಜಿ ನಮೂನೆ 19ರಲ್ಲಿ ಅರ್ಜಿಯನ್ನು ಸ್ವೀಕರಿಸುವ ಕೊನೆಯ ದಿನವಾಗಿದೆ. 2025ರ ನವೆಂಬರ್ 20ರ ಗುರುವಾರ ರಂದು ಹಸ್ತಪ್ರತಿಗಳ ತಯಾರಿಕೆ ಮತ್ತು ಕರಡು ಮತದಾರರ ಪಟ್ಟಿಯ ಮುದ್ರಣದ ಅವಧಿ ಪ್ರಕಟ. 2025ರ ನವೆಂಬರ್ 25ರ ಮಂಗಳವಾರ ರಂದು ಮತದಾರರ ಪಟ್ಟಿಗಳ ಕರಡು ಪ್ರಕಟ. 2025ರ ನವೆಂಬರ್ 25ರ ಮಂಗಳವಾರ ರಂದು ಹಕ್ಕು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸುವ ಅವಧಿಯನ್ನು 2025ರ ಡಿಸೆಂಬರ್ 10ರ ಬುಧವಾರ ಒಳಗೆ ಸಲ್ಲಿಸಬೇಕು. 2025ರ ಡಿಸೆಂಬರ್ 25ರ ಗುರುವಾರ ರಂದು ಹಕ್ಕುಗಳು ಮತ್ತು ಆಕ್ಷೇಪಣೆಗಳನ್ನು ವಿಲೇವಾರಿ ಮಾಡುವ ಮತ್ತು ಪೂರಕಗಳನ್ನು ಸಿದ್ಧಪಡಿಸುವ ಮತ್ತು ಮುದ್ರಿಸುವ ದಿನಾಂಕ ಪ್ರಕಟ.

## ಹೊಳಸಮುದ್ರ: ಪ್ರಾಥಮಿಕ ಬಾಲ್ಯ ಆರೈಕೆ ಮತ್ತು ಶಿಕ್ಷಣ ಶಿಬಿರ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಸೆ.19:ತಾಲೂಕಿನ ಹೊಳಸಮುದ್ರ ಗ್ರಾಮದ ಅಂಗನವಾಡಿ ಕೇಂದ್ರ–1 ರಲ್ಲಿ ಪ್ರಾಥಮಿಕ ಬಾಲ್ಯ ಆರೈಕೆ ಮತ್ತು ಶಿಕ್ಷಣ ಇಸಿಸಿಇ ಪೋಷಣ ಶಿಬಿರ ಕಾರ್ಯಕ್ರಮ ಮಾಡಲಾಯಿತು.

ಈ ಸಂದರ್ಭದಲ್ಲಿ ಅಂಗನವಾಡಿ ಕಾರ್ಯಕರ್ತೆ ಮಹಾದೇವಿ ನುದ್ದನೂರೆ ಮಾತನಾಡಿ,

ಮಕ್ಕಳಿಗೆ ಆಹಾರ ಮತ್ತು ತಿಂಡಿ–ತಿನ್ನುಸು ಗುಣಮಟ್ಟ ಬಗ್ಗೆ ತಿಳಿಸಿದರು. ಮನೆಯಲ್ಲಿ ಅಡುಗೆ ಮಾಡುವ ಸ್ವಚ್ಚತೆ ವಹಿಸಬೇಕು, ಅಡುಗೆ ಕೊನೆಯಲ್ಲಿ ಗೂಬ್ಬು ನಾರುವ ಕೆಟ್ಟ ತರಕಾರಿ ಇಡಬಾರದು. ಅಂಗಡಿ ಎಲ್ಲ ಸಿಗುವ ಮತ್ತು ಎಣ್ಣೆ ಪದಾರ್ಥದಿಂದ ಮಾಡಿದ ತಿನ್ನುಸುಗಳನ್ನು ತಿನ್ನಬಾರದು ಎಂದು ಮಕ್ಕಳಿಗೆ ತಿಳಿಸಿದ್ದಾರೆ.

ಗರ್ಭಿಣಿಯರು ಹೆಚ್ಚಿನ ಪೌಷ್ಟಿಕ ಆಹಾರ ಸೇವನೆ ಮಾಡಬೇಕು, ಅಂಗನವಾಡಿ ಕೇಂದ್ರದಲ್ಲಿ ಕೂಡುವ ಆಹಾರ ಕಿಟ್ ಸೇವನೆ ಮಾಡಲು ಸೂಚಿಸಿದರು.

ಈ ಸಂದರ್ಭದಲ್ಲಿ ಅಂಗನವಾಡಿ ಶಿಕ್ಷಕಿ ಯಾರಾದ ನಂದಾ ವಡಿಗಿರೆ, ಶಿವಗಂಗಾ ಹಳ ಕಾಯಿ, ಸವಿತಾ ರಾಂಪುರೆ, ಆಶಾ ಕಾರ್ಯಕರ್ತೆ ಲಲಿತಾ ಬಸವರಾಜ, ಸವಿತ್ರಾ ಅಶೋಕ,

ಎ.ಎನ್.ಎಫ್ ಚಂದ್ರಕಲಾ, ಮೀನಾಕ್ಷಿ, ಅಡುಗೆ ಸಿಬ್ಬಂದಿ ಹಾಗೂ ಮಕ್ಕಳು ಇದ್ದರು.

ಸಿಂಧೋಳ ಸಮುದಾಯದ ಅಲೆಮಾರಿ ಮಹಿಳೆಯರು, ಮಾಜಿ ದೇವದಾಸಿ ಮಹಿಳೆಯರೊಂದಿಗೆ ಸಂವಾದ

# ಎಲ್ಲ ಕ್ಯಾಂಪಗಳಲ್ಲಿ ಮಹಿಳಾ ಸಭೆ ನಡೆಸಲು ಆಯೋಗದ ಅಧ್ಯಕ್ಷೆ ಡಾ.ನಾಗಲಕ್ಷ್ಮಿ ಚೌಧರಿ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಸೆಪ್ಟೆಂಬರ್ 18–ಸಿಂಧನೂರ, ಮಸ್ಕಿ ನಗರ ಸೇರಿದಂತೆ ತಾಲೂಕು ವ್ಯಾಪ್ತಿಯ ಎಲ್ಲ ಕ್ಯಾಂಪಗಳಲ್ಲಿ, ಹಳ್ಳಿಗಳಲ್ಲಿ ಅಲೆಮಾರಿ, ಅರೆ ಅಲೆಮಾರಿ ಸೇರಿದಂತೆ ಎಲ್ಲ ಮಹಿಳೆಯರ ಹಾಗೂ ಮಾಜಿ ದೇವದಾಸಿ ಮಹಿಳೆಯರನ್ನು ಸೇರಿಸಿ ಮಹಿಳಾ ಗ್ರಾಮ ಸಭೆಗಳನ್ನು ನಡೆಸಬೇಕು. ಆ ಸಭೆಗಳಲ್ಲಿ ಮಹಿಳೆಯರ ಸಮಸ್ಯೆಗಳನ್ನು ಚರ್ಚಿಸಿ, ಪರಿಹಾರ ಕ್ರಮಗಳ ಜರುಗಿಸಿದ ಬಗ್ಗೆ ಮಹಿಳಾ ಆಯೋಗಕ್ಕೆ ವರದಿ ಸಲ್ಲಿಸಬೇಕು ಎಂದು ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ.ನಾಗಲಕ್ಷ್ಮಿ ಚೌಧರಿ ಅವರು ಹೇಳಿದರು.

ಸೆ.18ರಂದು, ಸಿಂಧನೂರ ನಗರದ ಸುಕ್ಕಲಪೇಟೆ ರಸ್ತೆಯಲ್ಲಿರುವ ಟೌನ್ ಹಾಲದಲ್ಲಿ ಸಿಂದೋಳ ಸಮುದಾಯದ ಅಲೆಮಾರಿ ಮಹಿಳೆಯರು ಮತ್ತು ದೇವದಾಸಿ ಮಹಿಳೆಯರೊಂದಿಗೆ ಸಂವಾದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸಿಂಧನೂರ ನಗರ ಸೇರಿದಂತೆ ಸಿಂಧನೂರ, ಮಸ್ಕಿ, ಮಾನವಿ ತಾಲೂಕುಗಳ ವ್ಯಾಪ್ತಿಯಲ್ಲಿನ ಅನೇಕ ಗ್ರಾಮಗಳು, ಕ್ಯಾಂಪಗಳಲ್ಲಿನ



ಅನೇಕ ವಯೋವೃದ್ಧೆಯರು ಈಗಲು ಸಹ ಮಾಸಿಕ ವೃದ್ಯಾಪ್ಯದ ಹಳೆಯ ವೇತನ ಪಡೆಯುತ್ತಿದ್ದು, ಅವರಿಗೆ ಪರಿಷ್ಕೃತ ಈಗಿನ ವೇತನ ಸಿಗುವಂತೆ ಕ್ರಮವಹಿಸಬೇಕು ಎಂದು ಸೂಚನೆ ನೀಡಿದರು.

ದೇವದಾಸಿಯರಿಂದ ಮನವಿ: ಬಹುವರ್ಷಗಳಿಂದ ನಮಗೆ ಮನೆ ಇಲ್ಲ. ನಿವೇಶನ ಇಲ್ಲ ಎಂದು ಸಿಂಧನೂರ ನಗರದ ಸ್ಥಳೀಯ ಮತ್ತು ಸುತ್ತಲಿನ ಅನೇಕ ಕ್ಯಾಂಪಗಳಲ್ಲಿನ ಮಾಜಿ ದೇವದಾಸಿ ಮಹಿಳೆಯರು ಕಾರ್ಯಕ್ರಮದಲ್ಲಿ ಅಧ್ಯಕ್ಷರಿಗೆ ಮನವಿ ಸಲ್ಲಿಸಿದರು. ಈ ವೇಳೆ ಅಧ್ಯಕ್ಷರು, ವೇದಿಕೆಗೆ ನಗರಸಭೆ ಆಯುಕ್ತರನ್ನು ಕರೆದು ಮಾಜಿ ದೇವದಾಸಿ ಮಹಿಳೆಯರ ಸಮಸ್ಯೆಗಳ ಬಗ್ಗೆ ಚರ್ಚಿಸಿದರು.

ಸಿಂಧನೂರ ನಗರಸಭೆ ವ್ಯಾಪ್ತಿಯಲ್ಲಿ ಇದುವರೆಗೆ ನಿವೇಶನ ಪಡೆಯದ ಮಾಜಿ ದೇವದಾಸಿ ಮಹಿಳೆಯರು ನಗರಸಭೆ ಕಾರ್ಯಾಲಯಕ್ಕೆ ಭೇಟಿ ನೀಡಿ ಅರ್ಜಿ ಸಲ್ಲಿಸಬೇಕು. ಕಾನೂನಿನಲ್ಲಿ ಅವಕಾಶವಿದ್ದಲ್ಲಿ ಕ್ರಮ ಜರುಗಿಸಲಾಗುವುದು ಎಂದು ಸಿಂಧನೂರ ನಗರಸಭೆ ಆಯುಕ್ತರಾದ ಪಾಂಡುರಂಗ ಅವರು ತಿಳಿಸಿದರು.

ಮಹಿಳೆಯರಿಗೆ ಸಲಹೆ: ಕ್ಯಾಂಪಗಳಲ್ಲಿ, ಜಮೀನು ಇಲ್ಲ, ರಸ್ತೆ ಇಲ್ಲ, ಪೆನ್ಶನ್ ನೀಡುತ್ತಿಲ್ಲ ಎನ್ನುವಂತಹ ಏನೇ ಸಮಸ್ಯೆಗಳಿದ್ದರೂ ಅಲ್ಲಿನ ಮಹಿಳೆಯರು ಅವುಗಳ ಪಟ್ಟಿ ಮಾಡಿ ನೀಡಬೇಕು. ಮಹಿಳೆಯರಿಗೆ ಸಂಬಂಧಿಸಿದ ಅಹವಾಲುಗಳನ್ನು ಆಯೋಗಕ್ಕೆ ಸಲ್ಲಿಸಿದಲ್ಲಿ ನಿಯಮಾನುಸಾರ ಪರಿಶೀಲಿಸಿ ಪರಿಹಾರಕ್ಕೆ ಕ್ರಮ ವಹಿಸಲಾಗುವುದು ಎಂದು ಅಧ್ಯಕ್ಷರು ತಿಳಿಸಿದರು. ಈ ಕಾರ್ಯಕ್ರಮದಲ್ಲಿ ಸ್ವೀಕೃತವಾದ ಅರ್ಜಿಗಳನ್ನು ಸಂಬಂಧಿಸಿದ ಇಲಾಖೆಗೆ ಕಳಿಸಿ ಸ್ಪಂದನೆ ನೀಡುವೆ ಎಂದು ತಿಳಿಸಿದರು.

ಅಲೆಮಾರಿಗಳು, ಅರೆ ಅಲೆಮಾರಿಗಳ ಸಮುದಾಯದಲ್ಲಿ ಜಾಗದ ಸಮಸ್ಯೆ ಇದ್ದಲ್ಲಿ ಅದು ಆಯೋಗದ ವ್ಯಾಪ್ತಿಗೆ ಬರುವುದಿಲ್ಲ. ತಾವುಗಳು ಪರಿಹಾರಕ್ಕಾಗಿ ತಹಸೀಲ್ದಾರ ಮತ್ತು ಜಿಲ್ಲಾಧಿಕಾರಿಗಳ ಬಳಿಯಲ್ಲಿ ಮನವಿ ಸಲ್ಲಿಸಬೇಕು ಎಂದು ಸಲಹೆ ಮಾಡಿದರು.

ನಾನಾ ಗ್ರಾಮಸ್ಥರು ಭಾಗಿ: ಟೌನಹಾಲನಲ್ಲಿ ನಡೆದ ಸಂವಾದದಲ್ಲಿ ಸಿಂಧನೂರ ನಗರ, ಸುತ್ತಲಿನ ಹೊಸಳ್ಳಿ, ಶಾಸಲಮರಿ, ಯೋಳರಾಗಿ ಕ್ಯಾಂಪ್, ಗ್ವಾಮರಿಸಿ, ಜಾಲಹಳ್ಳಿ ಸೇರಿದಂತೆ ಬೇರೆ ಬೇರೆ ಗ್ರಾಮ, ಕ್ಯಾಂಪನ ಮಹಿಳೆಯರು, ಮಾಜಿ ದೇವದಾಸಿ ಮಹಿಳೆಯರು ಭಾಗಿಯಾಗಿದ್ದರು.

ಡೋಲು, ಹಲಗೆ ಬಾರಿಸಿ ಸ್ವಾಗತಿಸಿದರು: ಅಧ್ಯಕ್ಷೆ ಡಾ.ನಾಗಲಕ್ಷ್ಮಿ ಅವರು, ಬೆಳಗ್ಗೆ ಸಿಂಧನೂರ ನಗರಕ್ಕೆ ಪ್ರವೇಶ ಮಾಡುತ್ತಿದ್ದಂತೆ ಸಿಂದೋಲ ಸಮುದಾಯದ ಮಹಿಳೆಯರು ಮತ್ತು ಪುರುಷರು ಡೋಲು, ಹಲಗೆ ಬಾರಿಸಿ, ಬಾರಕೋಲ ಬೀಸಿ ಅದ್ದೂರಿ ಸ್ವಾಗತ ಕೋರಿದರು. ಟೌನ್ ಹಾಲವರೆಗೆ ಮೆರವಣಿಗೆಯಲ್ಲಿ ಕರೆತಂದರು.

ಕರ್ನಾಟಕ ರಾಜ್ಯ ಮಹಿಳಾ ಆಯೋಗ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ತಾಲೂಕು ಆಡಳಿತ, ತಾಲೂಕು ಪಂಚಾಯತ್, ತಾಲೂಕು ಪೊಲೀಸ್ ಇಲಾಖೆ, ಸಿಂಧನೂರ ಹಾಗೂ ತುರವಿಹಾಳ ಶಿಶು ಅಭಿವೃದ್ಧಿ ಕಾರ್ಯಾಲಯ ಮತ್ತು ಸಿಂಧನೂರ ತಾಲೂಕು ಇಂದಿರಾಗಾಂಧಿ ಸ್ತ್ರಿಶಕ್ತಿ ಒಕ್ಕೂಟದ ಆಶ್ರಯದಲ್ಲಿ ಕಾರ್ಯಕ್ರಮ ಜರುಗಿತು.

ಸಮಾರಂಭದಲ್ಲಿ ತಹಸೀಲ್ದಾರ ಅರುಣಕುಮಾರ ದೇಸಾಯಿ, ಸಿಡಿಪಿಓಗಳಾದ ಅಶೋಕ, ಲಿಂಗನಗೌಡ್ರ ಸೇರಿದಂತೆ ಇತರರು ಇದ್ದರು.

## ಜಿಲ್ಲಾ ಮಟ್ಟದ ಹೊಯ್ಸಳ ಹಾಗೂ ಕೆಳದಿ ಚೆನ್ನಮ್ಮ ಪ್ರಶಸ್ತಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಸೆ.18–ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಪ್ರತಿ ವರ್ಷದಂತೆ 2025–26ನೇ ಸಾಲಿಗೆ ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಪ್ರಶಸ್ತಿ ಯೋಜನೆಯಡಿ ಅಸಾಧಾರಣ ಸಾಧನೆ ಮಾಡಿದ ಮಕ್ಕಳಿಗೆ ಜಿಲ್ಲಾ ಮಟ್ಟದ ಪ್ರಶಸ್ತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

ನಾವೀನ್ಯತೆ (ಖಟಿಟಿಂತಚಿಣುಂಟಿ), ತಾರ್ಕಿಕ ಸಾಧನೆಗಳು (Scholastic), ಕ್ರೀಡೆ (ಖಿಂಡಿಣ), ಕಲೆ, ಸಾಂಸ್ಕೃತಿಕ ಹಾಗೂ ಸಂಗೀತ (ಂಡಿಣ, ಅಣಟಣಣಡಿಚಿಟ, ಒಣ–ಂಛಿ) ಕ್ಷೇತ್ರಗಳಲ್ಲಿ ಅಸಾಧಾರಣ ಸಾಧನೆ ಮಾಡಿದ ಮಕ್ಕಳನ್ನು ಪ್ರೋತ್ಸಾಹಿಸಲು ಹಾಗೂ ಕರ್ನಾಟಕ ರಾಜ್ಯದಲ್ಲಿ ನೆಲೆಸಿರುವ 05 ರಿಂದ 18 ವರ್ಷದ ವಯೋಮಿತಿಯ ಮಕ್ಕಳಿಗೆ ಪ್ರತಿ ಕ್ಷೇತ್ರದಲ್ಲಿ ಇಬ್ಬರು ಮಕ್ಕಳಂತೆ ಒಟ್ಟು 8 ಮಕ್ಕಳನ್ನು ಆಯ್ಕೆ ಮಾಡಿ ತಲಾ 10,000 ರೂ.ಗಳ ನಗದು ಒಳಗೊಂಡಂತೆ ಪ್ರಶಸ್ತಿಯನ್ನು ನೀಡಲಾಗುತ್ತದೆ.

ಅಸಾಧಾರಣ ಸಾಧನೆ ಮಾಡಿದ ಮಕ್ಕಳಿಗೆ ಜಿಲ್ಲಾ ಮಟ್ಟದ ಪ್ರಶಸ್ತಿಗಾಗಿ ನಿಗದಿತ ಅರ್ಜಿ ನಮೂನೆಯನ್ನು ಕಲಬುರಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರ ಕಚೇರಿಯಿಂದ ಪಡೆದು ಭರ್ತಿ ಮಾಡಿ ದ್ವಿಪ್ರತಿಯಲ್ಲಿ ಅವಶ್ಯಕ ದಾಖಲಾತಿಗಳೊಂದಿಗೆ 2025ರ ಅಕ್ಟೋಬರ್ 6ರ ಸಂಜೆ 5 ಗಂಟೆಯೊಳಗಾಗಿ ಅರ್ಜಿ ಸಲ್ಲಿಸಬೇಕು.

ಅರ್ಜಿಯೊಂದಿಗೆ ಸಲ್ಲಿಸಬೇಕಾದ ದಾಖಲೆಗಳು ಹಾಗೂ ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಕಲಬುರಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಲು ಕೋರಲಾಗಿದೆ.


## ಸೆಪ್ಟೆಂಬರ್ 20 ರಂದು ಗೃಹಜ್ಯೋತಿ ಗ್ಯಾರಂಟಿ ಯೋಜನೆ ಅನುಷ್ಠಾನ ಕುರಿತು ಸಭೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಸೆ.18–ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ವಿಭಾಗ–2ರ ವ್ಯಾಪ್ತಿಯ ಕಲಬುರಗಿ ಗ್ರಾಮೀಣ, ಕಮಲಾಪೂರ, ಆಳಂದ, ಕಡಗಂಚಿ, ಅಫಜಲಪೂರ ಹಾಗೂ ಚೌಡಾಪೂರ ಉಪವಿಭಾಗಗಳ ವ್ಯಾಪ್ತಿಯಲ್ಲಿ ಬರುವ ಗ್ರಾಹಕರ ಕುಂದುಕೊರತೆಗಳ ಸಭೆ ಹಾಗೂ ಗೃಹಜ್ಯೋತಿ ಗ್ಯಾರಂಟಿ ಯೋಜನೆ ಅನುಷ್ಠಾನ ಕುರಿತು ಸಭೆಯನ್ನು ಇದೇ ಸೆಪ್ಟೆಂಬರ್ 20 ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಆಯೋಜಿಸಲಾಗಿದೆ ಎಂದು ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ವಿಭಾಗ–2ರ ಕಾರ್ಯನಿರ್ವಾಹಕ ಅಭಿಯಂತರರು ತಿಳಿಸಿದ್ದಾರೆ.

ಈ ಸಭೆಯು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ವಿ) ಇವರ ಅಧ್ಯಕ್ಷತೆಯಲ್ಲಿ ಜರುಗಲಿದ್ದು, ಸಾರ್ವಜನಿಕರು ತಮ್ಮ ಸ್ಥಾವರಗಳ ವಿದ್ಯುತ್ ಸಂಬಂಧಿಸಿದ ಸಮಸ್ಯೆ ನಿವಾರಣೆಗಾಗಿ ಈ ಸಭೆ ಕರೆಯಲಾಗಿದೆ. ಆದ್ದರಿಂದ ಮೇಲ್ಕಂಡ ದಿನದಂದು ನಡೆಯುವ ಈ ಸಭೆಗೆ ಗ್ರಾಹಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಅವರು ತಿಳಿಸಿದ್ದಾರೆ.

## ಕೆಆರ್‌ಎಸ್ ಪಕ್ಷದ ಹೋರಾಟಕ್ಕೆ ಮಣಿದ ನಗರಸಭೆ ಅಧಿಕಾರಿಗಳು ತಕ್ಷಣ ನೀರು ಒದಗಿಸುವ ಭರವಸೆ




ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ನಗರದ ನೀರಿನ ಸಮಸ್ಯೆಯನ್ನು ಪರಿಹರಿಸುವಂತೆ ಆಗ್ರಹಿಸಿ ಕರ್ನಾಟಕ ರಾಷ್ಟ್ರ ಸಮಿತಿ (ಕೆಆರ್‌ಎಸ್) ಪಕ್ಷದ ವತಿಯಿಂದ ನಡೆದ ಪ್ರತಿಭಟನಾ ಹೋರಾಟಕ್ಕೆ ಕೊನೆಗೂ ನಗರಸಭೆ ಅಧಿಕಾರಿಗಳು ಮಣಿದರು.

ನಗರದ ಹಲವಾರು ವಾರ್ಡ್‌ಗಳಲ್ಲಿ ಕಳೆದ ಹಲವು ದಿನಗಳಿಂದ ನೀರಿನ ತೀವ್ರ ತೊಂದರೆ ಎದುರಿಸುತ್ತಿರುವ ಬಗ್ಗೆ ನಿವಾಸಿಗಳು ಕೆಆರ್‌ಎಸ್ ಮುಖಾಂತರ ಧ್ವನಿ ಎತ್ತಿದ್ದರು. ಪಕ್ಷದ ಕಾರ್ಯಕರ್ತರು ನಗರಸಭೆ ಕಚೇರಿ ಎದುರು ಧರಣಿ ನಡೆಸಿ ತಕ್ಷಣ ನೀರು ಪೂರೈಕೆ ಮಾಡಬೇಕೆಂದು ಒತ್ತಾಯಿಸಿದರು.

ಪ್ರತಿಭಟನೆಯ ತೀವ್ರತೆಯನ್ನು ಮನಗಂಡ ಅಧಿಕಾರಿಗಳು ಸ್ಥಳಕ್ಕೆ ಬಂದು ಪ್ರತಿಭಟಕರೊಂದಿಗೆ ಮಾತುಕತೆ ನಡೆಸಿದರು. ನಂತರ ಅಧಿಕಾರಿಗಳು, "ನೀರು ಪೂರೈಕೆಗಾಗಿ ಅಗತ್ಯ ಕ್ರಮ ಕೈಗೊಳ್ಳಲಾಗುತ್ತದೆ ಹಾಗೂ ತಕ್ಷಣವೇ ಸಮಸ್ಯೆ ಪರಿಹರಿಸಲಾಗುವುದು" ಎಂದು ಭರವಸೆ ನೀಡಿದರು.

ಈ ಹಿನ್ನೆಲೆಯಲ್ಲಿ ಕೆಆರ್‌ಎಸ್ ಪಕ್ಷದ ಹೋರಾಟ ತಾತ್ಕಾಲಿಕವಾಗಿ ಹಿಂಪಡೆಯಲಾಗಿದೆ.

## ಮೊಬೈಲ್ ನಿಂದ ದೂರವಿರಿ ವಿದ್ಯಾರ್ಥಿಗಳಿಗೆ ಕಿವಿಮಾತು : ಡಾ. ಪ್ರಸಾದ್



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕಲ್ಯಾಣ ಕರ್ನಾಟಕ ದಿನಾಚರಣೆ ಮತ್ತು ಶಿಕ್ಷಕರ ದಿನಾಚರಣೆಯನ್ನು ವಿದ್ಯಾನಗರ ಶಾರದಾ ವಿದ್ಯಾ ಸಂಸ್ಥೆಯಲ್ಲಿ ಅದ್ದೂರಿಯಾಗಿ ಜರುಗಿತು.

ವಿದ್ಯಾರ್ಥಿಗಳು ಕುಂಭ ಮೆರವಣಿಗೆ ಮುಖಾಂತರ ಎಲ್ಲಾ ಗಣ್ಯರನ್ನು ಕಾರ್ಯಕ್ರಮಕ್ಕೆ ಬರಮಾಡಿಕೊಂಡರು ನಂತರ ಸಂಸ್ಥೆಯ ಅಧ್ಯಕ್ಷರು ಎಸ್ ಪ್ರಸಾದ್ ಹಾಗೂ ಅತಿಥಿಗಳು ಧ್ವಜಾರೋಹಣ ಮಾಡಿದರು.

ಮುಖ್ಯ ಅತಿಥಿಗಳು ಡಾ.ಸಿ.ಎಚ್. ವಿ. ಎಸ್. ವಿ. ಪ್ರಸಾದ್ ರವರು ಮಾತನಾಡಿ ಶಿಕ್ಷಕರ ಸೇವೆಗೆ ನಾವು ಬೆಲೆ ಕಟ್ಟಲು ಆಗುವುದಿಲ್ಲ ಎಂದು ಹಾಗೂ ಮೊಬೈಲ್ ಗಳಿಂದ ದೂರವಿದ್ದು ಸತತ ಪರಿಶ್ರಮ ಪಡಬೇಕು ಪ್ರತಿಯೊಬ್ಬರೂ ಸೇವಾ ಮನೋಭಾವನೆಯನ್ನು ಇಟ್ಟುಕೊಳ್ಳಬೇಕು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿ ನಾನ್ನು ಅನೇಕ ವಿದ್ಯಾಸಂಸ್ಥೆಗಳಿಗೆ ಹಾಗೂ ಸಮಾಜ ಸೇವಕ್ಕೆ ಸಹಾಯ ಸಹಕಾರ ಮಾಡುತ್ತಾ ಬಂದಿದ್ದೇನೆ ಅದೇ ರೀತಿ ಶಾರದಾ ವಿದ್ಯಾ ಸಂಸ್ಥೆಯ ಮೊದಲನೇ ಮಹಡಿಯ ಕಟ್ಟಡ ನಿರ್ಮಾಣಕ್ಕೆ ವೆಚ್ಚವಾಗುವ ಸಂಪೂರ್ಣ ಮೊತ್ತವನ್ನು ನಾನ್ನು ನೀಡುತ್ತೇನೆ ಮುಂದಿನ ದಿನದಲ್ಲಿ ವಿದ್ಯಾರ್ಥಿಗಳಿಗೆ ಬೇಕಾಗುವ ಯಾವುದೇ ಅನುಕೂಲವಾಗಲಿ ನಾನ್ನು ಮಾಡಿಕೊಡುತ್ತೇನೆ ಎಂದು ಭರವಸೆ ನೀಡಿದರು.

ಶ್ರೀ ಎಸ್. ಪ್ರಸಾದ ರವರು ಮಾತನಾಡಿ ಶಿಕ್ಷಕರನ್ನು ಉದ್ದೇಶಿಸಿ ವಿದ್ಯಾರ್ಥಿಗಳ ಸರ್ವಾಂಗೀಣ ಅಭಿವೃದ್ಧಿ ಶಿಕ್ಷಕರ ಸತತ ಪರಿಶ್ರಮದ ಮೇಲೆ ಅವಲಂಬಿತವಾಗಿದೆ ಎಂದುರು

ಅತಿಥಿಗಳಾಗಿರುವ ಶ್ರೀ ಜಾನೆ ಕುಂಟೆ ಬಸವರಾಜ್ ವೀರಶೈವ ವಿದ್ಯಾವರ್ಧಕ ಸಂಘ ಮತ್ತು ಚೇರ್ಮನ್ ರಾವ್ ಬಹದ್ದೂರ್ ಮಹಾಬಲೇಶ್ವರ ಇಂಜಿನಿಯರಿಂಗ್ ಕಾಲೇಜ್ ಬಳ್ಳಾರಿ ಇವರು ಮಾತನಾಡಿ ದೇಶದ ತುಂಬಾ ಎಷ್ಟೇ ಗುಡಿ ಗುಂಡಾರಗಳು ಕಟ್ಟಿದರು, ಅದರ ಆದಾಯ ಯಾವುದಕ್ಕೆ ಉಪಯೋಗಿಸುತ್ತೇವೆ ಗೊತ್ತಿಲ್ಲ ಆದರೆ ಈ ಶಾರದಾ ವಿದ್ಯಾಸಂಸ್ಥೆಯು ಅನೇಕ ಶಾಲೆಗಳನ್ನು ಪ್ರಾರಂಭಿಸಿ ದೇಶಕ್ಕೆ ಮಕ್ಕಳನ್ನು ಆಸ್ತಿಯನ್ನಾಗಿ ಮಾಡುತ್ತದೆ ಆದ್ದರಿಂದ ಗುಡಿ ಗುಂಡಾರಗಳ ಬದಲು ಶಿಕ್ಷಣ ಸಂಸ್ಥೆಗಳನ್ನು ಸ್ಥಾಪಿಸಿ ಎಂದು ಕರೆ ನೀಡಿದರು. ಶ್ರೀ ರಾಮಚಂದ್ರಮೂರ್ತಿ ಶ್ರೀ ಮುರಳಿ ಶಿವ ನಾಗೇಶ್ವರರಾವ್ ತುಂಗಭದ್ರಾ ಸ್ಟೋನ್ ಕ್ರಷರ್ ಇವರು ಮಾತನಾಡಿ

ಶಾರದಾ ಸಂಸ್ಥೆಗೆ 2025 – 26 ನೇ ಸಾಲಿನಲ್ಲಿ ಮಧ್ಯಮ ವರ್ಗದ ಮಕ್ಕಳಿಗೆ ಉತ್ತಮ ಶಿಕ್ಷಣ ದೊರೆಯಲಿ ಎಂದು ನಾವು ನಮ್ಮ ಅಳಿಲು ಸೇವೆಯನ್ನು ಸಲ್ಲಿಸಿದ್ದೇವೆ ಎಂದು ಮಾತನಾಡಿದರು.

ನಂತರ ಶಿಕ್ಷಕರ ಸತತ ಪರಿಶ್ರಮವನ್ನು ಗುರುತಿಸಿ ಶಾರದಾ ಸಂಸ್ಥೆ ಕಾರ್ಯದರ್ಶಿಗಳು ಶ್ರೀ ಆರ್. ರಾಜಶೇಖರ್ ಅವರು ತಮ್ಮ ಸ್ವ–ಇಚ್ಛೆಯಿಂದ ಎಲ್ಲಾ ಶಿಕ್ಷಕ ಶಿಕ್ಷಕರಿಗೆ ಸಿಬ್ಬಂದಿಗೆ ಶಿಕ್ಷಕರ ದಿನಾಚರಣೆ ಅಂಗವಾಗಿ ಕಾಣಿಕೆಗಳನ್ನು ನೀಡಿರುತ್ತಾರೆ.

ಈ ಕಾರ್ಯಕ್ರಮದಲ್ಲಿ ಶಿಕ್ಷಣಾಧಿಕಾರಿ ಎಚ್ ಬಿ ನಟೇಶ್, ಗೌರವಾಧ್ಯಕ್ಷರು ಶ್ರೀ ಟಿ.ವಿ ಸತ್ಯನಾರಾಯಣ್, ಸಂಸ್ಥೆ ಉಪಾಧ್ಯಕ್ಷರಾದ ಶ್ರೀ ಡಿ. ರಾಮಕೃಷ್ಣರವರು ಖಜಾಂಚಿಗಳಾಗಿರುವ ಶ್ರೀ ಎಂ. ಸತ್ಯನಾರಾಯಣ್ ಸಹ ಕಾರ್ಯದರ್ಶಿಗಳಾಗಿರುವ ಶ್ರೀ ಕಮ್ಮಾ ಕೋಟೇಶ್ವರರಾವ್, ಕೆ ತ್ರಿನಾಥ್, ಸದಸ್ಯ ಶ್ರೀ ಗೊಟ್ಟಿಪಾಟಿ ರವಿಕುಮಾರ್, ಶ್ರೀ ಎನ್. ಆರ್. ಶ್ರೀನಿವಾಸ್, ಶ್ರೀ ಸಿ.ಎಚ್. ರಾಮಕೃಷ್ಣ ಕಲ್ಯಾಣಂಜಾನಕಿರಾಮ, ಶ್ರೀ ಜಿ. ರಾಯುಡು, ಶ್ರೀ ಕೆ.ಬಿ. ಗೋಪಾಲಕೃಷ್ಣ ರೆಡ್ಡಿ, ಶ್ರೀ ಪಿ.ಲಕ್ಷ್ಮಣ್‌ರಾವ್, ಶ್ರೀ ಜಿ. ಕೃಷ್ಣಾರಾವ್, ಶ್ರೀ ಟಿ.ವಿ.ಸುಬ್ಬರಾವ್, ಶ್ರೀ ಎಸ್. ವೆಂಕಟೇಶ್ವರ್ ರಾವ್, ಶ್ರೀ ಜವ್ವಾದಿ ಸಾಯಿಬಾಬು, ಶ್ರೀ ಮೇಕಾ ರಾಮಕೃಷ್ಣ ಸಂಸ್ಥೆಯ ಆಡಳಿತ ಅಧಿಕಾರಿ ಶ್ರೀ ವೈ ಸುದರ್ಶನ್ ರಾವ್ ಮತ್ತು ಮುಖ್ಯ ಉಪಾಧ್ಯಾಯನಿ ಉದಯಶ್ರೀ ಶಿಕ್ಷಕ ಮತ್ತು ಸಿಬ್ಬಂದಿ, ಮತ್ತು ಎನ್. ಆರ್. ಶಾಲೆ, ಎಸ್.ಜಿ.ವಿ.ಆರ್. ತೆಲುಗು ಮಾಧ್ಯಮ ಪ್ರೌಢಶಾಲೆ, ಹೆಚ್.ಆರ್. ಸರೋಜಮ್ಮ ಪ್ರಾಥಮಿಕ ಶಾಲೆ, ಎಸ್.ಜಿ.ವಿ. ಆರ್. ಆಂಗ್ಲ ಮಾಧ್ಯಮ ಶಾಲೆ ಮತ್ತು ವೈ.ಜೆ.ಆರ್ ಕಾಲೇಜಿನ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿ ಭಾಗವಹಿಸಿದ್ದರು.

## ಅಸ್ಲಾಂಮಿಯಾ ಅವರಿಂದ ಕಾವಡಿ ಅವರಿಗೆ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಬೀದರ್:–ಪರಿಸರವಾದಿ ಶೈಲೇಂದ್ರ ಕಾವಡಿ ಇವರು ಕಳೆದ 12 ವರ್ಷಗಳಿಂದ ಪರಿಸರೋತ್ಸವ ಅಂಗವಾಗಿ ಕಲ್ಯಾಣ ಕರ್ನಾಟಕದಲ್ಲಿ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ಸಾಧಕರಿಗೆ ಹಾಗೂ ವಿಶೇಷವಾಗಿ ಪರಿಸರ ಸಂರಕ್ಷಣೆಯಲ್ಲಿ ಗಣನೀಯ ಸೇವೆ ಸಲ್ಲಿಸಿದವರಿಗೆ ಪರಿಸರೋತ್ಸವ ಪ್ರಶಸ್ತಿ ಕೊಡುವಂತ ಕಾರ್ಯ ಮಾಡುತ್ತಿರುವುದರಿಂದ ಪರಿಸರ ಸಂರಕ್ಷಣೆಗೆ ತುಂಬಾ ಸಹಾಯವಾಗುತ್ತಿದೆ. ಎಂದು ಸಮಾಜ ಕಾರ್ಯಕರ್ತ ಮಹಮ್ಮದ್ ಅಸ್ಲಾಂಮಿಯಾ ಬೀದರ್ ತಾಲೂಕಿನ ಮರಕುಂದಾ ಗ್ರಾಮದಲ್ಲಿ ಜರುಗಿದ ಪರಿಸರೋತ್ಸವ ಕಾರ್ಯಕ್ರಮ ಲ್ದಲ್ಲಿ ಶೈಲೇಂದ್ರ ಕಾವಡಿ ಅವರಿಗೆ ಸನ್ಮಾನಿಸಿ ಗೌರವಿಸಿದರು.

## ಮಾಜಿ ದೇವದಾಸಿ ಮರುಸಮೀಕ್ಷೆಕ್ಕೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಸೆಪ್ಟೆಂಬರ್ 19–ಯಾದಗಿರಿ ಜಿಲ್ಲೆಯಲ್ಲಿ ಮಾಜಿ ದೇವದಾಸಿ ಮಹಿಳೆಯರ ಮರುಸಮೀಕ್ಷೆಯನ್ನು ನಡೆಸಲಾಗುತ್ತಿದೆ ಎಂದು ಯಾದಗಿರಿ ಮಾಜಿ ದೇವದಾಸಿ ಮಹಿಳೆಯರ ಮರುಸಮೀಕ್ಷೆಯ ಜಿಲ್ಲಾ ಮಟ್ಟದ ಸಮಿತಿ ಸದಸ್ಯ ಕಾರ್ಯದರ್ಶಿಗಳು ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕರು ಶ್ರೀ ತಿಪ್ಪಣ್ಣ ಸಿರಸಗಿ ಅವರು ತಿಳಿಸಿದ್ದಾರೆ.

ಯಾದಗಿರಿ ಜಿಲ್ಲೆಯ ಮಾಜಿ ದೇವದಾಸಿ ಮಹಿಳೆಯರ ಮರುಸಮೀಕ್ಷೆ 2025ಯನ್ನು ಕೈಗೊಂಡಿದ್ದು, (ಎ) ಈಗಾಗಲೇ ಸರ್ಕಾರದಿಂದ 1993–94 ಮತ್ತು 2007–08ನೇ ಸಾಲುಗಳಲ್ಲಿ ನಡೆಸಲಾದ ಸಮೀಕ್ಷೆಯಲ್ಲಿ ಇದ್ದು, ಮರಣ ಹೊಂದಿರುವ ಮಹಿಳೆಯ ಕುಟುಂಬದ ಅಧೀಕೃತ ಸದಸ್ಯರು ನಮೂನೆ–1ರಲ್ಲಿ ಸಲ್ಲಿಸಬೇಕು.

(ಬಿ) ಈ ಹಿಂದೆ 1993–94 ಮತ್ತು 2007–08ನೇ ಸಾಲುಗಳಲ್ಲಿ ನಡೆಸಲಾದ ಸಮೀಕ್ಷೆಯಲ್ಲಿ ಹೊರಗುಳಿದ, ಹಾಲಿ ಜೀವಂತವಿರುವ ಹೊಸದಾಗಿ ದೇವದಾಸಿ ಪಟ್ಟಿಗೆ ಸೇರ್ಪಡೆ ಬಯಸುವ ದೇವದಾಸಿ ಮಹಿಳೆಯರು ನಮೂನೆ–2ರಲ್ಲಿ ಸಲ್ಲಿಸಬೇಕು, (ಸಿ) ಈ ಹಿಂದೆ 1993–94 ಮತ್ತು 2007–08ನೇ ಸಾಲುಗಳಲ್ಲಿ ನಡೆಸಲಾದ ಸಮೀಕ್ಷೆಯಲ್ಲಿ ಹೊರಗುಳಿದ ಮತ್ತು ಪ್ರಸ್ತುತ ಮರಣ ಹೊಂದಿರುವ ಮಹಿಳೆಯರ ಕುಟುಂಬದ ಅಧೀಕೃತ ಸದಸ್ಯರು ನಮೂನೆ–3ರಲ್ಲಿ ಅರ್ಜಿಯನ್ನು ಭರ್ತಿ ಮಾಡಿ ಅಗತ್ಯ ದಾಖಲೆಗಳಾದ ಮಹಿಳೆಯ ಆಧಾರ್ ಕಾರ್ಡ್, ಮಹಿಳೆಯ ಮರಣ ಪ್ರಮಾಣ ಪತ್ರ, ವಂಶವೃಕ್ಷ, ಕುಟುಂಬದ ಅಧೀಕೃತ ಸದಸ್ಯರ ಆಧಾರ್ ಕಾರ್ಡ್, ಹೊಸ ಸೇರ್ಪಡೆ ಬಯಸುವ ಮಹಿಳೆಯರ ವಯಸ್ಸಿನ ದೃಢೀಕರಣ ಪತ್ರಗಳೊಂದಿಗೆ ಅರ್ಜಿಯನ್ನು ಸಂಬಂಧಪಟ್ಟ ತಾಲ್ಲೂಕುಗಳ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇಲ್ಲಿಗೆ 2025ರ ಅಕ್ಟೋಬರ್ 4ರ ಒಳಗೆ ಅರ್ಜಿ ಸಲ್ಲಿಸಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸ್ವ ಸಹಾಯ ಸಂಘದ ಮಹಿಳಾ ಸದಸ್ಯರಿಗೆ ಕೃಷಿ ಅಧ್ಯಯನ ಪ್ರವಾಸ



ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ: ತಾಲೂಕಿನ ಅಳವಂಡಿ ವಲಯದ ಕಾರ್ಯಕ್ಷೇತ್ರದ ಸ್ವ ಸಹಾಯ ಸಂಘದ ಮಹಿಳಾ ಸದಸ್ಯರಿಗೆ ಕೃಷಿ ವಿಸ್ತರಣಾ ಕಾರ್ಯಕ್ರಮದಡಿಯಲ್ಲಿ ಕೃಷಿ ಅಧ್ಯಯನ ಪ್ರವಾಸವನ್ನು ಮಾಡಲಾಯಿತು . ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮ ಅಭಿವೃದ್ಧಿ ಯೋಜನೆಯ ಕೃಷಿ ಮೇಲ್ವಿಚಾರಕರಾದ ಅಶೋಕ್ ರವರು ಯೋಜನೆಯ ಕಾರ್ಯಕ್ರಮಗಳು ಹಾಗೂ ರೈತರಿಗೆ ಉಪಯುಕ್ತ ಮಾಹಿತಿಗಳನ್ನು ಕೊಡಿಸಲು ಮತ್ತು ಕೃಷಿಗೆ ಹೆಚ್ಚು ಹೊತ್ತು ಕೊಡುವ ಸಲುವಾಗಿ. ಹನುಮಸಾಗರದ ಕೃಷಿ ಪಂಡಿತರಾದ ಮಹಮ್ಮದ್ ಸಿರಾಜ್ ಮುಲಿಮನಿ ರವರ ನರ್ಸರಿ ಭೇಟಿ ಮಾಡಿಸಿ ಕೃಷಿಯಲ್ಲಿ ತಾಳ್ಮೆ ಮತ್ತು ಕೌಶಲ್ಯ.ಜ್ಞಾನ ಹೊಂದಿದ್ದರೆ ಕೃಷಿಯಲ್ಲಿ ಯಶಸ್ಸು ಕಾಣಲು ಸಾಧ್ಯ ಜೊತೆಗೆ. ಸೀತಾಪಲ, ನಿಂಬೆ, ಮಿನುಸಾಕಣೆ. ಕಾಡುಬದನೆಯಲ್ಲಿ ನಾಡು ಬದನೇಕಾಯಿ ಕಸಿ ಮಾಡಿರುವ ನರ್ಸರಿ ಭೇಟಿ. ಮತ್ತು ಕೃಪಾಬ್ರುತ. ಹಣ್ಣಿನ ರಾಸಾಯನ. ಸಾವಯವ ಮಾದರಿಯಲ್ಲಿ ಮಾಡಿರುವ ಕೃಷಿಯ ಬಗ್ಗೆ ಪ್ರೇರಣೆಯ ಮಾಹಿತಿಯನ್ನಾ ಕೊಡಿಸಲಾಯಿತು ಅಧ್ಯಯನ ಪ್ರವಾಸದಲ್ಲಿ ಭಾರತಿ, ಜುಲೇಖ, ಶಾರದಾ, ಲಲಿತಮ್ಮ, ಮಹಾಲಕ್ಷ್ಮೀ, ಸೇವಾಪ್ರತಿನಿಧಿ ಲಕ್ಷ್ಮಿದೇವಿ, ಒಟ್ಟು 24 ಮಹಿಳಾ ಸ್ವ ಸಹಾಯ ಸಂಘದ ಸದಸ್ಯರು ಭಾಗವಹಿಸಿದ್ದರು.

## ಅರೆಕಾಲಿಕ ಕಾನೂನು ಸ್ವಯಂ ಸೇವಕರ (P.L.V Para-Legal Volunteers) ನೇಮಕಾತಿಗಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಸೆಪ್ಟೆಂಬರ್ 19–ಯಾದಗಿರಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ತಾಲೂಕು ಕಾನೂನು ಸೇವಾ ಸಮಿತಿ ಶಹಾಪೂರ, ಸುರಪುರಕ್ಕೆ ಅರೆಕಾಲಿಕ ಕಾನೂನು ಸ್ವಯಂ ಸೇವಕರ (P.L.V Para-Legal Volunteers)ಗಳ ನೇಮಕಾತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಧ್ಯಕ್ಷರು ಹಾಗೂ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಗೌರವಾನ್ವಿತ ಶ್ರೀ ಮರುಳಸಿದ್ದಾರಾಧ್ಯ, ಹೆಚ್.ಜಿ ಅವರು ತಿಳಿಸಿದ್ದಾರೆ.

ಶಿಕ್ಷಕರು (ನಿವೃತ್ತ ಶಿಕ್ಷಕರೂ ಸಹ), ಪಂಚಾಯತ್‌ನ ಮಾಜಿ ಸದಸ್ಯರು, ನಿವೃತ್ತ ಸರ್ಕಾರಿ ನೌಕರರು, ಹಿರಿಯ ನಾಗರೀಕರು, ಕಾನೂನು ನೆರವು ನೀಡಲು ಬದ್ಧತೆಯಿಂದ ಕೆಲಸ ಮಾಡುವ ಸಮಾಜ ಸೇವಕರು, ಮಹಿಳೆಯರು, ಟ್ರಾನ್ಸ್ ಜಂರ್ಸ್, ಬುಡಕಟ್ಟು ಸಮುದಾಯದ ವ್ಯಕ್ತಿಗಳು, ಕಡೆಗಣಿಸಲ್ಪಟ್ಟ ಸಮುದಾಯಗಳ ವ್ಯಕ್ತಿಗಳ, ಸಮಾಜದ ಗಣ್ಯ ವ್ಯಕ್ತಿಗಳು, ಎಂ.ಎಸ್, ಡಬ್ಲ್ಯೂ, ವಿದ್ಯಾರ್ಥಿಗಳು, ಅಂಗನವಾಡಿ ಕಾರ್ಯಕರ್ತೆಯರು, ವೈದ್ಯರು ಮತ್ತು ಫಿಜಿಶಿಯನ್ಸ್ ವಿದ್ಯಾರ್ಥಿಗಳು, ಕಾನೂನು ವಿದ್ಯಾರ್ಥಿಗಳು (ವಕೀಲ ವೃತ್ತಿಗೆ ನೋಂದಾಯಿಸಿಕೊಳ್ಳುವವರೆಗೆ) ರಾಜಕೀಯೇತರ ಸೇವಾ ಮನೋಭಾವದ ಎನ್.ಜಿ.ಓ.ಗಳ ಮತ್ತು ಕ್ಲಬ್‌ಗಳ ಸದಸ್ಯರು, ಮಹಿಳಾ ನೆರೆಹೊರೆಯ ಗುಂಪುಗಳು, ಮೈತ್ರಿ ಸಂಘಗಳ, ಸದಸ್ಯರು, ದುರ್ಬಲ ಹಾಗೂ ತುಳಿತಕ್ಕೊಳಗಾದವರನ್ನೊಳಗೊಂಡಿರುವ ಸ್ವ ಸಹಾಯಕ ಗುಂಪುಗಳ ಸದಸ್ಯರು, ವಿದ್ಯಾವಂತ ಮತ್ತು ಉತ್ತಮ ನಡತೆವುಳ್ಳ ಖೈದಿಗಳ ಮತ್ತು ದೀರ್ಘಾವಧಿ ಶಿಕ್ಷೆಗೊಳಗಾದ ಖೈದಿಗಳು, ಮೃತ ಸೈನಿಕರ ವಿಧವಾ ಪತ್ನಿಯರು, ನಿವೃತ್ತ ಸೈನಿಕರು ಅಥವಾ ಅವರ ಅವಲಂಬಿತರು, ರಕ್ಷಣಾ ಇಲಾಖೆಯಲ್ಲಿ ಕೆಲಸ ನಿರ್ವಹಿಸುತ್ತಿರುವ ವ್ಯಕ್ತಿಗಳ ಬಾಳ ಸಂಗಾತಿ ಅಥವಾ ಅವರ ವಯಸ್ಕ ಮಕ್ಕಳು, ಅರ್ಜಿಯನ್ನು ಸಲ್ಲಿಸಬಹುದಾಗಿದೆ.

ಮಾನ್ಯ ಯಾದಗಿರಿ ಜಿಲ್ಲಾ ನ್ಯಾಯಾಲಯದ ವೆಬ್‌ಸೈಟ್ (districts.ecourts.gov.in/yadgir) ನಲ್ಲಿ ಅಥವಾ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಕಛೇರಿ, ಜಿಲ್ಲಾ ನ್ಯಾಯಾಲಯ ಆವರಣ, ಯಾದಗಿರಿ ಹಾಗೂ ತಾಲೂಕು ಕಾನೂನು ಸೇವಾ ಸಮಿತಿ ಶಹಾಪೂರ, ಸುರಪುರ ಕಛೇರಿಗಳಲ್ಲಿ ಅರೆಕಾಲಿಕ ಸ್ವಯಂ ಸೇವಕರ (ಕ.ಐ.ಗಿ ಕಚಿಡಿಚಿ–ಐಜಿಂಚಿಟ ಗಿಂಟಣಟಿಣಜಜಡಿ) ಆಯ್ಕೆಗಾಗಿ ಅರ್ಜಿಯನ್ನು ಪಡೆದು 2025ರ ಸೆಪ್ಟೆಂಬರ್ 30ರ ಒಳಗೆ ತಮ್ಮ ಹೆಸರು, ಪೂರ್ಣ ವಿಳಾಸ, ದೂರವಾಣಿ ಸಂಖ್ಯೆ ಇ–ಮೇಲ್ ವಿದ್ಯಾರ್ಹತೆ, ಜಾತಿ ಅನುಭವ ಇತ್ಯಾದಿ ವಿವರಗಳೊಂದಿಗೆ ಒಪ್ಪಿಗೆ ಪತ್ರದ ಜೊತೆಗೆ ಅರ್ಜಿಯನ್ನು ಸಲ್ಲಿಸಬೇಕು, ಹೆಚ್ಚಿನ ಮಾಹಿತಿಗಾಗಿ ಯಾದಗಿರಿ ಹಣಮಯ್ಯ ಮೊ.ನಂ.9035686662, ಸುರಪುರ ಭೀಮಣ್ಣ ಬನಸೋಡೆ ಮೊ.ನಂ.9591464967, ಶಹಾಪೂರ ಆಶಾ ಮೊ.ನಂ.8861094962ಗೆ ಯಾದಗಿರಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಮರಿಯಪ್ಪ ಇಲ್ಲಿಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಸೆಪ್ಟೆಂಬರ್ 19, – 2025–26ನೇ ಸಾಲಿನ ಜಿಲ್ಲಾ ಮಟ್ಟದ ಯುವಜನೋತ್ಸವ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಂಯುಕ್ತಾಶ್ರಯದಲ್ಲಿ ಯಾದಗಿರಿ ನಗರದ ಪದವಿ ಮಹಾವಿದ್ಯಾಲಯದ ಸಭಾಂಗಣದಲ್ಲಿ 2025ರ ಅಕ್ಟೋಬರ್ 15 ರಂದು ಯಾದಗಿರಿ ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಯಾದಗಿರಿ ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ರಾಜುಬಾವಿಹಳ್ಳಿ ಅವರು ತಿಳಿಸಿದ್ದಾರೆ.

15 ರಿಂದ 29 ವರ್ಷ ಒಳಗಿರಬೇಕು, ವಿದ್ಯಾರ್ಥಿ, ವಿದ್ಯಾರ್ಥಿನಿಯರು, ಯುವಕ, ಯುವತಿ ಸಂಘದ ಸದಸ್ಯರುಗಳು ಭಾಗವಹಿಸಬಹುದಾಗಿದೆ. ಈ ಕಾರ್ಯಕ್ರಮದ ಸ್ಪರ್ಧೆಗಳು 1) ಜನಪದ ನೃತ್ಯ (ತಂಡ), 2) ಜಾನಪದ ಗೀತೆ (ತಂಡ) (ಪ್ರಾದೇಶಿಕ ಭಾಷೆ), 3) ಕಥೆ ಬರೆಯುವುದು (ಖಣಂಡಿಥಿ ತಿಡಿುಣುಟಿಂ) (1000 ಪದಗಳಿಗೆ ಮೀರದಂತೆ) ಹಿಂದಿ/ಆಂಗ್ಲ/ಪ್ರಾದೇಶಿಕ ಭಾಷೆಯಲ್ಲಿ), 4) ಚಿತ್ರಕಲೆ (ಕಚಿುಟಿಣುಟಿಂ) 03 ಖುದಜ ು.ಜ.,11.7"ಥ16.5", 5) ಆಜಛಿಟಚಿಟಚಿಣುಂಟಿ (ಘೋಷಣೆ) ಭಾಷೆ: ಹಿಂದಿ ಮತ್ತು ಆಂಗ್ಲ ಭಾಷೆಯಲ್ಲಿ ಇರಬೇಕು ಸ್ಪರ್ಧಿಗಳು ಸಿದ್ಧಪಡಿಸಿಕೊಂಡಿರುವ ಆಯ್ದ ವಿಷಯಗಳ ಬಗ್ಗೆ 7 ನಿಮಿಷಗಳ ಭಾಷಣ ಮಾಡಬೇಕು. 6) ಕವಿತೆ ಬರೆಯುವುದು (ಕಂಜಣಡಿಥಿ) (ವೈಯಕ್ತಿಕ–ಹಿಂದಿ, ಆಂಗ್ಲ, ಪ್ರಾದೇಶಿಕ ಭಾಷೆಯಲ್ಲಿ, 7) Exhibition of Science Mela ಏರ್ಪಡಿಸಿದೆ. ಜಿಲ್ಲಾ ಮಟ್ಟದ ಯುವಜನೋತ್ಸವದಲ್ಲಿ ಭಾಗವಹಿಸಲು ಇಚ್ಛಿಸುವ ವಿದ್ಯಾರ್ಥಿ, ವಿದ್ಯಾರ್ಥಿನಿಯರು, ಯುವಕ, ಯುವತಿಯರು, ತಮ್ಮ ಹೆಸರು, ವಿಳಾಸ, ಭಾಗವಹಿಸುವ ಸ್ಪರ್ಧೆಯ ವಿವರ ಯಾದಗಿರಿ ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ಕಛೇರಿ ಜಿಲ್ಲಾ ಕ್ರೀಡಾಂಗಣದಲ್ಲಿ 2025ರ ಅಕ್ಟೋಬರ್ 12 ರಂದು ಸಂಜೆ 5 ಗಂಟೆಯ ಒಳಗೆ ನೊಂದಾಯಿಸಿಕೊಳ್ಳಬೇಕು, ಜಿಲ್ಲಾ ಮಟ್ಟದಲ್ಲಿ ಪ್ರಥಮ ಸ್ಥಾನ ವಿಜೇತರಾದ ಯುವ ಕಲಾವಿದರನ್ನು ರಾಜ್ಯ ಮಟ್ಟದ ಯುವಜನೋತ್ಸವದಲ್ಲಿ ಭಾಗವಹಿಸಲು ಅವಕಾಶ ನೀಡಿದೆ. ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು, ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಯಾದಗಿರಿ ಇಲ್ಲಿಗೆ ಕಛೇರಿ ಸಮಯದಲ್ಲಿ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ನಾಡಹಬ್ಬ ಮೈಸೂರು ದಸರಾ ಹಿನ್ನೆಲೆ ಮೈಸೂರು ನಗರದ ಮೈದಾನದಲ್ಲಿ ಆನೆಗಳೊಂದಿಗೆ ಮದ್ದುಗುಂಡುಗಳ ತಾಲೀಮು ನಡೆಸಲಾಯಿತು.

# ತೊಗರಿ ಬೆಳೆಯಲ್ಲಿ ಕಂಡುಬರುವ ಗಂಧಕದ ಕೊರತೆ ನಿವಾರಣೆಗೆ ಸಲಹೆ

**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,ಸೆ.19-ಜಿಲ್ಲೆಯ ವಿವಿಧ ತಾಲ್ಲೂಕಿನಲ್ಲಿ ಬೆಳೆದ ತೊಗರಿ ಬೆಳೆಯಲ್ಲಿ ಕಂಡುಬರುತ್ತಿರುವ ಗಂಧಕದ ಕೊರತೆಯ ಲಕ್ಷಣಗಳನ್ನು ಸುಲಭವಾಗಿ ನಿವಾರಿಸಬಹುದು ಎಂದು ಹಗರಿಯ ಐಸಿಎಆರ್ ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿಗಳು ತಿಳಿಸಿದರು.ಗುರುವಾರ ಹಗರಿಯ ಐಸಿಎಆರ್ ಕೃಷಿ ವಿಜ್ಞಾನ ಕೇಂದ್ರದ ಹಿರಿಯ ವಿಜ್ಞಾನಿ ಹಾಗೂ ಕೇಂದ್ರದ ಮುಖ್ಯಸ್ಥರಾದ ಡಾ.ಪಾಲಯ್ಯ.ಪಿ., ಹಿರಿಯ ವಿಜ್ಞಾನಿ (ಮಣ್ಣು ವಿಜ್ಞಾನ) ಡಾ.ರವಿ ಎಸ್., ವಿಜ್ಞಾನಿ (ಗೃಹ ವಿಜ್ಞಾನ) ರಾಜೇಶ್ವರಿ ಹಾಗೂ (ಕೃಷಿ ವಿಸ್ತರಣೆ) ಡಾ.ನವೀನ್‌ಕುಮಾರ್.ಪಿ ಅವರನ್ನೊಳಗೊಂಡ ತಂಡವು ಬಳ್ಳಾರಿ ತಾಲ್ಲೂಕಿನ ಕಗ್ಗಲ್ಲು ಗ್ರಾಮದ ಪ್ರಗತಿಪರ ರೈತರಾದ ಸಮುದ್ರರಾಜ ಅವರ ತೊಗರಿ ಕ್ಷೇತ್ರಕ್ಕೆ ಹಾಗೂ ವಿವಿಧ ಹಳ್ಳಿಗಳಿಗೆ ಭೇಟಿ ನೀಡಿ ತೊಗರಿ ಬೆಳೆಯಲ್ಲಿ ಇತ್ತೀಚೆಗೆ ಕಾಣಿಸಿಕೊಂಡಿರುವ ಗಂಧಕದ ಕೊರತೆಯ ಲಕ್ಷಣಗಳ ಬಗ್ಗೆ ರೈತರಲ್ಲಿ ಜಾಗೃತಿ ಮೂಡಿಸಿದರು.

ಗಂಧಕದ ಕೊರತೆಯಿಂದ ಎಲೆಗಳು ಮೊದಲು ಹಳದಿ ಬಣ್ಣಕ್ಕೆ ತಿರುಗಿ ನಂತರ ಚಿಕ್ಕದಾಗಿ ಸಂಪೂರ್ಣ ಹಳದಿ ಬಣ್ಣಕ್ಕೆ ತಿರುಗುತ್ತದೆ. ಈ ಕಾರಣದಿಂದ ಗಿಡದ ಬೇರುಗಳು ಕಪ್ಪು ಬಣ್ಣಕ್ಕೆ ತಿರುಗುತ್ತದೆ ಮತ್ತು ಸಸ್ಯಗಳ ಬೆಳವಣಿಗೆ ಕುಂಠಿತಗೊಳ್ಳುತ್ತದೆ. ಈ ತರಹದ ಲಕ್ಷಣಗಳು ಈಗಾಗಲೇ ತಾಲ್ಲೂಕಿನ ಬೇರೆ ಬೇರೆ ಭಾಗಗಳಲ್ಲಿ ಕಾಣಿಸಿಕೊಂಡಿದೆ.

ವಿಜ್ಞಾನಿಗಳ ತಂಡ ರೈತರ ಕ್ಷೇತ್ರಗಳಿಗೆ ಭೇಟಿ ನೀಡಿ ಈ ಸಮಸ್ಯೆಯನ್ನು ಹತೋಟಿಗೆ ತರಲು ಪ್ರತಿ ಎಕರೆಗೆ 20 ಕೆ.ಜಿ ಅಮೋನಿಯಂ ಸಲ್ಫೇಟ್ ಅಥವಾ 10 ಕೆ.ಜಿ ಪೊಟ್ಯಾಶಿಯಂ ಸಲ್ಫೇಟ್ ಅಥವಾ 50 ಕೆ.ಜಿ ಸೂಪರ್ ಪಾಸ್ಫೇಟ್ ಅಥವಾ 100 ಕೆ.ಜಿ ಜಿಪ್ಸಂ ನ್ನು ಬೆರೆಸಿ ಸಿಂಪಡಿಸುವುದರ ಮೂಲಕ ಗಂಧಕದ ಕೊರತೆಯನ್ನು ಸುಲಭವಾಗಿ ನಿವಾರಿಸಬಹುದಾಗಿದೆ ಎಂದು ರೈತರಿಗೆ ಮನವರಿಕೆ ಮಾಡಿಕೊಟ್ಟರು.

# ಕುಟುಂಬಕ್ಕೆ ವಿಮಾ ಪರಿಹಾರ ಹಸ್ತಾಂತರ




**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,ಸೆ.19-ಬಳ್ಳಾರಿ ಜಿಲ್ಲಾ ಪಂಚಾಯತ್ ಶಾಖೆಯ ಕೆನರಾ ಬ್ಯಾಂಕ್ ನಿಂದ ಮೃತ ಗ್ರಾಹಕ ಮನೋಜ್ ಕುಮಾರ್ ಅವರಿಗೆ ಕೆನರಾ ಹೆಚ್‌ಎಸ್‌ಬಿಸಿ ಸಂಸ್ಥೆಯು ರೂ.10,58,500 ಮೊತ್ತದ ವಿಮಾ ಪರಿಹಾರ ಚೆಕ್ ನ್ನು ಅವರ ಕುಟುಂಬಕ್ಕೆ ಹಸ್ತಾಂತರಿಸಿದೆ.

ಗ್ರಾಹಕ ಮನೋಜ್ ಕುಮಾರ್ ಅವರು ವಿದ್ಯಾಭ್ಯಾಸಕ್ಕಾಗಿ ವಿದ್ಯಾರ್ಥಿ ಶಿಕ್ಷಣ ಸಾಲವನ್ನು ಈ ಬ್ಯಾಂಕ್ ನಿಂದ ಕೆನರಾ ಹೆಚ್‌ಎಸ್‌ಬಿಸಿ ಕವಚ ವಿಮಾ ಪಾಲಿಸಿ ಅಡಿ ರೂ.1,35,021 ಏಕಕಾಲದ ಪ್ರೀಮಿಯಂ ಪಾವತಿಸಿ ವಿಮೆ ಮಾಡಲಾಗಿತ್ತು.

ಗ್ರಾಹಕ ಮನೋಜ್ ಕುಮಾರ್ ಅವರು ಪ್ರವಾಸಿ ಚಟುವಟಿಕೆಯ ಟ್ರೆಕ್ಕಿಂಗ್ ಗೆ ತೆರಳಿದ್ದ ಸಂದರ್ಭದಲ್ಲಿ ಅಕಾಲಿಕವಾಗಿ ನಿಧನರಾದರು. ಶಿಕ್ಷಣ ಸಾಲಕ್ಕೆ ವಿಮೆ ಹೊಂದಿದ್ದ ಕಾರಣದಿಂದ ಕುಟುಂಬಕ್ಕೆ ಆರ್ಥಿಕ ಸಹಾಯ ದೊರಕುವಂತಾಯಿತು.

ಕೆನರಾ ಹೆಚ್‌ಎಸ್‌ಬಿಸಿ ಸಂಸ್ಥೆಯು ತಕ್ಷಣ ಪ್ರತಿಕ್ರಿಯಿಸಿ ರೂ.10,58,500 ಮೊತ್ತವನ್ನು ವಿಮಾ ಪರಿಹಾರವಾಗಿ ಮಂಜೂರು ಮಾಡಿದೆ. ಈ ಮೊತ್ತದ ಚೆಕ್ ನ್ನು ಕೆನರಾ ಬ್ಯಾಂಕ್ ಪ್ರಾದೇಶಿಕ ಕಚೇರಿ ಬಳ್ಳಾರಿಯ ಪ್ರಾದೇಶಿಕ ವ್ಯವಸ್ಥಾಪಕ ಅರುಣ್ ಕುಮಾರ್ ಎ.ಜಿ., ಕೆನರಾ ಬ್ಯಾಂಕ್ ಆರ್‌ಎಹೆಚ್ ಬಳ್ಳಾರಿ ಮುಖ್ಯಸ್ಥ ಕಿಶೋರ್ ಕುಮಾರ್ ಅವರ ಸಮ್ಮುಖದಲ್ಲಿ ಕುಟುಂಬದವರಿಗೆ ಹಸ್ತಾಂತರಿಸಿದರು.

ಗ್ರಾಹಕರ ಹಿತಾಸಕ್ತಿಯನ್ನು ಕಾಪಾಡುವುದು ನಮ್ಮ ಬ್ಯಾಂಕ್ ನ ಧ್ಯೇಯವಾಗಿದ್ದು, ಶಿಕ್ಷಣ ಸಾಲ ಪಡೆದ ಪ್ರತಿಯೊಬ್ಬ ವಿದ್ಯಾರ್ಥಿಗೂ ಭವಿಷ್ಯದ ಭದ್ರತೆ ಕಲ್ಪಿಸುವ ಉದ್ದೇಶದಿಂದ ವಿಮಾ ಯೋಜನೆಗಳನ್ನು ಅನುಸರಿಸುತ್ತಿದ್ದೇವೆ. ಇಂತಹ ಅಕಾಲಿಕ ದುರಂತ ಸಂದರ್ಭಗಳಲ್ಲಿ ಕುಟುಂಬಕ್ಕೆ ಆರ್ಥಿಕ ಭದ್ರತೆ ನೀಡುವುದು ಬ್ಯಾಂಕ್ ಹಾಗೂ ವಿಮಾ ಸಂಸ್ಥೆಯ ಸಾಮಾಜಿಕ ಹೊಣೆಗಾರಿಕೆಯಾಗಿದೆ ಎಂದು ಕೆನರಾ ಬ್ಯಾಂಕ್ ನ ಪ್ರಾದೇಶಿಕ ವ್ಯವಸ್ಥಾಪಕ ಅರುಣ್ ಕುಮಾರ್ ಎ.ಜಿ ಅವರು ಹೇಳಿದರು.

ಇದೇ ವೇಳೆ ಕುಟುಂಬದವರು ಕೃತಜ್ಞತೆ ಸಲ್ಲಿಸಿದರು. ಕೆನರಾ ಬ್ಯಾಂಕ್ ಅಧಿಕಾರಿಗಳು ಹಾಗೂ ಕುಟುಂಬದ ಸದಸ್ಯರು ಇದ್ದರು.

# ಸೆ.30 ರಂದು ಉಪವಿಭಾಗ ಮಟ್ಟದ ಜಾಗೃತಿ ಸಮಿತಿ ಸಭೆ

**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,ಸೆ.19-ಮಲಹೊರುವ ಪದ್ಧತಿ ನಿಷೇಧ ಹಾಗೂ ಪುರ್ನವಸತಿ ಕಾಯ್ದೆಯನ್ವಯ ತ್ರೈಮಾಸಿಕ ಬಳ್ಳಾರಿ ಉಪವಿಭಾಗ ಮಟ್ಟದ 2025ನೇ ಸಾಲಿನ ಎರಡನೇ ತ್ರೈಮಾಸಿಕ ಜಾಗೃತಿ ಸಮಿತಿ ಸಭೆಯನ್ನು ಸೆ.30 ರಂದು ಬೆಳಿಗ್ಗೆ 11 ಗಂಟೆಗೆ ಸಹಾಯಕ ಆಯುಕ್ತರ ಕಚೇರಿಯ ಸಭಾಂಗಣದಲ್ಲಿ ನಿಗದಿಪಡಿಸಲಾಗಿದೆ ಎಂದು ಉಪವಿಭಾಗ ಮಟ್ಟದ ಜಾಗೃತಿ ಸಮಿತಿಯ ಅಧ್ಯಕ್ಷರು ಆದ ಸಹಾಯಕ ಆಯುಕ್ತರು ತಿಳಿಸಿದ್ದಾರೆ.

## ಕೊಪ್ಪಳ ತಾಲೂಕ ರಾಷ್ಟ್ರೀಯ ಈಡಿಗೇರ ಮಂಡಳಿ ಅಧ್ಯಕ್ಷರಾಗಿ ಬಸವರಾಜ ಗುತ್ತೇದಾರ್ ಆಯ್ಕೆ



**ಮಲ್ಲಮ್ಮ ನುಡಿ ವಾರ್ತೆ**

ಕೊಪ್ಪಳ:ತಾಲೂಕಿನ ಬೂದಗುಂಪ ಗ್ರಾಮದ ಹತ್ತಿರ ಇರುವ ಬುದೇಶ್ವರ ದೇವಸ್ಥಾನದ ಕಲ್ಯಾಣ ಮಂಟಪದಲ್ಲಿ ನಡೆದ ಸಭೆಯಲ್ಲಿ ರಾಷ್ಟ್ರೀಯ ಈಡಿಗ ಮಹಾಮಂಡಳಿಗೆ ಪದಾಧಿಕಾರಿಗಳನ್ನು ಘೋಷಿಸಲಾಯಿತು. ಈ ಸಮಯದಲ್ಲಿ ದಿವ್ಯ ಸಾನಿಧ್ಯವನ್ನು ಪ್ರಣವಾನಂದ ಸ್ವಾಮಿಗಳು ವಹಿಸಿದ್ದರು, ಮತ್ತು ಎಚ್ಚ್ ಆರ್ ಶ್ರೀನಾಥ್ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು.

ಜಿಲ್ಲಾ ಅಧ್ಯಕ್ಷರಾದ ರಾಜಪ್ಪ ಎಚ್ ಈಳಿಗೇರ ಅವರ ಅಧ್ಯಕ್ಷತೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ. ವಿವಿಧ ಘಟಕಗಳಿಗೆ ಪದಾಧಿಕಾರಿಗಳನ್ನು ನೇಮಿಸಲಾಯಿತು, ಇದೇ ಸಂದರ್ಭದಲ್ಲಿ ಕೊಪ್ಪಳ ತಾಲೂಕ ರಾಷ್ಟ್ರೀಯ ಈಡಿಗರ ಮಂಡಳಿಯ ಅಧ್ಯಕ್ಷರನ್ನಾಗಿ ಬಸವರಾಜ್ ಗುತೆ-ೃದಾರ್ ಸಾಕಿನ್ ಬೂದಗುಂಪ ಇವರನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಗಿದೆ ಎಂದು ಜಿಲ್ಲಾ ಅಧ್ಯಕ್ಷರು ಘೋಷಣೆ ಮಾಡಿದ್ದಾರೆ. ಸಭೆಯಲ್ಲಿ ನೂರಾರು ಈಡಿಗರ ಕುಲಬಾಂಧವರು ಭಾಗವಹಿಸಿದ್ದರು ಮತ್ತು ಪ್ರಣವಾನಂದ ಶ್ರೀಗಳ ಆಶೀರ್ವಚನ ಪಡೆದು ಪುನೀತರಾದರು.

# ಅರೇಕಾಲಿಕ ಕಾನೂನು ಸ್ವಯಂ ಸೇವಕರಾಗಿ ಕಾರ್ಯನಿರ್ವಹಿಸಲು ಅರ್ಹರಿಂದ ಅರ್ಜಿ ಆಹ್ವಾನ

**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,ಸೆ.19-ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದ ಮೇರೆಗೆ ಬಳ್ಳಾರಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದಲ್ಲಿ ಅರೆ ಕಾಲಿಕ ಕಾನೂನು ಸ್ವಯಂ ಸೇವಕರಾಗಿ (ಪಿಎಲ್‌ವಿ) ಕಾರ್ಯನಿರ್ವಹಿಸಲು ಆಸಕ್ತಿ ಹೊಂದಿರುವ, ವಿವಿಧ ಕ್ಷೇತ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.ವೈದ್ಯಕೀಯ ಕ್ಷೇತ್ರದಲ್ಲಿ ಕೆಲಸ ಮಾಡುತ್ತಿರುವ ವ್ಯಕ್ತಿಗಳು, ಉನ್ನತ ಶಿಕ್ಷಣ ಪಡೆಯುತ್ತಿರುವ ವಿದ್ಯಾರ್ಥಿಗಳು, ಶಿಕ್ಷಣ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರು, ಪ್ರಾಧ್ಯಾಪಕರು, ಕಾನೂನು ವಿದ್ಯಾಲಯಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು, ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು, ವಿವಿಧ ಸರ್ಕಾರಿ ಕಚೇರಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವವರು,ನಿವೃತ್ತ ಸರ್ಕಾರಿ ನೌಕರರು,ಮಾಜಿ ಯೋಧರು ಹಾಗೂ ಅವರ ಅವಲಂಭಿತರು, ಮಾಜಿ ಗ್ರಾಮ ಪಂಚಾಯಿತಿ ಸದಸ್ಯರು, ಹಿರಿಯ ನಾಗರಿಕರು, ಹಾಗೂ ವಿವಿಧ ಸಂಘಟನೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಾಮಾಜಿಕ ಸೇವಾ ಮನೋಭಾವ ಹೊಂದಿರುವ ಪುರುಷ ಹಾಗೂ ಮಹಿಳೆಯರು, ಮಂಗಳಮುಖಿಯರು, ಸನ್ನಡತೆ ಹೊಂದಿದ ಕಾರಾಗೃಹ ಬಂಧಿಗಳು ಮತ್ತು ಸ್ವ ಸಹಾಯ ಸಂಘಗಳ ಸದಸ್ಯರನ್ನು ಅರೇ ಕಾಲಿಕ ಕಾನೂನು ಸ್ವಯಂ ಸೇವಕರಾಗಿ (ಪ್ಯಾರಾ ಲೀಗಲ್ ವಾಲಂಟಿರ್ಸ್) ಕಾರ್ಯನಿರ್ವಹಿಸಲು ನೇಮಕ ಮಾಡಿಕೊಳ್ಳಬೇಕಾಗಿರುತ್ತದೆ. ಹಾಗಾಗಿ, ಸೇವಾ ಮನೋಭಾವನೆ ಹೊಂದಿದ ಆಸಕ್ತ ಅಭ್ಯರ್ಥಿಗಳು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಕಚೇರಿಯಿಂದ ನಿಗದಿತ ಅರ್ಜಿ ನಮೂನೆ ಪಡೆದುಕೊಂಡು, ಭರ್ತಿಮಾಡಿ ಅಕ್ಟೋಬರ್ 06 ರ ಸಂಜೆ 5.30 ರೊಳಗಾಗಿ ಖುದ್ದಾಗಿ ಇದೇ ಕಚೇರಿಗೆ ಸಲ್ಲಿಸಬೇಕು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಹಾತ್ಮಾ ಗಾಂಧಿ ನರೇಗಾ ಯೋಜನೆಯ ಜಾಬಕಾರ್ಡಗಳಿಗೆ ಇ-ಕೆವೈಸಿ ಕಡ್ಡಾಯ

**ಮಲ್ಲಮ್ಮ ನುಡಿ ವಾರ್ತೆ**

ಕೊಪ್ಪಳ :- ತಾಲ್ಲೂಕಿನ 38 ಗ್ರಾಮ ಪಂಚಾಯಿತಿಗಳಲ್ಲಿ ಮಹಾತ್ಮ ಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ನೋಂದಾಯಿತ ಸಕ್ರಿಯ ಕುಟುಂಬಗಳ ಜಾಬ ಕಾರ್ಡಗಳಲ್ಲಿರುವ ಎಲ್ಲಾ ಸದಸ್ಯರು ಸೆಪ್ಟೆಂಬರ್, 30ರ ಒಳಗಾಗಿ ಇ-ಕೆವೈಸಿ ಹೊಂದುವದು ಕಡ್ಡಾಯವಾಗಿದೆ ಎಂದು ಕೊಪ್ಪಳ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪ ತುರಾದಿ ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

ತಾಲ್ಲೂಕಿನ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿರುವ ಸಿಬ್ಬಂದಿಗಳು, ಬೇರ್‌ಫೂಟ್ ಟೆಕ್ನಿಷಿಯನ್ ಗಳು, ಜಿಕೆಎಂಗಳಿಗೆ ತರಬೇತಿ ನೀಡುವ ಮೂಲಕ ಈ ಪ್ರಕ್ರಿಯೆಗೆ ಚಾಲನೆ ನೀಡಲಾಗಿದೆ.*ಮೊದಲನೇ ಹಂತದಲ್ಲಿ ಪ್ರಾಯೋಗಿಕವಾಗಿ ತುಮಕೂರು, ಕೊಪ್ಪಳ, ಕೋಲಾರ, ಹಾಸನ ಹಾಗೂ ಹಾವೇರಿ ಜಿಲ್ಲೆಗಳನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಆಯುಕ್ತಾಲಯದಿಂದ ಆಯ್ಕೆ ಮಾಡಿಕೊಳ್ಳಲಾಗಿದ್ದು,



ನರೇಗಾ ಯೋಜನೆಯಡಿ ಅನುಷ್ಠಾನಗೊಳ್ಳುವ ಕಾಮಗಾರಿಗಳಲ್ಲಿ ಕೆಲಸ ನಿರ್ವಹಿಸುವ ಕೂಲಿಕಾರರ ಪ್ರತಿಯೊಬ್ಬರ ಏಣಿಕೆ ಮೂಲಕ ಎನ್ ಎಂ ಎಂ ಎಸ್ ಹಾಜರಾತಿ ಸಂಖ್ಯೆ ಆನ್ಲೈನ್ ತೆಗೆದುಕೊಳ್ಳುತ್ತಿದ್ದು ಇ-ಕೆವೈಸಿ ಹೊಂದಿರುವರು ಅವರ ಹಾಜರಾತಿ ತೆಗೆದುಕೊಳ್ಳುವಾಗ ಅವರ ಆಧಾರ್ ನಂಬರ್ ಮತ್ತು ಸ್ಥಳದಲ್ಲಿ ಹಾಜರಿದ್ದವರ ಮುಖ ಹೊಂದಾಣಿಕೆಯಾಗಿದ್ದಲ್ಲಿ ಮಾತ್ರ ಅವರ ಎನ್ ಎಂ ಎಂ ಎಸ್ ಪರಿಗಣಿಸಲಾಗುತ್ತದೆ ಎಂದು ತಿಳಿಸಿದ್ದಾರೆ. ಕೊಪ್ಪಳ ತಾಲೂಕಿನಲ್ಲಿ ಒಟ್ಟು 111030 ಸಕ್ರೀಯ(ಂಭಿಣುತಜ) ಕೂಲಿಕಾರರಿದ್ದು ಇಲ್ಲಿಯವರೆಗೆ 43849 ಕೂಲಿಕಾರರು ಇ-ಕೆವೈಸಿ ಹೊಂದಿದ್ದು 67181 ಕೂಲಿಕಾರರು ಇ-ಕೆವೈಸಿ ಹೊಂದುವದು ಬಾಕಿ ಇರುತ್ತದೆ. ಈಗಾಗಲೇ ಗ್ರಾಮ ಪಂಚಾಯತಿಯ ವ್ಯಾಪ್ತಿಯಲ್ಲಿ ಐಇಸಿ ಕಾರ್ಯಕ್ರಮಗಳಾದ ಮೈಕ್ ಮೂಲಕ, ಸ್ವಚ್ಛ ವಾಹಿನಿಯ ಮೂಲಕ ಪ್ರಚಾರ ಕೈಗೊಂಡಿದ್ದು ತಾಲೂಕಿನಲ್ಲಿ 67181 ಕೂಲಿಕಾರರು ಇ-ಕೆವೈಸಿ ಹೊಂದುವದು ಬಾಕಿ ಇರುವದರಿಂದ ಪ್ರತಿಯೊಬ್ಬ ನರೇಗಾ ಕೂಲಿಕಾರರು ತಪ್ಪದೇ ಗ್ರಾಮ ಪಂಚಾಯತಿಗೆ ಭೇಟಿ ನೀಡಿ ಇ-ಕೆವೈಸಿ ಹೊಂದುವುದು.

ಇ-ಕೆವೈಸಿ ಮಾಡಿಸದೇ ಇರುವಂತಹ ಕೂಲಿಕಾರರ ಓಒಒಖನಲ್ಲಿ ಹಾಜರಾತಿಯನ್ನು ಅಕ್ಟೋಬರ್, 01 ರಿಂದ ಆನ್ ಲೈನ್ ನಲ್ಲಿ ತೆಗೆದುಕೊಳ್ಳುವದಿಲ್ಲ.ತುರ್ತಾಗಿ ಮಹಾತ್ಮಾ ಗಾಂಧಿ ನರೇಗಾ ಯೋಜನೆಯ ಎಲ್ಲಾ ಕೂಲಿಕಾರರು ನಿಮ್ಮ ಆಧಾರ ಕಾರ್ಡ ಹಾಗು ಜಾಬಕಾರ್ಡನೊಂದಿಗೆ ನಿಮ್ಮ ಗ್ರಾಮ ಪಂಚಾಯತಿಗೆ ಭೇಟಿ ನೀಡಿ ಇ-ಕೆವೈಸಿ ಹೊಂದಬೇಕೆಂದು ವಿನಂತಿಸಿದ್ದಾರೆ.

# ಸೆಪ್ಟೆಂಬರ್ 20 ರಂದು ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ

**ಮಲ್ಲಮ್ಮ ನುಡಿ ವಾರ್ತೆ**

ಕಲಬುರಗಿ,ಸೆ.19-ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ವಿಭಾಗ-1ರ ವ್ಯಾಪ್ತಿಯಲ್ಲಿ ಬರುವ 110/33/11 ಕೆ.ವಿ. ಅಫಜಲಪೂರ ವಿದ್ಯುತ್ ಉಪ ವಿತರಣಾ ಕೇಂದ್ರದ ಎರಡನೇ ತ್ರೈಮಾಸಿಕ ನಿರ್ವಾಹಣಾ ಕಾರ್ಯಕೈಗೊಂಡಿರುವ ಪ್ರಯುಕ್ತ ಉಪ ವಿತರಣಾ ಕೇಂದ್ರದ ಎಲ್ಲಾ ಹೊರ ಹೋಗುವ ಫೀಡರಗಳ ವ್ಯಾಪ್ತಿಯ ಗ್ರಾಮಗಳಲ್ಲಿ ಇದೇ ಸೆಪ್ಟೆಂಬರ್ 20 ರಂದು ಬೆಳಿಗ್ಗೆ 11 ರಿಂದ ಸಂಜೆ 5 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದ್ದು, ಎಲ್ಲಾ ಗ್ರಾಹಕರು ಇದಕ್ಕೆ ಸಹಕರಿಸಬೇಕೆಂದು ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ವಿಭಾಗ-1ರ ಕಾರ್ಯನಿರ್ವಾಹಕ ಅಭಿಯಂತರರು ತಿಳಿಸಿದ್ದಾರೆ. ಅಫಜಲಪೂರ ವಿದ್ಯುತ್ ವಿತರಣಾ ಕೇಂದ್ರ: ಎಫ್-1 ಮಲ್ಲಾಬಾದ, ಎಫ್-2 ಕುಲಾಲಿ ಐಪಿ, ಎಫ್-3 ಕಲ್ಲೂರ ಐಪಿ, ಎಫ್-4 ಘತ್ತರಗಾ, ಐಪಿ, ಎಫ್-6 ಹಳಿಯಾಳ, ಎಫ್-7 ಬಳ್ಳೂರಗಿ ಐಪಿ, ಎಫ್-8 ಶಿರವಾಳ ಐಪಿ, ಎಫ್-9 ದೇವಣಗಾಂವ, ಎಫ್-10 ಅಫಜಲಪೂರ ಟೌನ, ಎಫ್-12 ಅಳ್ಳಗಿ ಎನ್.ಜೆ.ವೈ, ಎಫ್-13 ವಾಟರ್ ಸಪ್ಲೈ, ಎಫ್-14 ಮಂಗಳೂರ ಐಪಿ ಹಾಗೂ ಎಫ್-15 ಟ್ರಂಕ ಲೈನ ಐಪಿ ಫೀಡರಿನ ಅಫಜಲಪೂರ ಟೌನ್, ಹಳಿಯಾಳ, ಬಳೂರ್ಗಿ, ಸೊನ್ನ, ಅಳಗಿ(ಬಿ), ಅಳಗಿ(ಕೆ), ಬಳೂಂಡಗಿ, ಶಿರವಾಳ, ಮಂಗಳೂರ. ರೇವೂರ ವಿದ್ಯುತ್ ವಿತರಣಾ ಕೇಂದ್ರ: ಎಫ್-1 ಚಿಂಚೋಳಿ (ಐಪಿ), ಎಫ್-2 ಆನೂರ್(ಎನ್.ಜೆ.ವೈ.), ಎಫ್-3 ಕುಲಾಲಿ (ಐಪಿ), ಎಫ್-5 ಬಡದಾಳ(ಐಪಿ), ಎಫ್-6 ರೇವೂರ್ (ಎನ್.ಜೆ.ವೈ.) ಫೀಡರಿನ ಚಿಂಚೋಳಿ, ಮಲ್ಲಾಬಾದ, ಮಾತೋಳಿ, ಆಣುರ, ಬಿಲ್ವಾಡ (ಬಿ ಆಂಡ್ ಕೆ), ಬಡದಾಳ, ರೇವೂರ, ಕೆ ಆಂಡ್ ಬಿ, ಅಂಕಲಗಿ ಬೋಗನಳ್ಳಿ, ಅರ್ಜುಣಗಿ ತಾಂಡಾ, ಕುಲಾಲಿ ಮತ್ತು ಸ್ಟೇಷನ.

# ವಿಕಲಚೇತನರ ಆರೋಗ್ಯ ತಪಾಸಣೆ ಮತ್ತು ಯುಡಿಐಡಿ ಪ್ರಮಾಣ ಪತ್ರ ವಿತರಣಾ ಶಿಬಿರ



**ಮಲ್ಲಮ್ಮ ನುಡಿ ವಾರ್ತೆ**

ಗುರುಮಠಕಲ್: ಸೆ. 19 ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಅಂಗವಿಕಲರ ಆರೋಗ್ಯ ತಪಾಸಣೆ ಮತ್ತು ಯುಡಿಐಡಿ(ವಿಶಿಷ್ಟ ಅಂಗವೈಕಲ್ಯ ಐಡಿ)ಪ್ರಮಾಣ ಪತ್ರ ವಿತರಣೆ ಶಿಬಿರ ಜರುಗಿತು. ಈ ಶಿಬಿರದಲ್ಲಿ ತಜ್ಞವೈದ್ಯರಾದ ಡಾ॥ ರಾಘವೇಂದ್ರ, ಡಾ॥ ಶರಣಬಸಪ್ಪ, ಡಾ॥ ರಾಧಿಕಾ, ಡಾ॥ ರಾಮನಗೌಡ, ಡಾ. ಅಮೋಘ ಮತ್ತು ಡಾ. ಅಮಿತ್ ಭಾಗವಹಿಸಿದರು.

ಯುಡಿಐಡಿ(ವಿಶಿಷ್ಟ ಅಂಗವೈಕಲ್ಯ ಐಡಿ)ಪ್ರಮಾಣ ಪತ್ರ ಮತ್ತು ರೈಲ್ವೆಪ್ರಯಾಣದ ಪಾಸ್ ಸೇರಿದಂತೆ ವಿವಿಧ ಸೌಲಭ್ಯದಿಂದ ವಂಚಿತರಾದ ನೂರಕ್ಕೂ ಅಧಿಕ ವಿಕಲಚೇತನರು ತಜ್ಞ ವೈದ್ಯರಿಂದ ತಪಾಸಣೆಗೆ ಒಳಪಟ್ಟರು.

ಕಡಿಮೆ ದೃಷ್ಟಿದೋಷ, ಬುದ್ದಿಮಾಂದ್ಯ, ಶ್ರವಣದೋಷ, ಪೋಲಿಯೋ ವಿವಿಧ ಬಗೆಯ ಒಟ್ಟು 99 ಜನ ವಿಕಲಚೇತನರು ಭಾಗವಹಿಸಿ ರೈಲ್ವೆ ಪಾಸ್ ಸೌಲಭ್ಯ ಸೇರಿದಂತೆ ಯುಡಿಐಡಿ ಕಾರ್ಡಗಾಗಿ ಶಿಬಿರದಲ್ಲಿ ಅರ್ಜಿ ಸಲ್ಲಿಸಿದರು.

ಇಂದಿನ ಶಿಬಿರದಲ್ಲಿ ಗುರುಮಠಕಲ್ ಸಮುದಾಯ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಮಹೇಶ್ ಸಜ್ಜನ, ತಾಲೂಕ ಗ್ರೇಡ್ 2 ತಹಶೀಲ್ದಾರ್ ನರಸಿಂಹಸ್ವಾಮಿ, ಗುರುಮಠಕಲ್ ಎಪಿಡಿ ಸಂಸ್ಥೆಯ ತಾಲೂಕ ಸಂಯೋಜಕ ವಿರೂಪಾಕ್ಷ ಮಾಲಿಪಾಟೀಲ ಹಾಗೂ ಸಹಾಯಕರು ಮತ್ತು ಅರ್ ಪಿಡಿ ಟಾಸ್ಕಫೋರ್ಸ್ ಸದಸ್ಯರು ಭಾಗವಹಿಸಿ ಶಿಬಿರದ ನಿರ್ವಹಣೆ ಮಾಡಿದರು.


# ಲಿಂಗದಳ್ಳಿ ಸಹಕಾರ ಸಂಘಕ್ಕೆ ರೂ.4.90 ಲಕ್ಷ ನಿವ್ವಳ ಲಾಭ: ಅಧ್ಯಕ್ಷ ಬಸರಕೋಡ



**ಮಲ್ಲಮ್ಮ ನುಡಿ ವಾರ್ತೆ**

ತಾಳಿಕೋಟಿ: ಪ್ರತಿಯೊಬ್ಬರೂ ಸಹಕಾರ ನೀಡಿದರೆ ಮಾತ್ರ ಸಹಕಾರಿ ಸಂಘಗಳು ಬೆಳವಣಿಗೆಯಾಗಲು ಸಾಧ್ಯವಿದೆ. ಸಂಘದಿಂದ ಸಾಲ ಪಡೆದವರು ಸಕಾಲಕ್ಕೆ ಮರುಪಾವತಿಸಿ ಸಂಘದ ಅಭಿವೃದ್ಧಿಗೆ ಸಹಕರಿಸಬೇಕು ಎಂದು ಅಧ್ಯಕ್ಷ ಬಸನಗೌಡ ಈ. ಬಸರಕೋಡ ಹೇಳಿದರು. ತಾಲೂಕಿನ ಲಿಂಗದಳ್ಳಿ ಗ್ರಾಮದ ವಿವಿಧೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘ ನಿ, ಇದರ 2024-25 ನೇ ಸಾಲಿನ ವಾರ್ಷಿಕ ಸರ್ವಸಾಧಾರಣ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಸಂಘ ಎಲ್ಲರ ಸಹಕಾರದೊಂದಿಗೆ ವರ್ಷದಿಂದ ವರ್ಷಕ್ಕೆ ಪ್ರಗತಿಯತ್ತ ಸಾಗುತ್ತಿದೆ 2025 ಮಾರ್ಚ್ 31ರ ಅಂತ್ಯಕ್ಕೆ 1187 ಸದಸ್ಯರನ್ನು ಹೊಂದಿದ್ದು, ರೂ.75 ಲಕ್ಷ ಶೇರು ಬಂಡವಾಳ, ರೂ.8.5 ಲಕ್ಷ ಠೇವುಗಳು ಹೊಂದಿದ್ದು ರೂ.4.90 ಲಕ್ಷ ನಿವ್ವಳ ಲಾಭಗಳಿಸಿದೆ ಎಂದು ತಿಳಿಸಿದರು. ಸಂಘದ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶ್ರೀಮತಿ ಎಸ್.ಆರ್.ತಿಳಗೂಳ ಅವರು ವಾರ್ಷಿಕ ವರದಿ ವಾಚಿಸಿ ಸದಸ್ಯರಿಂದ ಬಂದ ಕೆಲವು ಪ್ರಶ್ನೆಗಳಿಗೆ ಸಮರ್ಪಕವಾಗಿ ಉತ್ತರಿಸಿದರು. ಸಂಘದ ಉಪಾಧ್ಯಕ್ಷೆ ನೀಲಮ್ಮ ಎಂ.ಪೀರಾಪೂರ, ಗಣ್ಯರಾದ ಅಯ್ಯನಗೌಡ ನಾಡಗೌಡ, ಬಸನಗೌಡ ಮೇಟಿ, ಮಲ್ಲನಗೌಡ ಬಿರಾದಾರ, ಶಾಂತಗೌಡ ಬಿರಾದಾರ, ರಮೇಶ ಗುರಡ್ಡಿ, ಸಿದ್ದನಗೌಡ ಪಡೇಕನೂರ, ಶರಣಗೌಡ ಪಾಟೀಲ, ಕಾಶಿರಾಯಗೌಡ ಬಿರಾದಾರ, ಹಣಮಪ್ಪಗೌಡ ಕಾಮರೆಡ್ಡಿ, ಅಪ್ಪ ಸಾಹೇಬಗೌಡ ಬಿರಾದಾರ, ರಮೇಶಗೌಡ ತಿಳಗೂಳ, ಶಾಂತೇಶ ಚಟ್ಟೇರ, ಹಿರಿಯ ಶಿಕ್ಷಕ ಕೆ.ಪಿ. ಬಿರಾದಾರ, ವೀರೇಶ ಕಾದಳ್ಳಿ, ನಿರ್ದೇಶಕರಾದ ಗುರಪ್ಪ ಮೇಟಿ, ಬಸನಗೌಡ ಬಿರಾದಾರ ಹಣಮಗೌಡ ಮುದ್ನೂರ, ಶರಣಪ್ಪ ಪಾಟೀಲ, ಹಣಮಂತ್ರಾಯ ಬಿರಾದಾರ, ನಿಂಗಪ್ಪ ಹೊಸಮನಿ, ಗಂಗಮ್ಮ ನಾಡಗೌಡ, ಗ್ಯಾನಪ್ಪ ವಾಲಿಕಾರ, ರಾಮಚಂದ್ರ ಹೊಸಮನಿ, ನೇತ್ರಾ ವಾಲಿಕಾರ, ಕ್ಷೇತ್ರಾಧಿಕಾರಿ ಬಿ.ಜಿ.ಪಡಸಲಗಿ, ವೃತ್ತಿಪರ ನಿರ್ದೇಶಕರಾದ ರಾಮನಗೌಡ ಬಿರಾದಾರ, ಶಾಂತಗೌಡ ಬಿರಾದಾರ, ಸಂಘದ ಸದಸ್ಯರು ಹಾಗೂ ಸಿಬ್ಬಂದಿಗಳು ಇದ್ದರು.

# ಕಾನೂನು ಮಹಾವಿದ್ಯಾಲಯ ನೆರವು ಜಾಗೃತಿ ಕಾರ್ಯಕ್ರಮ




**ಮಲ್ಲಮ್ಮ ನುಡಿ ವಾರ್ತೆ**

ಕೊಪ್ಪಳ : ದಕ್ಷಿಣ ಭಾರತ ಹಿಂದಿ ಪ್ರಚಾರ ಸಭೆಯ ಭಾರತ ರತ್ನ ಶ್ರೀ ಅಟಲ್ ಬಿಹಾರಿ ವಾಜಪೇಯಿ ಕಾನೂನು ಮಹಾವಿದ್ಯಾಲಯ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಕೊಪ್ಪಳ ಇವರಗಳ ಸಂಯುಕ್ತ ಆಶ್ರಯದಲ್ಲಿ

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಕೊಪ್ಪಳ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾಂತೇಶ ಎಸ್.ದರಗದ ಅವರು ಮಾತನಾಡಿ ಇತ್ತೀಚಿಗೆ ಅತೀ ಹೆಚ್ಚಿಗೆ ಪೋ-ಕ್ಸೋ ಪ್ರಕರಣಗಳಲ್ಲಿ ಅತೀ ಹೆಚ್ಚು ಯುವಕರು ಬಲಿಯಾಗುತ್ತಿದ್ದಾರೆ 14,16 ವರ್ಷ ವಯಸ್ಸು ಇರುವ ಚಿಕ್ಕ ಹೆಣ್ಣುಮಕ್ಕಳನ್ನು ಅನೇಕ ಯುವಕರು ಪ್ರೀತಿ, ಪ್ರೇಮದ ಹೆಸರಿನಲ್ಲಿ ಪುಸಲಾಯಿಸಿ ಲೈಂಗಿಕ ದೌರ್ಜನ್ಯ ಎಸಗುತ್ತಿರುವುದು ಯುವಕರ ಪೋಕ್ಸೋ ಕೇಸ್ಗೆ ಕಾರಣವಾಗುತ್ತಿದೆ ಎಂದರು.

ಇಂದಿನ ಸಮಾಜದಲ್ಲಿ ಪಕ್ಕದಲ್ಲಿ ಇದ್ದವರು ತಂದೆ, ಅಣ್ಣ, ಸಂಬಂದಿಕರು ತಮ್ಮದೇ ಕುಟುಂಬದ ಹೆಣ್ಣುಮಕ್ಕಳ ಜೊತೆಗೆ ಅಸಭ್ಯವರ್ತನೆಗಳು ತೋರುತ್ತಿವುದರ ಬಗ್ಗೆ ಸುದ್ದಿಗಳನ್ನು ದಿನನಿತ್ಯ ನಾವು ನೀವೂ ನೋಡುತ್ತಿದ್ದೇವೆ, ಈ ರೀತಿಯ ಪೋಕ್ಸೋ ಪ್ರಕರಣಗಳಿಗೆ ಮೂಲಕಾರಣ ಜನರಲ್ಲಿ ಇತ್ತೀಚಿಗೆ ಮಾನವೀಯತೆ ಮೌಲ್ಯಗಳು, ಪ್ರಾಮಾಣಿಕತೇ, ನೈತಿ-ಕತೇ ಮರೆಯಾಗುತ್ತಿದೆ, ಹಾಗೂ ನೀವು ಕಾನೂನು ವಿದ್ಯಾರ್ಥಿಗಳು ವಿದ್ಯ ಜೊತೆಗೆ ವಿನಯ, ಮತ್ತು ಮಾನವೀಯತೆಯ ಗುಣಗಳನ್ನು ಕಲಿತಾಗ ಮಾತ್ರ ನಿಮ್ಮ ಜೀವನ ಉಜ್ವಲವಾಗಲು ಕಾರಣ ವಾಗುತ್ತದೆ, ಎಂದು ಸಿವಿಲ್ ನ್ಯಾಯಾಧೀಶರು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಇದೆ ಸಂದರ್ಭದಲ್ಲಿ ಯಲಬುರ್ಗಾ ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ ಶಶಿಧರ ಸಕ್ರಿ ಅವರು ಮಾತನಾಡಿ ಬಡತನ ನಿರ್ಮೂಲನೆಗೆ ಹಾಗೂ ಸರ್ಕಾರದ ವಿವಿಧ ಯೋಜನೆಗಳು ಹಾಗೂ ನಿಗಮಗಳಿಂದ ಸಿಗುವ ಸೌಲಭ್ಯಗಳ ಉಪಯೋಗ ಪಡೆದುಕೊಳ್ಳುವ ಬಗ್ಗೆ ಅವುಗಳಿಂದಾಗುವ ಅನುಕೂಲಗಳ ಬಗ್ಗೆ ವಿಶೇಷ ಉಪನ್ಯಾಸ ನೀಡಿದರು.ನಂತರ ಕಾಲೇಜಿನ ಪ್ರಾಚಾರ್ಯರಾದ ಉಷಾದೇವಿ ಹಿರೇಮಠ ಅವರು ಮಾತನಾಡಿ ಕಾನೂನು ವಿದ್ಯಾರ್ಥಿಗಳು ಕಾನೂನು ಸೇವೆಗಳ ಪ್ರಾಧಿಕಾರದ ಉಪನ್ಯಾಸವನ್ನು ವಿದ್ಯಾರ್ಥಿಗಳು ಸದುಪಯೋಗ ಪಡಿಸಿಕೊಳ್ಳಬೇಕು ಹಾಗೂ ಉಪನ್ಯಾಸದ ಪ್ರಮುಖ ಯೋಜನೆಗಳ ಬಗ್ಗೆ ನೀವು ವಿದ್ಯಾರ್ಥಿಗಳಾಗಿ ಸುತ್ತಮುತ್ತಲಿನ ನಿಮ್ಮ ಊರುಗಳಲ್ಲಿ ಜನರಲ್ಲಿ ಸರ್ಕಾರಿ ವಿವಿಧ ಜೋಜನೆಗಳ ಬಗ್ಗೆ ಜಾಗೃತಿ ಮೂಡಿಸುವುದು ಅತ್ಯಗತ್ಯ ಹಾಗೂ ನಮ್ಮ ಜಿಲ್ಲೆಯು ಶಿಕ್ಷಣದಲ್ಲಿ ಹಿಂದುಳಿಯಲು ಮೂಲ ಇಚ್ಛಾಶಕ್ತಿ ಕೊರತೆ, ಕಾರಣ ಎಂದರು.

ಈ ಸಂದರ್ಭದಲ್ಲಿ ಉಪಪ್ರಾಚಾರ್ಯರಾದ ಬಸವರಾಜ ಎಸ್.ಎಂ ಉಪನ್ಯಾಸಕರಾದ ,ಕುಮಾರಿ ಶಾಲಿನಿ ಪಾಟೀಲ್, ಮತ್ತು ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿಗಳು ಮತ್ತು ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

# ಸಮಾನ ಕೆಲಸಕ್ಕೆ ಸಮಾನ ವೇತನ ನಿಗದಿಯಾಗಬೇಕು.ವಿ ಜಿ ಅಂಗಡಿ

**ಮಲ್ಲಮ್ಮ ನುಡಿ ವಾರ್ತೆ**

ಶಹಾಪುರ : ಕೈಗಾರಿಕಾ ವಿವಾದ ಕಾಯ್ದೆ 1947 ನಮೂನೇ ಎಲ್ ನಿಯಮ 72 ರ ಸತ್ಯಾಗ್ರಹ ಸೂಚನಾ ಪತ್ರದಲ್ಲಿ ನಮೂದಿಸಿ ನಿವೇದಿಸಿದ ಕಲಂ 25 ಎಫ್ 25 ಜೆ ಹಾಗೂ 25 ಎನ್ ಗಳ ಕಾಯ್ದೆಗಳನ್ವಯ 5,10 ಹಾಗೂ 15 ವರ್ಷಗಳ ಮೇಲ್ಪಟ್ಟು ಕಳಂಕ ರಹಿತವಾಗಿ ದಕ್ಷತೆಯಿಂದ ಕೃಷಿ ಮಹಾವಿದ್ಯಾಲಯದ ಭೀಮರಾಯನಗುಡಿಯಲ್ಲಿ ಸೇವೆ ಸಲ್ಲಿಸುತ್ತಿದ್ದ ಮಹಿಳಾ ಮತ್ತು ಪುರುಷ ದಿನಗೂಲಿ ನೌಕರರನ್ನು ಧೀಡಿರನೆ ಕೆಲಸದಿಂದ ವಜಾಗೊಳಿಸಿದ್ದು ಕಾನೂನು ಬಾಹಿರ ಕೆಲಸ ಅವರೆಲ್ಲರಿಗೂ ತಕ್ಷಣವೇ ಮರುನೇಮಕ ವಾಗಬೇಕು ಹಾಗೂ ಸಮಾನ ಕೆಲಸಕ್ಕೆ ಸಮಾನ ವೇತನ ನೀಡಬೇಕು ಎಂದು ಕರ್ನಾಟಕ ರಾಜ್ಯ ಸರಕಾರಿ ದಿನಗೂಲಿ ನೌಕರರ ಮಹಾ ಮಂಡಳಿ ಹುಬ್ಬಳ್ಳಿ ಹೈದ್ರಾಬಾದ್ ಕರ್ನಾಟಕ ವಲಯ ಸಂಚಾಲಕ ವ್ಹಿ ಜಿ ಅಂಗಡಿ ಹೇಳಿದರು.

ನಗರದ ಭೀಮರಾಯನಗುಡಿ ಕೃಷಿ ಮಹಾವಿದ್ಯಾಲಯದ ಕರ್ನಾಟಕ ರಾಜ್ಯ ಸರಕಾರಿ ದಿನಗೂಲಿ ನೌಕರರ ಮಹಾ ಮಂಡಳಿ ಹುಬ್ಬಳ್ಳಿ ವಲಯ ಮಹಾ ಮಂಡಳಿ ಹಾಗೂ ಇನ್ನಿತರ ಸಂಘಟನೆಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿರುವ ವಜಾ ಗೊಳಿಸಿದ ಸರ್ಕಾರಿ ದಿನಗೂಲಿ ನೌಕರರ ಮರುನೇಮಕ ಹಾಗೂ ಹಲವು ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಹಮ್ಮಿಕೊಂಡಿರುವ ಪ್ರತಿಭಟನೆಯ ಮುಂದಾಳತ್ವವಹಿಸಿ ಪ್ರತಿಭಟನಾಕರರನ್ನು ಉದ್ದೇಶಿಸಿ ಮಾತನಾಡಿದ ಅವರು ದಿನಗೂಲಿ ನೌಕರರು ಹತ್ತಾರು ವರ್ಷಗಳಿಂದ ಕನಿಷ್ಠ ವೇತನದಲ್ಲಿಯೇ ತಮ್ಮ ಸೇವೆ ಸಲ್ಲಿಸುತ್ತಾಬಂದಿರುವುದು ವಿಷಾದನೀಯ ಸಂಗತಿ ಆದರೂ ಕೂಡಾ ಸಹಿಸಿಕೊಂಡು ಬಂದಿರುವ ದಿನಗೂಲಿ ನೌಕರರನ್ನು ದಿಢೀರನೇ ವಜಾಗೊಳಿಸಿ ಅವರ ಕುಟುಂಬಗಳನ್ನು ಬೀದಿ ಪಾಲು ಮಾಡಿರುವ ಇಲಾಖೆಯವರಿಗೆ ದಿಕ್ಕಾರವಿರಲಿ ಎಂದು ಆಕ್ರೋಶ ಹೊರ ಹಾಕಿದರು. ಅಧಿಕಾರಿಗಳೊಡನೇ ಸಂವಾದ ನಡೆಸಿ ತಕ್ಷಣವೇ 28 ಜನ ನೌಕರರನ್ನು ತತಕ್ಷಣವೇ ಸೇವೆಗೆ ಹಾಜರಾಗುವಂತೆ ಮಾಡಿದರು. ಬಳಿಕ ಪ್ರತಿಭಟನಾಕರರನ್ನು ಮನವೊಲಿಸಲು ಬಂದಂತಹ ಅಧಿಕಾರಿಗಳಿಗೆ ಯಾವುದೇ ಕಾರಣ-ಕ್ಕೆ ಅಶ್ವಾಸನೆ ತಪ್ಪಿದರೆ ಮುಂದಿನ ದಿನಮಾನಗಳಲ್ಲಿ ಉಗ್ರವಾದ ಹೋರಾಟ ಮಾಡುವುದಾಗಿ ಖಡಕ್ಕಾಗಿ ಎಚ್ಚರಿಕೆ ನೀಡಿ ಮನವಿ ಪತ್ರ ಸಲ್ಲಿಸಿದರು.

ಮನವಿ ಪತ್ರ ಸ್ವೀಕರಿಸಿ ಮಾತನಾಡಿದ ಜಿಲ್ಲಾ ಕಾರ್ಮಿಕ ಇಲಾಖೆ ನ್ಯಾಯಧೀಶರಾದ ಶ್ರೀಹರಿ ದೇಶಪಾಂಡೆ ಅವರು ಮಾತನಾಡಿ ಸಹಾಯಕ ಕಾರ್ಮಿಕ ಅಧಿಕಾರಿಗಳ ಆದೇಶದನ್ವಯ ಕೃಷಿ ವಿದ್ಯಾಲಯದ ನಿರ್ದೇಶಕರು ಹಂಪನಗೌಡರೊಂದಿಗೆ ಚೆರ್ಚಿಸಿ ಒಂದು ತೀರ್ಮಾನಕ್ಕೆ ಬರಲಾಗಿದೆ ಎಂದರು.ಕನಿಷ್ಠ ವೇತನ ಪಡೆಯುವ ದಿನಗೂಲಿ ಸರ್ಕಾರಿ ನೌಕರರು ಕಾರ್ಮಿಕ ಇಲಾಖೆಯ ನಿರೀಕ್ಷಕರಿಗೆ ಅರ್ಜಿ ಕೊಡಬೇಕು. ಸರ್ಕಾರ ನಿಗದಿಪಡಿಸಿದ ವೇತನಕ್ಕಿಂತ ಯಾರಿಗೂ ಕಡಿಮೆ ವೇತನ ಕೊಡಬಾರದು ಎಂದರು.

ಸಮಾನ ಕೆಲಸಕ್ಕೆ ಸಮಾನ ವೇತನ ದೊರೆಯಬೇಕು ಇಲ್ಲಿ ಬಜೆಟ್ ಎಷ್ಟು ಬರುವುದೋ ಅಷ್ಟು ಮಾತ್ರ ವೇತನ ಹಂಚಿಕೆಯಾಗುತ್ತಿರುವುದರಿಂದ ಕೆಲ ತಾಂತ್ರಿಕ ತೊಂದರೆಗಳು ಆಗುವುದು ಸಹಜವಾಗಿದೆ ಇನ್ನ ಮುಂದೆ ಹಾಗೇ ಆಗುವುದಿಲ್ಲ ಯಾರಿಗೂ ನೌಕರಿಂದ ವಜಾ ಮಾಡುವುದಿಲ್ಲ ವಜಾಗೊಳಿಸಿದಂತಹ ನೌಕರರನ್ನು ಇವಾಗಿನಿಂದಲೇ ಹಾಜರಿಪಡಿಸಿಕೊಳ್ಳುತ್ತೇವೆ ಎಂದು ಅಶ್ವಾಸನೆ ನೀಡಿದರು ಎಂದರು. ಅಲ್ಲದೇ ಪ್ರತಿಯೊಬ್ಬ ಕಾರ್ಮಿಕನಿಗೂ ಅವರರವರ ಹುದ್ದೆಗನುಗುಣವಾಗಿ ಕಾಯಂ ನೇಮಕಾತಿ ಆದೇಶ ಪ್ರತಿ ನೀಡಬೇಕು ಎಂದು ತಾಕೀತು ಮಾಡಿದರು.ಪ್ರತಿಯೊಬ್ಬರ ಇ ಎಸ್ ಐ ಹಾಗೂ ಪಿ ಎಫ್ ಎಲ್ಲಿಯೂ ಹೋಗುವದಿಲ್ಲ ಅದು ನಿಮ್ಮೆಲ್ಲರಿಗೂ ಬಂದೆ ಬರುವುದು ಎಂದರು. ಈ ಸಂದರ್ಭದಲ್ಲಿ ತಾಲೂಕ ಕಾರ್ಮಿಕ ನಿರಿಕ್ಷಕರಾದ ಸಾಬೀರಾ ಬೇಗಂ. ಕೃಷಿ ವಿಶ್ವವಿದ್ಯಾನಿಲಯದ ಕೃಷಿ ಅಧಿಕ್ಷಕರಾದ ಪ್ರಕಾಶ ಕುಚನೂರ, ಅರವಿಂದ ಬೂದಿಹಾಳ, ಖಾದರಸಾಬ್ ದರ್ಗಾ ಹಾಗೂ ವಜಾಗೊಂಡ ದಿನಗೂಲಿ ನೌಕರರದ ವಿನೋದ, ಶಿವು, ಭೀಮರಾಯ, ಸಂತೋಷ್, ಶಂಕರ, ಅನಿಲ ರಡ್ಡಿ, ದೇವೇಂದ್ರ ಭೀ ಗುಡಿ, ರಾಜೂಗೌಡ ಕಂಚನಕಾವಿ ಬಸವರಾಜ ಕಾವಲುಗಾರ, ಆಶೀಪ್, ರಾಜು ಜಾಲಹಳ್ಳಿ, ಅಂಬ್ರಮ್ಮ, ವಾನಿಬಾಯಿ, ಲಲಿತಾಭಾಯಿ, ಉಮಾಶ್ರೀ, ಜಯಶ್ರೀ, ಅನಸಮ್ಮ, ಬಸಮ್ಮ, ನೀಲಮ್ಮ, ಲಕ್ಷ್ಮಿಭಾಯಿ, ಅಣ್ಣಮ್ಮ ನಾಟೇಕರ, ಶರೀಭಾಯಿ ರಾಠೋಡ ಅನಿತಾ, ಬಸಲಿಂಗಪ್ಪ ದೊರೆ ಸೇರಿದಂತೆ ಇನ್ನಿತರ ಸಂಘಟನೆ ಪದಾಧಿಕಾರಿಗಳು ಹಾಗೂ ಹೋರಾಟಗಾರರು ಉಪಸ್ಥಿತರಿದ್ದರು.

# ಸೆಪ್ಟೆಂಬರ್ 20 ರಂದು ಗ್ರಾಹಕರ ಕುಂದುಕೊರತೆ ಸಭೆ

**ಮಲ್ಲಮ್ಮ ನುಡಿ ವಾರ್ತೆ**

ಕಲಬುರಗಿ,ಸೆ.19-ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ವಿಭಾಗ-2ರ ವ್ಯಾಪ್ತಿಯಲ್ಲಿ ಬರುವ ಯಡ್ರಾಮಿ ಜೆಸ್ಕಾಂ ಉಪವಿಭಾಗದಲ್ಲಿ ಇದೇ ಸೆಪ್ಟೆಂಬರ್ 20 ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಗ್ರಾಹಕರ ಕುಂದುಕೊರತೆ ಸಭೆ ಹಾಗೂ ವಿದ್ಯುತ್ ಸುರಕ್ಷತಾ ದಿನವನ್ನು ಹಮ್ಮಿಕೊಳ್ಳಲಾಗಿದೆ ಎಂದು ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ವಿಭಾಗ-2ರ ಕಾರ್ಯನಿರ್ವಾಹಕ ಅಭಿಯಂತರರು ತಿಳಿಸಿದ್ದಾರೆ.

ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ವೃತ್ತದ ಅಧೀಕ್ಷಕ ಅಭಿಯಂತರರ ಇವರ ಅಧ್ಯಕ್ಷತೆಯಲ್ಲಿ ಈ ಸಭೆ ಜರುಗಲಿದ್ದು, ಗ್ರಾಮಗಳಲ್ಲಿನ ವಿದ್ಯುತ್ ಸಂಬಂಧಿಸಿದ ಸಮಸ್ಯೆ ನಿವಾರಣೆಗಾಗಿ ಈ ಸಭೆ ಕರೆಯಲಾಗಿದೆ. ಮೇಲ್ಕಂಡ ದಿನದಂದು ನಡೆಯುವ ಈ ಸಭೆಗೆ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಭಾಗವಹಿಸಿ ವಿದ್ಯುತ್ ಸಮಸ್ಯೆಗೆ ಸಂಬಂಧಿಸಿಂತೆ ಸಮಸ್ಯೆಯನ್ನು ನಿವಾರಿಸಿಕೊಳ್ಳಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ಸೆಪ್ಟೆಂಬರ್ 22 ರಿಂದ ಅಕ್ಟೋಬರ್ 2 ರವರೆಗೆ ಶರಣ ವಿಜಯೋತ್ಸವ ನಾಡ ಹಬ್ಬ ಹುತಾತ್ಮ ದಿನಾಚರಣೆ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ:–ಸೆ19 ಸಮಾನತೆ, ಸಹೋದರತೆಗಾಗಿ ಪ್ರಾಣ ಬಲಿದಾನ ಮಾಡಿದ ಶರಣ ಸ್ಮರಣೆಗಾಗಿ ಶರಣ ವಿಜಯೋತ್ಸವ, ಲಿಂಗವಂತ ಹುತಾತ್ಮ ದಿನಾಚರಣೆಯ ಕಾರ್ಯಕ್ರಮ ಸೆಪ್ಟೆಂಬರ್ 22 ರಿಂದ ಅಕ್ಟೋಬರ್ 2 ರವರೆಗೆ ಇಲ್ಲಿನ ಹರಳಯ್ಯನವರ ಗವಿಯಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಪೂಜ್ಯ ಡಾ. ಗಂಗಾಂಬಿಕಾ ಅಕ್ಕ ನುಡಿದರು.

ಇಲ್ಲಿನ ಹರಳಯ್ಯನವರ ಕಾರ್ಯಕ್ರಮದ ನಿಮಿತ್ಯ ನಡೆದ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿ 22 ರಂದು ಮುಂಜಾನೆ 8–00 ಗಂಟಗೆ ಆರಂಭೋತ್ಸವ ಪೂಜ್ಯರ ಸಾನಿಧ್ಯದಲ್ಲಿ ಶ್ರೀ ಬಸವೇಶ್ವರ ದೇವಸ್ಥಾನದಲ್ಲಿ ಪೂಜೆ ಪ್ರಾರ್ಥನೆಯೊಂದಿಗೆ ಆರಂಭಿಸಿ ಸಕಲ ವೈಭವದೊಂದಿಗೆ ಪರುಷಕಟ್ಟೆಯವರೆಗೆ ವಚನ ಸಾಹಿತ್ಯದ ಪಲ್ಲಕ್ಕಿ ಉತ್ಸವ ವಚನ ಪಠಣದೊಂದಿಗೆ ಮಂಗಲಗೊಳ್ಳುವುದು.

22 ರಂದು ಸೋಮವಾರ ಸಾಯಂಕಾಲ 6 ಗಂಟಗೆ ಉದ್ಘಾಟನೆ ಜೇವರ್ಗಿ ಜಿಲ್ಲೆಯ ಸೊನ್ನ ವೀರಕ್ತ ಮಠದ ಪೂಜ್ಯರಾದ ಶ್ರೀ ಶಿವಾನಂದ ಮಹಾಸ್ವಾಮಿಗಳ ದಿವ್ಯಸಾನಿಧ್ಯ, ಅಥಣಿ ಅಲ್ಲಮಪ್ರಭು ಮಠದ ಪೂಜ್ಯ ಶ್ರೀ ಮಲ್ಲಿಕಾರ್ಜುನ ಮಹಾಸ್ವಾಮಿಗಳ ಸಾನಿಧ್ಯ ಪೂಜ್ಯ ಡಾ. ಗಂಗಾಂಬಿಕಾ ಅಕ್ಕನವರ ನೇತೃತ್ವದಲ್ಲಿ ಅರಣ್ಯ ಸಚಿವರು ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ. ಖಂಡ್ರೆ ಉದ್ಘಾಟಿಸುವರು. ಶಾಸಕ ಶರಣು ಸಲಗರ ಅಧ್ಯಕ್ಷತೆ ವಹಿಸುವರು.

ಮಾಜಿ ವಿಧಾನ ಪರಿಷತ ಸದಸ್ಯರಾದ ವಿಜಯಸಿಂಗ್ ಶ್ರೀ ಬಸವೇಶ್ವರ ದೇವಸ್ಥಾನ ವಿಶ್ವಸ್ಥ ಸಮಿತಿ ಅಧ್ಯಕ್ಷರಾದ ಶಶಿಕಾಂತ ದುರ್ಗೆ, ಶ್ರೀ ಬಸವೇಶ್ವರ ದೇವಸ್ಥಾನ ಪಂಚಕಮಿಟಿ ನಿರ್ದೇಶಕರಾದ ಅನಿಲಕುಮಾರ ರಗಟೆ, ವಿಜಯಲಕ್ಷ್ಮಿ ಗಡ್ಡೆ, ಕಲಬುರಗಿಯ ರಾಜಶೇಖರ ಯಂಕಂಚ. ಬೀದರ ಬಸವ ಸೇವಾ ಪ್ರತಿಷ್ಠಾನದ ಗುಂಡಪ್ಪ ಬಳತೆ, ಅಶೋಕ ವಡಗಾಂವೆ ಶರಣಬಸವ ಪಾರಾ ಉಪಸ್ಥಿತರಿರುವರು. ಹರಳಯ್ಯ ಸಮಾಜದ ಅಧ್ಯಕ್ಷರಾದ ಶಿವಾಜಿ ಕಾಂಬಳೆ ಧ್ವಜಾರೋಹಣ ನೆರವೇರಿಸುವರು. ಆಕಾಶವಾಣಿ ಕಲಾವಿದ ಶಿವಕುಮಾರ ಪಂಚಾಳ ಮತ್ತು ಸಂಗಡಿಗರಿಂದ ವಚನ ಸಂಗೀತ ನೇರವೇರುವುದು. ಜ್ಞಾನ ಭಾರತಿ ವಚನ ನೃತ್ಯ ನಡೆಸಿಕೊಡುವರು.

23 ರಂದು ಮಕ್ಕಳ ಸಮಾವೇಶ ಅನುಭವ ಮಂಟಪ ಸಂಚಾಲಕರಾದ ಪೂಜ್ಯ ಶ್ರೀ ಶಿವಾನಂದ ಸ್ವಾಮಿಗಳು ಸಾನಿಧ್ಯ. ನ್ಯಾಯಾಧೀಶರಾದ ಯಶ್ವಂತ ಪಾಟೀಲ ಉದ್ಘಾಟಿಸುವರು, ಬಿಡಿವಿಸಿ ವಿಶ್ವಸ್ಥ ರಾದ ಬಸವರಾಜ ಪಾಟೀಲ ಅಧ್ಯಕ್ಷತೆ. ಮಕ್ಕಳಿಂದಲೇ ಉಪನ್ಯಾಸ, ನಾಟಕ, ವಚನ ನೃತ್ಯ, ವಚನ ಗಾಯನ, ರೂಪಕಗಳು ಜರುಗಲಿವೆ. ಕಲಬುರ್ಗಿಯ ಕಲಾವಿದ ಗುಣವಂತ ಹಾಸ್ಯ ಮತ್ತು ಗೊಂಬೆ ಕಲೆಯನ್ನು ನಡೆಸಿಕೊಡುವರು.

24 ರಂದು ಸಾಯಂಕಾಲ 6–00 ಗಂಟೆಗೆ ಮಹಾಶಕ್ತಿಕೂಟಗಳ ಸಮಾವೇಶ ಗೋಷ್ಠಿಯನ್ನು ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮ, ಬೆಂಗಳೂರು ಅಧ್ಯಕ್ಷರಾದ ಮಾಲಾ.ಬಿ. ನಾರಾಯಣರಾವ ಉದ್ಘಾಟಿಸುವರು. ತುಮಕೂರ ಸಿದ್ಧಗಂಗಾ ಆಸ್ಪತ್ರೆಯ ಕಾರ್ಯಾಚರಣೆ ವ್ಯವಸ್ಥಾಪಕರಾದ ಡಾ. . ರೂಪಾ ಜಿ.ಬಿ ಅನುಭಾವ ನೀಡುವರು. ಸುವರ್ಣಾ ಚಿಮಕೊಡೆ ಅವರಿಗೆ ಶರಣ ನಾಯಕ ಪ್ರಶಸ್ತಿ ನೀಡಿ ಗೌರವಿಸಲಾಗಿದೆ. ಸುಶೀಲಾಬಾಯಿ ಹೊಳಕುಂದೆ ಅಧ್ಯಕ್ಷತೆ. ಪ್ರೋ. ಮಲ್ಲಮ್ಮ ಪಾಟೀಲ ಭಾಲ್ಕಿ ಸೇರಿದಂತೆ ಇತರರು ಉಪಸ್ಥಿತರಿರುವರು.

ಸಾಯಂಕಾಲ 6 ಗಂಟೆಗೆ ವೀರ ಸೈನಿಕರ ವೇದಿಕೆ ಗೋಷ್ಠಿಯನ್ನು ನಗರಸಭೆ ಪೌರಾಯುಕ್ತ ರಾಜು ಬಣಕಾರ ಉದ್ಘಾಟಿಸುವರು. ಕಾರ್ಗಿಲ್ ಹಿರೋ ಇಂಡಿಯನ್ ಆರ್ಮಿಯ ಕ್ಯಾಪ್ಟನ್ ನವೀನ ನಾಗಪ್ಪ ಅನುಭಾವ ನೀಡುವರು. ಜಿಲ್ಲಾ ಹಾಗೂ ತಾಲೂಕು ಮಾಜಿ ಸೈನಿಕರ ಸಂಘದ ಪದಾಧಿಕಾರಿಗಳು ಉಪಸ್ಥಿತರಿರುವರು. ರಾಧಾ ಯವಳೆ ಸಇವರಿಂದ ದೇಶ ಭಕ್ತಿಗೀತೆಗಳು ಹಾಗೂ ಮಕ್ಕಳಿಂದ ಅಪರೇಷನ್ ಸಿಂಧೂರ ರೂಪಕ ಪಕ ಜರುಗಲಿದೆ.

26 ರಂದು ಸಾಯಂಕಾಲ 6 ಗಂಟೆಗೆ ಪೂಜ್ಯ ಸಿದ್ಧರಾಮೇಶ್ವರ ಸ್ವಾಮಿಗಳ ಸಾನಿಧ್ಯ. ತಹಸೀಲ್ದಾರ ದತ್ತಾತ್ರೆಯ ಗಾದಾ ಉದ್ಘಾಟಿಸುವರು. ಕಲಬುರಗಿಯ ಪ್ರೋ. ಶಿವರಾಜ ಪಾಟೀಲ ಅನುಭಾವ ನೀಡುವರು. ಶಿವಾನಿ ಶಿವದಾಸ ತಂಡದಿಂದ ವಚನ ಗಾಯನ ನಡೆಯಲಿದೆ.

27 ರಂದು ಸಾಯಂಕಾಲ 6 ಗಂಟೆಗೆ ಸೂತ್ರದ ಗೊಂಬೆಯಾಟ ಪೂಜ್ಯ ಪಂಚಾಕ್ಷರಿ ಮಹಾಸ್ವಾಮಿಗಳ ಸಾನಿಧ್ಯದಲ್ಲಿ ಬಸವರಾಜ ಪಾಟೀಲ ಸೇಡಂ ಉದ್ಘಾಟಿಸುವರು. ಬಿಡಿಪಿಸಿ ಅಧ್ಯಕ್ಷ ಬಸವರಾಜ ಕೊರಕೆ ಅಧ್ಯಕ್ಷತೆ ವಹಿಸುವರು. ಇಸ್ರೋ ಸಮೂಹ ನೆವಿಗೇಶಷನ್ ಸಿಸ್ಟಮ್ ಡೈರೆಕ್ಟರ್ ರೂಪಾ ಎಂ.ವಿ ಅನುಭಾವ ನೀಡುವರು. ಉತ್ತರಕನ್ನಡ ಜಿಲ್ಲೆಯ ಹಳಿಯಾಳದ ಹೊಂಗಿರಣ ಗೊಂಬೆಯಾಟ ಕಲಾ ತಂಡದವರು ಸೂತ್ರದ ಗೊಂಬೆಯಾಟ ನಡೆಸಿಕೊಡುವರು.

28 ರಂದು ಸಾಯಂಕಾಲ 6 ಗಂ–ಟೆಗೆ ಲಿಂಗಾಯತ ಸ್ವತಂತ್ರ ಧರ್ಮ ಗೋಷ್ಠಿಯನ್ನು ಪೂಜ್ಯ ಸಿದ್ಧರಾಮ ಶರಣರು ಬೆಲ್ದಾಳ ಸಾನಿಧ್ಯದಲ್ಲಿ ಜಾಲಿಂಮ ಸಭೆ ಹಿರಿಯ ಉಪಧ್ಯಕ್ಷರಾದ ಬಸವರಾಜ ಬುಳ್ಳಾ ಉದ್ಘಾಟಿಸಲಿದ್ದು. ರಾಜೇಂದ್ರ ಜೊನ್ನಿಕೇರಿ, ರಾಜೇಂದ್ರಕುಮಾರ ಗಂದಗೆ, ಆನಂದ ದೇವಪ್ಪಾ ಸೇರಿದಂತೆ ಇತರರು ಉಪಸ್ಥಿತರಿರುವರು

29 ಸಾಯಂಕಾಲ 6 ಗಂಟೆಗೆ ಮರೆತು ಹೋದ ಲಿಂಗಾಯತ ಮಹಾಸಾಮ್ರಾಜ್ಯ ವಿಜಯನಗರ ಪೂಜ್ಯಶ್ರೀ ಅಭಿನವ ಚನ್ನಬಸವ ಸ್ವಾಮಿಗಳು ಮಂತಾಳ ಸಾನಿಧ್ಯದಲ್ಲಿ, ನಿವೃತ್ತ ಡೀನರಾದ ಡಾ. ಅಮರನಾಥ ಸೋಲಪುರೆ ಅನುಭಾವ ನೀಡುವರು. ಶರಣಪ್ಪ ಮಿಠಾರೆ, ಕ.ಸಾ.ಪ ಜಿಲ್ಲಾ ಅಧ್ಯಕ್ಷ ಸುರೇಶ ಚನ್ನಶೆಟ್ಟಿ ಇತರರು ಇರುವರು.

30 ರಂದು ಸಾಯಂಕಾಲ 6 ಗಂಟೆಗೆ ಬಸವ ಬೆಳಕು ಆಂಧ್ರ, ಮಹಾರಾಷ್ಟ್ರ. ತೆಲಂಗಾಣ. ಗೋಷ್ಠಿ ಸಂಸದ ಸಾಗರ ಖಂಡ್ರೆ ಉದ್ಘಟಿಸುವರು ಶ್ರೀ ಚಂದ್ರಶೇಖರ ಸರಸ್ವತಿ ವಿಶ್ವವಿದ್ಯಾಲಯ ತೆಲಂಗಾಣ ಕುಲಪತಿ ಪ್ರೋ. ಎಸ್, ಜಯರಾಂ ರೆಡ್ಡಿ, ತೆಲುಗು ಯುನಿರ್ವಸಿಟಿ ಹೈದ್ರಬಾದನ ಮಾಜಿ ಕುಲಪತಿ ಥಾಂಗೆಡ ಕಿಸಾನರಾವ, ಗುಂಟೂರ ಇಂಜಿನಿಯರಿಂಗ್ ಕಾಲೇಜಿನ ಪ್ರಾಧ್ಯಾಪಕ ಕುರಪತಿ ನೀಲಕಂಠೇಶ್ವರ ಪ್ರಸಾದ ಮುಖ್ಯ ಅತಿಥಿಗಳಾಗಿ ಡಾ. ಜಿ.ಎಸ್, ಬುರಾಳೆ ಅಧ್ಯಕ್ಷತೆ. ಶಿವಾನಂದ ದಾಪಶೆಟ್ಕರ ಮಹಾರಾಷ್ಟ್ರ ಬಸವ ಕೀರ್ತನ ನಡೆಸಿಕೊಡುವರು.

1 ಮುಂಜಾನೆ 11 ಗಂಟೆಗೆ ಹುತಾತ್ಮ ದಿನಾಚರಣೆ ಪೂಜ್ಯ ಬಸವಪ್ರಭು ಸ್ವಾಮಿಗಳ ಸಾನಿಧ್ಯದಲ್ಲಿ ಡಾ. ಸೋಮನಾಥ ಯಾಳವಾರ ಅನುಭಾವ ನೀಡುವರು. ವಿವಿಧ ಕ್ಷೇತ್ರ ಸಾಧಕರಿಗೆ ಶರಣ ನಾಯಕ ಪ್ರಶಸ್ತಿ ನೀಡಿ ಗೌರವಿಸಲಾಗುವುದು.

3 ಗಂಟೆಗೆ ಹುತಾತ್ಮ ಶರಣ ಎಳೆಹೂಟೆ ಮೆರವಣಿಗೆ: ಕೋಟೆಯಿಂದ ಹರಳಯ್ಯ ಗವಿಯವರೆಗೆ)

ಕಲುಬುರಗಿ ಗ್ರಾಮೀಣ ಮತ ಕ್ಷೇತ್ರದ ಶಾಸಕರಾದ ಬಸವರಾಜ ಮತ್ತಿಮೂಡ ಮೆರವಣಿಗೆಗೆ ಚಾಲನೆ ನೀಡುವರು. ಸಿಪಿಐ ಅಲಿಸಾಬ ವಚನ ಪಠಣ ಮಾಡುವರು. ಶರಣರ ತಲೆಯ ಮೇಲೆ ವಚನ ಸಾಹಿತ್ಯ ಎತ್ತಿನ ಬಂಡಿಯ ಮೇಲೆ ಶರಣರ ಸ್ತಬ್ಧ ಚಿತ್ರಗಳು, ಕುದುರೆ ಒಂಟೆಯ ಮೇಲೆ ಶರಣ ವೇಷಧಾರಿಗಳು, ಭಜನಾ ತಂಡಗಳು, ಡೊಳ್ಳು, ವಚನ ವಡಪು, ಜಾನಪದ ತಂಡಗಳು ಮೆರವಣಿಗೆಯ ಮೆರಗನ್ನು ಹೆಚ್ಚಿಸಲಿವೆ.

ಸಾಯಂಕಾಲ 6ಗಂಟೆಗೆ ಶರಣ ವಿಜಯ ಪ್ರಶಸ್ತಿ ಪ್ರದಾನ ಸಮಾರಂಭದ ಸಾನಿಧ್ಯವನ್ನು ನಿಡಸೋಸಿ ಜಗದ್ಗುರು ಸಿದ್ಧ ಸಂಸ್ಥಾನ ಮಠದ ಪೂಜ್ಯಶ್ರೀ ಜಗದ್ಗುರು ಪಂಚಮ ಶಿವಲಿಂಗೇಶ್ವರ ಮಹಾಸ್ವಾಮಿಗಳು, ಪಾಂಟೋಮಟ್ಟಿಯ ಡಾ. ಶಿವಾನಂದ ಮಹಾಸ್ವಾಮಿಗಳು, ಹುಲಸೂರಿನ ಪೂಜ್ಯ ಶ್ರೀ ಡಾ. ಶಿವಾನಂದ ಮಹಾಸ್ವಾಮಿಗಳು, ಭಾಲ್ಕಿಯ ಪೂಜ್ಯ ಗುರುಬಸವ ಪಟ್ಟದ್ದೇವರು ವಹಸಿಕೊಳ್ಳಲಿದ್ದು, ಪೂಜ್ಯ ಶ್ರೀ ಡಾ. ಗಂಗಾಂಬಿಕಾ ಅಕ್ಕ ನೇತೃತ್ವ . ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಖಂಡ್ರೆ ಉದ್ಘಾಟಿಸುವರು. ಶಾಸಕ ಶರಣು ಸಲಗರ ಅಧ್ಯಕ್ಷತೆ . ಧನರಾಜ ತಾಳಂಪಳ್ಳಿ, ಡಾ. ವಿಜಯಶ್ರೀ ಬಶೆಟಿ. ಸೋಮಶೇಖರ ಪಾಟೀಲ ಗಾದಗಿ ಸೇರಿದಂತೆ ಸಮಾಜದ ಮುಖಂಡರು ಪಾಲ್ಗೊಳ್ಳುವರು

ಶರಣ ವಿಜಯ ರಾಷ್ಟ್ರೀಯ ಪುರಸ್ಕಾರ: ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ಸಾಧಕರಿಗೆ ಪ್ರತಿ ವರ್ಷ ಶರಣ ವಿಜಯ ರಾಷ್ಟ್ರೀಯ ಪುರಸ್ಕಾರ ನೀಡಲಾಗುತ್ತಿತ್ತು 2025 ನೇ ಸಾಲಿಗೆ ಪೂಜ್ಯಶ್ರೀ ಡಾ. ನಾಡೋಜ ಬಸವಲಿಂಗ ಪಟ್ಟದ್ದೇವರು ಅವರಿಗೆ ಪ್ರಧಾನ ಮಾಡಲಾಗುವುದು. ಪ್ರಶಸ್ತಿಯು ನಗದು ಪುರಸ್ಕಾರ ಹಾಗೂ ಪ್ರಶಸ್ತಿ ಫಲಕಗಳನ್ನು ಒಳಗೊಂಡಿರುತ್ತದೆ.

2 ರಂದು ಶರಣ ವಿಜಯೋತ್ಸವ ಮಂಗಲ ಸಮಾರಂಭ ಸರ್ವರಿಂದ ವಚನ ಪಠಣ ನಡೆಯಲಿದೆ ಎಂದರು.

ದಿನಾಂಕ: 27 ರಂದು ಶನಿವಾರ ಮುಂಜಾನೆ 11 ಗಂಟೆಗೆ ಯುವ ಸಮಾವೇಶ ನಡೆಲಿದ್ದು ಇಸ್ರೋದ ಚಂದ್ರಯಾನ –3 ಯೋಜನೆಯ ಉಪನಿರ್ದೇಕರಾದ ರೂಪಾ ಎಂ.ವಿ ಅವರು ಉಪನ್ಯಾಸ ಹಾಗೂ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿಕೊಡಲಿದ್ದಾರೆ.

ದಿನಾಂಕ: 22 ರಿಂದ 1 ರವರೆಗ ಬೆಳಗ್ಗೆ ಸಾಮೂಹಿಕ ವಚನ ಇಷ್ಟಲಿಂಗ ಪೂಜಾ ಯೋಗ, ಪ್ರಭುಲಿಂಗಲೀಲೆ ಪ್ರವಚನ ನಡೆಯಲಿದೆ. ಮುಂಜಾನೆ 11 ಗಂಟೆಗೆ ವಚನ ಓದು, ಗಣ ನಾಯಕ–ನಾಯಕಿಯರ ಸಮಾವೇಶ ಜಾನಪದ ಗಾಯನ, ಕೋಟೆಯ ಸ್ವಚ್ಚತಾ , ಭಜನೆ, ಕೀರ್ತನೆ ಕಥನಗಳು ನಡೆಯಲಿವೆ.

ಆದ್ದರಿಂದ ಎಲ್ಲಾ ಕಾರ್ಯಕ್ರಮಗಳಲ್ಲಿ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸದುಪಯೋಗ ಪಡೆದುಕೊಳ್ಳಬೇಕು ಎಂದರು. ಪತ್ರಿಕಾ ಗೋಷ್ಠಿಯಲ್ಲಿ . ಶ್ರೀ ಬಸವೇಶ್ವರ ಹಿರಿಯ ನಾಗರಿಕರ ಒಕ್ಕೂಟದ ಅಧ್ಯಕ್ಷ ಚನ್ನಪ್ಪ ಪ್ರತಾಪೂರೆ, ತಾಲೂಕ ಶರಣ ಸಾಹಿತ್ಯ ಪರಿಷತ್ತು ಅಧ್ಯಕ್ಷ ಗುರುನಾಥ ಗಡ್ಡೆ, ಶಂಕರ ಕರಣೆ, ಸೋನಲಿಕಾ ನೀಲಕಂಠೆ, ರಾಜಶೇಖರ ಬಿರಾದಾರ, ಶಿವಕುಮಾರ ಬಿರಾದಾರ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಎಸಿ, ತಹಶೀಲ್ದಾರರ ವಿರುದ್ಧ ಲೋಕಾದಲ್ಲಿ ದೂರು

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.19–ನಿವೃತ್ತ ಸೈನಿಕರಿಗೆ ಸರಕಾರದಿಂದ ದೊರೆಯಬಹುದಾದ ಸೌಲಭ್ಯಗಳನ್ನು ನೀಡುವಲ್ಲಿ ಕರ್ತವ್ಯಲೋಪ ಎಸಗಿದ ಬಾಗಲಕೋಟೆ ಮತ್ತು ಜಮಖಂಡಿ ಉಪವಿಭಾಗಾಧಿಕಾರಿಗಳು ಮತ್ತು ಜಿಲ್ಲೆಯ ಎಲ್ಲ ತಹಶೀಲ್ದಾರರ ವಿರುದ್ಧ ರಾಜ್ಯದ ಉಪ ಲೋಕಾಯುಕ್ತರು ಸ್ವಯಂ ಪ್ರೇರಿತರಾಗಿ ದೂರು ದಾಖಲಿಸಿಕೊಂಡಿದ್ದಾರೆ. ರಾಜ್ಯದ ಉಪ ಲೋಕಾಯುಕ್ತ ನ್ಯಾ.ಬಿ.ವೀರಪ್ಪ ಅವರು ಕರ್ನಾಟಕ ಲೋಕಾಯುಕ್ತ ಕಾಯ್ದೆ, 1984 ಕಲಂ 7(2) ಮತ್ತು ಕಲಂ 9(3)(ಬಿ) ರಡಿಯಲ್ಲಿ ಹೊರಡಿಸಿದ ಆದೇಶದಲ್ಲಿ ದೇಶಕ್ಕಾಗಿ ಭಾರತೀಯ ಸೇನೆ, ಭಾರತೀಯ ನೌಕಾಪಡೆ ಮತ್ತು ಭಾರತೀಯ ವಾಯುಪಡೆಗಳಲ್ಲಿ ಸೇವೆ ಸಲ್ಲಿಸಿ ನಿವೃತ್ತರಾದ ಸೈನಿಕರಿಗೆ, ಸ್ವಾತಂತ್ರ್ಯ ಹೋರಾಟಗಾರರಿಗೆ ನಿವೃತ್ತಿ ನಂತರ ಸ್ವಾವಲಂಬಿ ಜೀವನವನ್ನು ನಡೆಸಿಕೊಂಡು ಹೋಗಲು ಬೇರೆ ಬೇರೆ ರೀತಿಯ ಯೋಜನೆಗಳನ್ನು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಜಾರಿಗೆ ತಂದಿವೆ. ಸೈನಿಕರಿಗೆ ಮತ್ತು ಹುತಾತ್ಮರ ಕುಟುಂಬದವರಿಗೆ ಬೇರೆ ಬೇರೆ ಸವಲತ್ತುಗಳನ್ನು ನೀಡುವುದು, ನಿವೃತ್ತರಾದ ಯೋಧರಿಗೆ ಹಾಗೂ ಹುತಾತ್ಮ ಯೋಧರ ಅವಲಂಬಿತರಿಗೆ ಹಾಗೂ ಸ್ವಾತಂತ್ರ್ಯ ಹೋರಾಟಗಾರರಿಗೆ ಮತ್ತು ಅವರ ಅವಲಂಬಿತ ಕುಟುಂಬದ ಸದಸ್ಯರಿಗೆ ಕೆಲವು ಸೌಲಭ್ಯಗಳನ್ನು ಕಲ್ಪಿಸಲು ಕಾನೂನು ಮಾಡಿದ್ದರೂ ಸಹ ಅವರಿಗೆ ನಿಯಮಾನುಸಾರ ಸರ್ಕಾರದಿಂದ ದೊರೆಯಬೇಕಾದ ಸೌಲಭ್ಯ, ನಿವೇಶನವನ್ನು ನಿಗದಿತ ಸಮಯದಲ್ಲಿ ನೀಡದೇ ವರ್ಷಾನುಗಟ್ಟಲೇ ಸತಾಯಿಸಿ ಅನಾವಶ್ಯಕ ತೊಂದರೆಯನ್ನುಂಟು ಮಾಡುವ ಮೂಲಕ ಕರ್ತವ್ಯಲೋಪ ಎಸಗಿದ್ದಾರೆ. ಈ ಹಿನ್ನೆಲೆಯಲ್ಲಿ ವರದಿ ನೀಡುವಂತೆ ರಾಜ್ಯದ ಉಪ ಲೋಕಾಯುಕ್ತರು ಸ್ವಯಂ ಪ್ರೇರಿತ ದೂರು ದಾಖಲಿಸಿಕೊಂಡಿದ್ದಾರೆ.

# ದೇಶದ ಏಕತೆಗೆ ಹಿಂದಿ ಭಾಷೆ ಪ್ರೇರಣಾ ಶಕ್ತಿ :ಅಸ್ಲಾಂಮಿಯಾ




ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: ವೈವಿದ್ಯದಲ್ಲಿ ಏಕತೆ ಹೊಂದಿರುವ ಭಾರದಲ್ಲಿ ಹಿಂದಿ ಭಾಷೆ ತನ್ನ ಪ್ರಾಚೀನತೆ ಉಳಿಸಿಕೊಂಡು ಬಂದಿದೆ. ಸರಳತೆಯಿಂದ ಕೂಡಿದ ಮಧುರವಾದ ಭಾಷೆಯಾಗಿದೆ ಎಂದು ಸಮಾಜ ಕಾರ್ಯಕರ್ತ ಮಹ್ಮದ್ ಅಸ್ಲಾಂಮಿಯಾ ತಿಳಿಸಿದರು. ಶುಕ್ರವಾರ ಪಟ್ಟಣದ ಸರಕಾರಿ ಕನ್ಯಾ ಪ್ರೌಢ ಶಾಲೆಯಲ್ಲಿ ಹಮ್ಮಿಕೊಂಡಿದ್ದ ರಾಷ್ಟ್ರೀಯ ಹಿಂದಿ ದಿನಾಚರಣೆ ಉದ್ಘಾಟಿಸಿ ಮಾತನಾಡಿದ ಅವರು, ಹಿಂದಿ ಭಾಷೆ ತನ್ನದೇ ಆದ ವಿಶಿಷ್ಟ ರೂಪ ಹೊಂದಿದೆ, ದೇಶದ ಮೂಲೆ ಮೂಲೆಗು ಹಿಂದಿ ಭಾಷೆ ಹರಡಿಕೊಂಡಿದೆ ಎಂಬುದಕ್ಕೆ ಅನೇಕ ಉದಾಹರಣೆಗಳಿವೆ, ಹೀಗಾಗಿ ಪ್ರತಿಯೊಬ್ಬರೂ ಹಿಂದಿ ಭಾಷವನ್ನು ಗೌರವಿಸಬೇಕು. ಸಂವಿಧಾನದ ರಚನಾ ಸಮಿತಿಯೂ 1949ರ ಸೆಪ್ಟೆಂಬರ್ 14ರಂದು ಹಿಂದಿ ರಾಜ್ಯ ಭಾಷೆಯನ್ನಾಗಿ ಅಂಗೀಕರಿಸಿದರಿಂದ ಈ ದಿನವನ್ನು 1953ರಿಂದ ಪ್ರತಿ ವರ್ಷ ಹಿಂದಿ ದಿನವನ್ನಾಗಿ ಆಚರಿಸುತ್ತಾ ಬರಲಾಗಿದೆ. ಹಿಂದಿ ಕಲಿಯುವ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡಲಾಗುತ್ತಿದೆ. ವಿದ್ಯಾರ್ಥಿಗಳು ಸೌಲಭ್ಯಗಳನ್ನು ಬಳಕೆ ಮಾಡಿಕೊಳ್ಳಬೇಕೆಂದು ತಿಳಿಸಿದರು. ಸರ್ಕಾರಿ ನೌಕರರ ಸಂಘದ ತಾಲೂಕಾಧ್ಯಕ್ಷ ರಾಜಶೇಖರ ಉಪ್ಪಿನ ಮಾತನಾಡಿ ಸ್ವಾತಂತ್ರ್ಯ ಸಂಗ್ರಾಮದ ದಿನಗಳಿಂದಲೂ ಹಿಂದಿ ಭಾಷೆಯು ತನ್ನ ಸೇವೆ ಹಾಗೂ ಕೊಡುಗೆ ನೀಡುತ್ತ ಬಂದಿದೆ. ವಂದೇ ಮಾತರಂ, ಭಾರತ ಮಾತಾ ಕೀ ಜೈ ನಾನಾ ಸಂದೇಶಗಳು ಹಿಂದಿ ಭಾಷೆಯ ಮೂಲಕವೇ ವ್ಯಕ್ತವಾಗಿವೆ ಎಂದರು. ಹಿಂದಿ ಭಾಷೆ ಕೇವಲ ಒಂದು ಭಾಷೆಯಲ್ಲ. ಅದು ದೇಶದ ಒಗ್ಗಟ್ಟು ಸಾರುವ ಭಾಷೆಯಾಗಿದೆ. ನಮ್ಮ ದೇಶದಲ್ಲಿ 130ಕ್ಕೂ ಹೆಚ್ಚು ವಿವಿಗಳಲ್ಲಿ 50 ದೇಶಗಳಲ್ಲಿ ಹಿಂದಿ ಭಾಷೆ ಕಾಣಬಹುದಾಗಿದೆ ಎಂದರು. ಕಸಾಪ ತಾಲೂಕಾಧ್ಯಕ್ಷ ಅನೀಲಕುಮಾರ್ ಸಿಂಧೆ ಮಾತನಾಡಿ, ಹಿಂದಿ ದಿವಸ್" ನಾವು ಯಾವುದೇ ರೀತಿಯಲ್ಲಿ ದೇವನಾಗರಿ ಹಿಂದಿಯನ್ನು ಪ್ರಚಾರ ಮಾಡಲು ಆಚರಿಸುವ ದಿನವಾಗಿದೆ. ಇಂಗ್ಲಿಷ್ ಭಾಷೆಯ ವೇಗವಾದ ಮತ್ತು ವ್ಯಾಪಕವಾದ ಸ್ವೀಕಾರಾರ್ಹತೆಯ ಬಗ್ಗೆ ನಾವೆಲ್ಲರೂ ಚೆನ್ನಾಗಿ ತಿಳಿದಿದ್ದೇವೆ. ಇಂದು ಎಲ್ಲಾ ಇತರ ಕೆಲಸಗಳನ್ನು ಇಂಗ್ಲಿಷ್‌ನಲ್ಲಿ ಮಾಡುವ ಶಾಲೆಗಳಲ್ಲಿ ಹಿಂದಿ ಮಾತ್ರ ಒಂದು ವಿಷಯವಾಗಿ ಉಳಿದಿದೆ. ಅತ್ಯಂತ ಸಾಮಾನ್ಯ ಸಂವಹನ ಭಾಷೆ ಕೂಡ ಇಂಗ್ಲಿಷ್ ಮಾತ್ರ. ಸರ್ಕಾರಿ ಅಥವಾ ಖಾಸಗಿ ಕಚೇರಿಗಳಲ್ಲಿ ಪರಿಸ್ಥಿತಿ ಭಿನ್ನವಾಗಿಲ್ಲ.

> "ಶಾಲೆಗೆ ಪ್ರಥಮ ಬಂದಿರುವುದು ತುಂಬಾ ಖುಷಿ ತಂದಿದೆ. ಈ ಸಾಧನೆಗೆ ನನ್ನ ಪೋಷಕರು ಮತ್ತು ಗುರುಗಳೆ ಮುಖ್ಯ ಕಾರಣ ಶಾಲೆಯಲ್ಲಿ ಕಲಿಕೆಗೆ ಪೂರಕ ವಾತಾವರಣವಿತ್ತು. ಶಿಕ್ಷಕರು ಉತ್ತಮವಾಗಿ ಬೋಧಿಸುತ್ತಿದ್ದರು. ಶೈಕ್ಷಣಿಕ ಗೊಂದಲವಿದ್ದರೆ ಬಗೆ ಹರಿಸುತ್ತಿದರು. ಮುಂದೆ ನೀವು ಒಳ್ಳೆಯ ರೀತಿಯ ಅಭ್ಯಾಸ ಮಾಡಿ ನೀವು ಈ ವೇದಿಕೆಯಲ್ಲಿ ಸನ್ಮಾನ ಮಾಡಿಕೊಳಬೇಕು ಎಂದು ಕನಿಕಾ ಸ್ವಾಮಿ ವಿದ್ಯಾರ್ಥಿಗಳಿಗೆ ತಿಳಿಸಿದರು.

ಹೀಗೆಯೇ ಮುಂದುವರೆಯಲು ಬಿಟ್ಟರೆ ಮುಂದೊಂದು ದಿನ ಹಿಂದಿ ಓದುವ, ಮಾತನಾಡುವ, ಬರೆಯಬಲ್ಲವರು ಸಿಗುವುದು ಕಷ್ಟವಾಗುತ್ತದೆ. ಆದ್ದರಿಂದ ಹಿಂದಿ ದಿವಸ್‌ನಲ್ಲಿ ಹಿಂದಿಯನ್ನು ಉತ್ತೇಜಿಸಲು ನಾವು ಬದ್ಧರಾಗಿರಬೇಕೆಂದು ತಿಳಿಸಿದರು. ಶಾಲೆಯ ಮುಖ್ಯ ಗುರುಗಳಾದ ಬಸವರಾಜ ಮೇತ್ರೆ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ನಮ್ಮ ಭಾರತೀಯ ಸಂಸ್ಕೃತಿ ಮತ್ತು ಸಂಪ್ರದಾಯಗಳನ್ನು ಸಂರಕ್ಷಿಸಲು ಮತ್ತು ಹಿಂದಿ ಭಾಷೆಯ ಪ್ರಾಮುಖ್ಯತೆಯನ್ನು ಇನ್ನೂ ಉಳಿಸಿಕೊಳ್ಳಲು ಆಸಕ್ತಿ ಹೊಂದಿರುವ ಅನೇಕ ಜನರಿದ್ದಾರೆ. ದಿನ ನಿತ್ಯದ ಜೀವನದಲ್ಲಿ ಭಾಷೆಯನ್ನು ಬಳಸಬೇಕು, 2024–25ನೇ ಸಾಲಿನ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ನಮ್ಮ ಶಾಲೆಯ ವಿದ್ಯಾರ್ಥಿನಿಯರು ಹಿಂದಿ ವಿಷಯದಲ್ಲಿ 100ಕ್ಕೆ 100% ಪ್ರತಿ ಶತ ಅಂಕ ಪಡೆದಿದ್ದಾರೆ ಮುಂದೆ ಎಲ್ಲಾ ವಿಷಯಗಳಲ್ಲಿ 100ಕ್ಕೆ 100 ಪ್ರತಿಶತ ಅಂಕಗಳು ತೆಗೆದುಕೊಳ್ಳಬೇಕೆಂದು ಮಕ್ಕಳಿಗೆ ತಿಳಿಸಿದರು. ರಮೇಶ ಬಿರಾದಾರ್ ವಿಶೇಷ ಉಪನ್ಯಾಸ ನೀಡಿದರು.

ಪತ್ರಕರ್ತರಾದ ರಾಜಕುಮಾರ ಆರ್. ಹಡಪದ, ಸೈಯದ್ ಅಜೀಮ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು. ಹಿಂದಿ ವಿಷಯದಲ್ಲಿ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಮತ್ತು ಪಾಲಕರಿಗೆ ಹಿಂದಿ ವಿಷಯದ ಶಿಕ್ಷಕ ಸಂಜೀವನ ಭೋಸ್ಲೆ ಸನ್ಮಾನಿಸಿ ಬಹುಮಾನ ನೀಡಿ ಶುಭ ಹಾರೈಸಿದರು. ಕಾರ್ಯಕ್ರಮವನ್ನು ಸಂಜೀವನ ಭೋಸ್ಲೆ ನಿರೋಪಿಸಿದರು, ಗುಂಡಪ್ಪ ಕೋರಿ ಸ್ವಾಗತಿಸಿದರು, ಪಂಚಶೀಲಾ ಕಟ್ಟಿಮನಿ ವಂದಿಸಿದರು. ಈ ಸಂದರ್ಭದಲ್ಲಿ ಭೀಮಪ್ರಕಾಶ, ಸಿಬ್ಬಂದಿಗಳಾದ ಅಂಬಿಕಾ ಮಾಳಗೆ, ಸಾದಿಯಾ ಸುಲ್ತಾನಾ, ಹಸನ್ ಲಚ್ಚಿಕೆ, ಶಿಲ್ಪಾ, ಸುಮಾ ರೆಡ್ಡಿ, ಆಯಿಷ್ಯ ಸುಲ್ತಾನಾ, ಸೂಯೆಬ್ ಸೇರಿದಂತೆ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

# ಇಂದು ಶಿಕ್ಷಕ ಪ್ರಶಸ್ತಿ ಪ್ರದಾನ ಸಮಾರಂಭ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.19–ನಗರದ ಬಸವೇಶ್ವರ ವೀರಶೈವ ವಿದ್ಯಾವರ್ಧಕ ಸಂಘದಿಂದ ಪ್ರತಿವರ್ಷ ಕೊಡುಮಾಡುವ ಬಿವಿವಿಎಸ್ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ಸಮಾರಂಭ ಸೆ.20 ಶನಿವಾರ ಸಂಘದ ನೂತನ ಸಭಾಭವನದಲ್ಲಿ ಸಾಯಂಕಾಲ 4 ಗಂಟೆಗೆ ಜರುಗಲಿದೆ, ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಘದ ಕಾರ್ಯಾಧ್ಯಕ್ಷ ವೀರಣ್ಣ ಚರಂತಿಮಠ ವಹಿಸುವರು. ಮುಖ್ಯ ಅತಿಥಿಗಳಾಗಿ ಧಾರವಾಡ ಐಐಟಿಯ ಡೀನ ಡಾ.ಶಿವಪ್ರಸಾದ ಆಗಮಿಸುವರು. ಸಂಘದ ಗೌರವ ಕಾರ್ಯದರ್ಶಿ ಮಹೇಶ ಅಥಣಿ, ವಿಜಯಪುರದ ಶಿಕ್ಷಣ ತಜ್ಞರಾದ ಪ್ರೊ. ಎನ್.ಜಿ ಕರೂರ ಉಪಸ್ಥಿತರಿರುವರು.

# ತಾತ್ಕಾಲಿಕ ಬೆರಳಚ್ಚುಗಾರ ಹುದ್ದೆಗೆ ಅರ್ಜಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.19–ಜಿಲ್ಲೆಯ ಜಮಖಂಡಿ ಹಾಗೂ ಬೀಳಗಿ ತಾಲೂಕಾ ಕಾನೂನು ಸೇವಾ ಸಮಿತಿಯಲ್ಲಿ ಗುಮಾಸ್ತ ಹಾಗೂ ಬೆರಳಚ್ಚುಗಾರ ತಲಾ ಒಂದು ಹುದ್ದೆಗೆ ಗುತ್ತಿಗೆ ಆಧಾರದ ಮೇಲೆ ಹಾಗೂ ತಾತ್ಕಾಲಿಕವಾಗಿ ನೇಮಕ ಮಾಡಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸುವವರು ಕಂಪ್ಯೂಟರ ಜ್ಞಾನ ಮತ್ತು ಪದವಿ ಹೊಂದಿರಬೇಕು. ಆಸಕ್ತರು ಸೆಪ್ಟೆಂಬರ 22 ರೊಳಗಾಗಿ ಕಚೇರಿ ಅವಧಿಯಲ್ಲಿ ಭರ್ತಿ ಮಾಡಿದ ಅರ್ಜಿಗಳನ್ನು, ಸದಸ್ಯ ಕಾರ್ಯದರ್ಶಿಗಳ ಕಾರ್ಯಾಲಯ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಎಡಿಆರ್. ಕಟ್ಟಡ ಜಿಲ್ಲಾ ನ್ಯಾಯಾಲಯಗಳ ಆವರಣ, ಬಾಗಲಕೋಟೆ ಇವರಿಗೆ ಸಲ್ಲಿಸುವಂತೆ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆರೋಗ್ಯ ಇಲಾಖೆ ಪ್ರಗತಿ ಪರಿಶೀಲನಾ ಸಭೆ ತಾಯಿ ಮರಣ ತಡೆಗೆ ಕ್ರಮವಹಿಸಿ: ಕುರೇರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.19–ಅಪೌಷ್ಠಿಕತೆ, ರಕ್ತಹೀನತೆ ಕೊರತೆಯನ್ನು ನೀಗಿಸುವ ನಿಟ್ಟಿನಲ್ಲಿ ಸರಕಾರ ಹಲವು ಯೋಜನೆಗಳನ್ನು ರೂಪಿಸಿದೆ. ಅವುಗಳನ್ನು ಸರಿಯಾಗಿ ಕಾರ್ಯರೂಪಕ್ಕೆ ತರುವ ಮೂಲಕ ತಾಯಿ ಮರಣ ಸಂಭವಿಸದಂತೆ ನೋಡಿಕೊಳ್ಳಬೇಕೆಂದು ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಪಂಚಾಯತ ಸಭಾಭವನದಲ್ಲಿ ಶುಕ್ರವಾರ ಆರೋಗ್ಯ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ತಂತ್ರಜ್ಞಾನ ಬಹಳ ಮುಂದುವರಿದಿದ್ದು ಬದುಕಿಸಲು ಪ್ರಯತ್ನ ಮಾಡಬೇಕು. ಪೌಷ್ಠಿಕತೆಯ ಬಗ್ಗೆ ಆಶಾ ಕಾರ್ಯಕರ್ತೆಯರ ಸಭೆಯಲ್ಲಿ ತಿಳಿಸಿ ಗರ್ಭಿಣಿ ಮಹಿಳೆಯ ಆರೋಗ್ಯದ ಮೇಲೆ ಪರಿಣಾಮ ಬೀರದಂತೆ ಆಶಾ ಕಾರ್ಯಕರ್ತೆಯರು ನಿಗಾವಹಿಸಬೇಕು. ಶಾಲಾ ದಾಖಲಾತಿ ಆಧಾರ ಮೇಲೆ ತಾಯಿ ಕಾರ್ಡ ನೀಡಿ. ಬಾಲ್ಯವಿವಾಹ ನಡೆಯದಂತೆ ನೋಡಿಕೊಳ್ಳಬೇಕು. ಬಾಲ್ಯವಿವಾಹ ನಡೆಯುತ್ತಿದ್ದಲ್ಲಿ ವಿವಿಧ ಇಲಾಖೆಯ ಜೊತೆ ಜಂಟಿಯಾಗಿ ನಿಲ್ಲಿಸುವ ಕಾರ್ಯವಾಗಬೇಕು ಎಂದರು.

ಅವಶ್ಯಕತೆಗೆ ಅನುಗುಣವಾಗಿ ಔಷಧಿ ಇಂಡೆಂಟ್ ನೀಡಬೇಕು. ಹೆಚ್ಚುವರಿಯಾಗಿ ಖರೀದಿಸಿದ ಔಷಧಿಯನ್ನು ಇ–ಔಷಧಿ ಪೋರ್ಟಲ್‌ನಲ್ಲಿ ದಾಖಲು ಮಾಡಲು ಸೂಚಿಸಿದರು. ತಾಲೂಕಾ ಆಸ್ಪತ್ರೆಯಲ್ಲಿ ವೈದ್ಯಾಧಿಕಾರಿಗಳು ಹಾಗೂ ಸಿಬ್ಬಂದಿಗಳು ಸರಿಯಾದ ಸಮಯಕ್ಕೆ ಬರುತ್ತಿರುವ ಬಗ್ಗೆ ಮೇಲಾಧಿಕಾರಿಗಳು ನಿಗಾವಹಿಸಬೇಕು. ಪ್ರತಿದಿನ ಹಾಜರಾತಿ ವಿಶ್ಲೇಷಣೆ ಮಾಡಬೇಕು. ಸರಿಯಾಗಿ ಕಾರ್ಯನಿರ್ವಹಿಸುತ್ತಿರುವ ಬಗ್ಗೆ ಆಗಾಗೆ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಬೇಕು. ಅಂ–ದಾಗ ಮಾತ್ರ ಸುಧಾರಣೆ ತರಲು ಸಾಧ್ಯವಾಗುತ್ತದೆ ಎಂದು ಕುರೇರ ತಿಳಿಸಿದರು.

ರಾಷ್ಟ್ರೀಯ ಟಿಬಿ ನಿರ್ಮೂಲನೆ ಯೋಜನೆಯಡಿ ಜಿಲ್ಲೆಯಲ್ಲಿ ಈಗಾಗಲೇ 27 ಗ್ರಾಮಗಳನ್ನು ಟಿಬಿ ಮುಕ್ತ ಗ್ರಾಮಗಳನ್ನಾಗಿ ಘೋಷಿಸಲಾಗಿದೆ. ಇನ್ನು 64 ಗ್ರಾಮಗಳನ್ನು ಘೋಷಿಸಲು ಶಿಫಾರಸ್ಸು ಮಾಡಲಾಗುತ್ತಿದೆ. ಗ್ರಾಮಗಳಲ್ಲಿ ಪರೀಕ್ಷೆ ಗುಣಮಟ್ಟದಿಂದ ಕೂಡಿರಬೇಕು. ಟಿಬಿ ಮುಕ್ತ ಗ್ರಾಮ ಎಂದು ಘೋಷಿಸಿದ ಮೇಲೆ ಪ್ರಕರಣಗಳು ಕಂಡುಬರಬಾರದು. ಆ ನಿಟ್ಟಿನಲ್ಲಿ ಕೆಲಸ ಆಗಬೇಕು. ಗೃಹ ಆರೋಗ್ಯ ಯೋಜನೆಯಡಿ ಗ್ರಾಮೀಣ ಪ್ರದೇಶದ ಮನೆ ಮನೆಗೆ ತೆರಳಿ 30 ಮೇಲ್ಪಟ್ಟವರಿಗೆ 14 ಅಸಾಂಕ್ರಾಮಿಕ ರೋಗಗಳನ್ನು ಪತ್ತೆ ಹಚ್ಚಿ ಉಚಿತವಾಗಿ ಔಷಧಿ ವಿತರಣೆ ನೀಡುವ ಕಾರ್ಯ ಸರಿಯಾಗಿ ನಡೆಯಬೇಕಿದೆ ಎಂದರು.

ಮನೆ ಮನೆಗೆ ತೆರಳಿದ ಸಂದರ್ಭದಲ್ಲಿ ಪ್ರಧಾನಮಂತ್ರಿ ಸುರಕ್ಷಾ ಬಿಮಾ ಯೋಜನೆ ಮತ್ತು ಪ್ರಧಾನಮಂತ್ರಿ ಜೀವನ ಜ್ಯೋತಿ ಬಿಮಾ ಯೋಜನೆಗಳ ಅರಿವು ಮೂಡಿಸುವ ಕೆಲಸವಾಗಬೇಕು. ಜಿಲ್ಲಾ ತಂಬಾಕು ನಿಯಂತ್ರಣ ಘಟಕವು ಜಿಲ್ಲೆಯಲ್ಲಿ ಮಾರಾಟ ಮಾಡುವ ಅಂಗಡಿಗಳ ಮೇಲೆ ಹೆಚ್ಚಿನ ದಾಳಿಗಳನ್ನು ನಡೆಸುವ ಕಾರ್ಯವಾಗಬೇಕು. ಶಾಲೆ ಮತ್ತು ಕಾಲೇಜುಗಳಿಗೆ ಈ ಬಗ್ಗೆ ಹೆಚ್ಚಿನ ಅರಿವು ಮೂಡಿಸುವ ಹಾಗೂ ವ್ಯಾಪ್ತಿಯಲ್ಲಿ ತಂಬಾಕು ಉತ್ಪನ್ನಗಳ ಮಾರಾಟವಾಗುವದನ್ನು ತಡೆಯುವ ಕಾರ್ಯವಾಗಬೇಕು ಎಂದು ಸಿಇಓ ಹೇಳಿದರು.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಮಂಜುನಾಥ ಡಿ.ಎನ್, ಜಿಲ್ಲಾ ಶಸ್ತ್ರ ಚಿಕಿತ್ಸಕ ಮಹೇಶ ಕೋಣಿ, ಜಿಲ್ಲಾ ಆರ್.ಸಿ.ಎಚ್ ಅಧಿಕಾರಿ ರಾಜಕುಮಾರ ಯರಗಲ್, ಜಿಲ್ಲಾ ಆಯುಷ ಅಧಿಕಾರಿ ಡಾ.ಎಸ್.ಜಿ.ಮಠ ಸೇರಿದಂತೆ ಆರೋಗ್ಯ ಇಲಾಖೆಯ ಜಿಲ್ಲಾ ಮಟ್ಟದ ವಿವಿಧ ಅಧಿಕಾರಿಗಳು, ತಾಲೂಕಾ ವೈದ್ಯಾಧಿಕಾರಿಗಳು ಉಪಸ್ಥಿತರಿದ್ದರು.

# ಪೋಕ್ಸೋ ಪ್ರಕರಣಗಳ ಇತ್ಯರ್ಥಕ್ಕೆ ದಾಖಲೆಗಳು ಮುಖ್ಯ–ನ್ಯಾ.ದಿಡ್ಡಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.19–ಪೋಕ್ಸೋ ಮತ್ತು ಬಾಲ್ಯವಿವಾಹದಂತಹ ಪ್ರಕರಣಗಳನ್ನು ಇತ್ಯರ್ಥಪಡಿಸುವಲ್ಲಿ ದಾಖಲೆಗಳು ಮುಖ್ಯವಾಗುತ್ತವೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ನ್ಯಾ.ಚಂದ್ರಶೇಖರ ದಿಡ್ಡಿ ಹೇಳಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಾರ್ಯಾಲಯದ ಸಭಾಭವನದಲ್ಲಿ ಮಕ್ಕಳ ರಕ್ಷಣಾ ನಿರ್ದೇಶನಾಲಯ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಪೊಲೀಸ್ ಇಲಾಖೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಹಯೋಗದಲ್ಲಿ ಪೊಲೀಸ್ ಠಾಣೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಡಬ್ಲೂಡಿಓ ಮತ್ತು ಮಕ್ಕಳ ವಿಶೇಷ ಪೊಲೀಸ್ ಘಟಕದ ಮಕ್ಕಳ ಪೊಲೀಸ್ ಅಧಿಕಾರಿಗಳಿಗಾಗಿ ಪೋಕ್ಸೋ, ಬಾಲ್ಯವಿವಾಹ ನಿಷೇಧ ಕಾಯ್ದೆ ಕುರಿತು ಜರುಗಿದ ಒಂದು ದಿನದ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಯಾವುದೇ ಪ್ರಕರಣ ದಾಖಲಾದಾಗ ಆ ಪ್ರಕರಣದ ಬಗ್ಗೆ ಸಾಕ್ಷಾಧಾರಗಳಲ್ಲಿ ಡಿಜಿಟಲ್ ಹಾಗೂ ಇತರೆ ದಾಖಲೆಗಳನ್ನು ಸಂಗ್ರಹಿಸಿಕೊಳ್ಳುವುದು ಮುಖ್ಯವಾಗಿದೆ. ಪೋಕ್ಸೊ ಬಾಲ್ಯವಿವಾಹ ಪ್ರಕರಣಗಳಲ್ಲಿ ವಿದ್ಯಾರ್ಥಿಗಳ ಐಡಿ ಕಾರ್ಡ ಸಹ ದಾಖಲಾಗಿ ಪರಿಣಮಿಸುತ್ತವೆ. ಆದ್ದರಿಂದ ಕೆಳಹಂತದಲ್ಲಿರುವ ಅಧಿಕಾರಿಗಳು ಪ್ರಕರಣ ಬಗ್ಗೆ ಸೂಕ್ತ ದಾಖಲೆಗಳನ್ನು ನ್ಯಾಯಾಲಯಕ್ಕೆ ನೀಡಿದಲ್ಲಿ ಪ್ರಕರಣ ಇತ್ಯರ್ಥಪಡಿಸಲು ಅನುಕೂಲವಾಗುತ್ತದೆ. ಪ್ರಕರಣದಿಂದ ತಪ್ಪಿಸಿಕೊಳ್ಳಲು ಸಾಧ್ಯವಾಗುವದಿಲ್ಲ ಎಂದರು.

ಜಿಲ್ಲಾಧಿಕಾರಿ ಸಂಗಪ್ಪ ಮಾತನಾಡಿ, ಅನುಷ್ಠಾನ ಅಧಿಕಾರಿಗಳಿಗೆ ಪೋ–ಕ್ಸೋ ಮತ್ತು ಬಾಲ್ಯವಿವಾಹ ನಿಷೇಧ ಕಾಯ್ದೆಗಳ ಬಗ್ಗೆ ಸಂಪೂರ್ಣ ಮಾಹಿತಿ ಇರಬೇಕಾಗುತ್ತದೆ. ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗಳ ಕಾರ್ಯ ಮಹತ್ವದ್ದಾಗಿದೆ. ಕಾಲಕಾಲಕ್ಕೆ ತರಬೇತಿ ಕಾರ್ಯಾಗಾರ ಹಮ್ಮಿಕೊಂಡಿರುವುದು ಉತ್ತಮ ಕಾರ್ಯವಾಗಿದೆ. ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್ ಮಾತನಾಡಿ, ಪ್ರಕರಣದ ವಿಚಾರಣೆಯಲ್ಲಿ ನಿರ್ಲಕ್ಷ ಮಾಡಬಾರದು. ವಿಚಾರಣೆ ಗುಣಮಟ್ಟದಿಂದ ಕೂಡಿರಬೇಕಾಗುತ್ತದೆ. ಇದರಿಂದ ಪ್ರಕರಣಗಳ ಇತ್ಯರ್ಥಕ್ಕೆ ಅನುಕೂಲವಾಗಲಿದೆ. ಮುಖ್ಯವಾಗಿ ಇಂದಿನ ತಂತ್ರಜ್ಞಾನ ಯುಗದಲ್ಲಿ ಸಾಕ್ಷಾಧಾರಗಳಲ್ಲಿ ಡಿಜಿಟಲ್ ದಾಖಲೆಗಳು ಮಹತ್ವ ಪಡೆದುಕೊಂಡಿದ್ದು, ವಿಚಾರಣೆಯಲ್ಲಿ ಮಹತ್ವದ ಪಾತ್ರ ವಹಿಸುತ್ತವೆ. ಪೋ–ಕ್ಸೋ ಮತ್ತು ಬಾಲ್ಯವಿವಾಹದಂತ ಪ್ರಕಣಗಳಲ್ಲಿ ಜಂಟಿಯಾಗಿ ಕೆಲಸ ಮಾಡುವುದು ಅಗತ್ಯವಾಗಿದೆ ಎಂದರು.

ಕಾರ್ಯಾಗಾರದಲ್ಲಿ ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷ ಹನಮಂತಗೌಡ ಪಾಟೀಲ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಮಹಾಂತೇಶ್ವರ ಜಿದ್ದಿ, ಡಿವಾಯ್‌ಎಸ್‌ಪಿ ಗಜಾನನ ಸುತಾರ, ತರಬೇತುದಾರ ರೋಹಿತ್ ಸಿ.ಜಿ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಡಾ.ವೀಣಾ ಎಂ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಮಾತೃ ಭಾಷೆಯ ಜೊತೆ ಇತರ ಭಾಷೆ ಗೌರವಿಸಿ–ಪ್ರೊ.ಬಿರಾದಾರ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.19–ಭಾಷೆ ಸಂವಹನದ ಸಶಕ್ತ ಮಾಧ್ಯಮವಾಗಿದ್ದು ಮಾತೃ ಭಾಷೆಯನ್ನು ಪ್ರೀತಿಸಿ ಇತರ ಭಾಷೆಗಳನ್ನು ಗೌರವಿಸುವ ಸದ್ಭಾವನೆ ಬೆಳೆಸಿಕೊಳ್ಳಬೇಕು ಎಂದು ಸಾಹಿತಿ, ಸೊಲ್ಲಾಪುರ ವಿಶ್ವವಿದ್ಯಾಲಯದ ಸೆನೆಟ್ ಸದಸ್ಯ ಪ್ರೊ.ಧನ್ಯಕುಮಾರ ಬಿರಾದಾರ ಹೇಳಿದರು. ನಗರದ ಬಿವಿವಿ ಸಂಘದ ಬಸವೇಶ್ವರ ವಾಣಿಜ್ಯ, ಬಸವೇಶ್ವರ ಕಲಾ ಹಾಗೂ ಬಸವೇಶ್ವರ ವಿಜ್ಞಾನ ಮಹಾವಿದ್ಯಾಲಯಗಳ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ರಾಷ್ಟ್ರೀಯ ಹಿಂದಿ ದಿನ ಮತ್ತು ಪುಸ್ತಕ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಭಾಷೆಗೆ ತನ್ನದೆಯಾದ ಮಹತ್ವವಿದ್ದು ಬಾಂಧವ್ಯ ಮತ್ತು ಭಾವನೆಗಳನ್ನು ವ್ಯಕ್ತಪಡಿಸಲು ಇರುವ ಅತ್ಯಮೂಲ್ಯ ವೇದಿಕೆಯಾಗಿದೆ ಎಂದರು.

ದೇಶದಲ್ಲಿ ನಾನಾ ಭಾಷೆಗಳಿದ್ದು ಅವುಗಳ ಬಗ್ಗೆ ಸದ್ಭಾವನೆಯನ್ನು ಹೊಂದಿರಬೇಕು. ಹೆಚ್ಚು ಭಾಷೆಗಳನ್ನು ಕಲಿತಷ್ಟು ವ್ಯಕ್ತಿತ್ವ ಮತ್ತು ಜ್ಞಾನದ ವಿಕಸನಕ್ಕೆ ಸಹಾಯಕ ಎಂದ ಬಿರಾದಾರ, ಭಾಷಾ ಸಮಾನತೆಯನ್ನು ಬಸವಣ್ಣನವರು 12ನೇ ಶತಮಾನದಲ್ಲಿಯೇ ಅನುಭವ ಮಂಟಪದ ವಚನ ಸಾಹಿತ್ಯದ ಮೂಲಕ ವಿಧವಿಧವಾಗಿ ಸಾರಿದ್ದು ವಿದ್ಯಾರ್ಥಿಗಳು ಉತ್ತಮ ಮೌಲ್ಯಗಳ ಜೊತೆಗೆ ಭಾಷಾ ಹಿಡಿತದ ಕೌಶಲ್ಯಗಳನ್ನು ಬೆಳೆಸಿಕೊಳ್ಳಬೇಕು ಎಂದು ಹೇಳಿದರು. ಅಧ್ಯಕ್ಷತೆ ವಹಿಸಿದ್ದ ಬಿವಿವಿ ಸಂಘದ ಕಾಲೇಜು ಆಡಳಿತ ಮಂಡಳಿ ಕಾರ್ಯಧ್ಯಕ್ಷ ಗುರುಬಸವ ಸೂಳಿಭಾವಿ ಮಾತನಾಡಿ, ಭಾಷೆ ಕಲಿಕೆಯಿಂದ ಪ್ರಬುದ್ಧತೆ ಬೆಳೆಯುವುದು. ಭಾವೈಕ್ಯತೆಗಳನ್ನು ಬೆಳೆಸುವ ಭಾಷೆ ಹಿಂದಿಯಾಗಿದೆ. ಹಿಂದಿ ಕಲಿಕೆ ವ್ಯಾಪಾರ, ವ್ಯವಹಾರಗಳಿಗೆ ಹಾಗೂ ಹೊರ ರಾಜ್ಯಗಳ ಜನರ ನಡುವಿನ ಸಂವಾದಕ್ಕೆ ಸಹಾಯಕವಾಗುತ್ತದೆ. ಹಿಂದಿ ದೇಶಾದ್ಯಂತ ರಾಷ್ಟ್ರಭಾಷೆಯಂತೆ ಸಾರ್ವತ್ರಿಕವಾಗಿ ಬಳಕೆಯಾಗುತ್ತಿದ್ದು ಎಲ್ಲರೂ ಕಲಿಯಬೇಕು ಎಂದರು. ಬಿವಿವಿ ಸಂಘದ ಪದಾಧಿಕಾರಿಗಳಾದ ಡಾ. ಎಸ್. ಎಂ.ಗಾಂವಕರ್, ಪ್ರಾಚಾರ್ಯರುಗಳಾದ ಡಾ. ಜಗನ್ನಾಥ ಚವ್ಹಾಣ, ಎಸ್.ಆರ್. ಮುಗನೂರಮಠ, ಶ್ರೀಮತಿ ಎಸ್. ಆರ್.ಸಬರದ, ಡಾ.ಎನ್.ಎಚ್.ಬೇವಿನಹಳ್ಳಿ ವೇದಿಕೆ ಮೇಲೆ ಉಪಸ್ಥಿತರಿದ್ದರು. ಡಾ.ಎಂ.ಬಿ.ಜಮಾದಾರ, ಡಾ.ಎಂ. ಎಚ್.ಪಾಟೀಲ, ಐಕ್ಯೂಎಸಿ ಸಂಯೋಜಕ ಡಾ.ಅಪ್ಪು ರಾಡೋಡ, ಶ್ರೀಮತಿ ಗಿರಿಜಾ ನಾವದಗಿ, ಡಾ. ದೇವಪ್ಪ ಲಮಾಣಿ ಇದ್ದರು. ಡಾ.ಮಂಜುಳಾ ಚವ್ಹಾಣ ಸ್ವಾಗತಿಸಿದರು, ಸಂತೋಷ ಜಹಾಗಿರದಾರ ಪರಿಚಯಿಸಿದರು. ರಾಜು ಮೇಲಿನಮನಿ ವಂದಿಸಿದರು. ಇದೇ ಸಂದರ್ಭದಲ್ಲಿ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ವಿತರಿಸಲಾಯಿತು. ಕಾರ್ಯಕ್ರಮದನಂತರ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

# ರಾಣಿ ಅಬ್ಬಕ್ಕ, ಕಿತ್ತೂರು ರಾಣಿ ಚನ್ನಮ್ಮ ರಥಯಾತ್ರೆಗೆ ಚಾಲನೆ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಸೆ. 19 : 'ಅಕ್ಬರ್ ದಿ ಗ್ರೇಟಾ' ಅಥವಾ 'ಶಿವಾಜಿ ದಿ ಗ್ರೇಟಾ', 'ಕಿತ್ತೂರ ರಾಣಿ ಚನ್ನಮ್ಮ ದಿ ಗ್ರೇಟ್', 'ರಾಣಿ ಅಬ್ಬಕ್ಕ ದಿ ಗ್ರೇಟಾ', ಇವರಲ್ಲಿ 'ಯಾರು ದಿ ಗ್ರೇಟ್' ಎಂಬುದನ್ನು ಓದಬೇಕೆಂಬ ಪ್ರಶ್ನೆ ನಮ್ಮ ಮುಂದಿದೆ' ಎಂದು ಕೇಂದ್ರದ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ದಿಮೆಗಳ ಖಾತೆ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಹೇಳಿದರು.

ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ (ಎಬಿವಿಪಿ) ಕರ್ನಾಟಕ ಉತ್ತರ ಪ್ರಾಂತದಿಂದ ನಗರದ ಬಸವ ಮುಕ್ತಿ ಮಂದಿರದ ಆವರಣದಲ್ಲಿ ಶುಕ್ರವಾರ ಏರ್ಪಡಿಸಿದ್ದ ರಾಣಿ ಅಬ್ಬಕ್ಕ 500ನೇ ಜಯಂತಿ ಉತ್ಸವ ಹಾಗೂ ಕಿತ್ತೂರು ರಾಣಿ ಚನ್ನಮ್ಮ ಅವರ 200 ವರ್ಷದ ವಿಜಯೋತ್ಸವದ ಅಂಗವಾಗಿ ಹಮ್ಮಿಕೊಂಡಿರುವ ರಥಯಾತ್ರೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ನಾನು ಪದವಿಯಲ್ಲಿದ್ದಾಗ 'ಅಕ್ಬರ್ ದಿ ಗ್ರೇಟ್' ಎಂದು ಪಠ್ಯದಲ್ಲಿ ಓದಿದ್ದೇನೆ. ಯಾರು ನಮ್ಮ ರಾಷ್ಟ್ರ, ನಮ್ಮ ಧರ್ಮ, ಸಂಸ್ಕೃತಿ, ದೇವಸ್ಥಾನಗಳಿಗೆ ತೆ-ೊಂದರೆ ಮಾಡಿದ್ದರೋ ಅಂತಹವರ ಇತಿಹಾಸ ಓದಿದ್ದೇನೆ. ಆದರೆ, ಚನ್ನಮ್ಮ, ಅಬ್ಬಕ್ಕ, ಸಂಗೊಳ್ಳಿ ರಾಯಣ್ಣನವರ ಕೊಡುಗೆ ಬಗ್ಗೆ ನಾವೆಷ್ಟು ಓದಿದ್ದೇವೆ? ಅವರ ಬಗ್ಗೆ ನಮಗೆಷ್ಟು ಗೊತ್ತಿದೆ ಎಂದು ಪ್ರಶ್ನಿಸಿದ ಅವರು, ಸಂಗೊಳ್ಳಿ ರಾಯಣ್ಣನ ಕುರಿತ ಸಿನಿಮಾ ಬರುವವರೆಗೆ ಅವರ ಚರಿತ್ರೆಯ ಅರಿವಿರಲಿಲ್ಲ ಎಂದು ಹೇಳಿದರು.

ಸ್ವಾತಂತ್ರ್ಯ ಹೋರಾಟಗಾರರ ಬಗ್ಗೆ ಪಠ್ಯದಲ್ಲಿ ಎಷ್ಟು ಸೇರಿಸಿದ್ದೇವೆ? ವಿದ್ಯಾರ್ಥಿಗಳಿಗೆ ಯಾರು ಪ್ರೇರಣೆ? ನಾವು ಪಠ್ಯದಲ್ಲಿ ಎಷ್ಟು ಓದಿದ್ದೇವೆ? ಎಷ್ಟು ಬಿಟ್ಟಿದ್ದೇವೆ? ರಾಣಿ ಚನ್ನಮ್ಮ, ರಾಣಿ ಅಬ್ಬಕ್ಕ ಈ ದೇಶಕ್ಕಾಗಿ ಹೋರಾಡಿದ ಧೀರ ಮಹಿಳೆಯರು. ಅವರ ಶೌರ್ಯ, ಸಾಹಸವನ್ನು ಪರಿಚಯಿಸಲು ಎಬಿವಿಪಿ ಈ ರಥಯಾತ್ರೆ ಹಮ್ಮಿಕೊಂಡಿದೆ ಎಂದು ತಿಳಿಸಿದರು.

ಒಂದು ಕುಟುಂಬದ ವೈಭವೀಕರಣದ ಗುಂಗಿನಲ್ಲಿ, ಜಾತ್ಯತೀತ ಹೆಸರಿನಲ್ಲಿ ಈ ದೇಶದ ಮಹಾನುಭವರ ಬಗ್ಗೆ ನಮ್ಮ ಮಕ್ಕಳಿಗೆ ಏನು ಕಲಿಸಿಕೊಡಲಿಲ್ಲ. ಭಗತ್ ಸಿಂಗ್, ನೇತಾಜಿ ಸುಭಾಷಚಂದ್ರ ಬೋಸ್ ಸೇರಿದಂತೆ ಯಾರ ಬಗ್ಗೆಯೂ ತಿಳಿಸಲಿಲ್ಲ. ಈ ರಥಯಾತ್ರೆ ಮೂಲಕ ಅಂತಹವರ ಯಶೋಗಾಥೆ ತಿಳಿಸಲು ಎಬಿವಿಪಿ ಮುಂದಾಗಿದೆ ಎಂದರು.



ತಮ್ಮವರ ಮೋಸ, ವಂಚನೆಯಿಂದಲೇ ರಾಣಿ ಚನ್ನಮ್ಮ, ರಾಣಿ ಅಬ್ಬಕ್ಕ ಬಂಧಿಯಾದರು. ಇಂತಹ ಮೋಸ, ವಂಚನೆ ನಮ್ಮ ದೇಶದೊಳಗೆ ಈಗಲೂ ನಡೆಯುತ್ತಿದೆ. ಹಿತ ಶತ್ರುಗಳು ಯಾರು? ಭಾರತವನ್ನು ದುರ್ಬಲಗೊಳಿಸಲು ನಮ್ಮ ದೇಶದ ಕೆಲವರು ವಿದೇಶದವರೊಂದಿಗೆ ಕೈಜೋಡಿಸಿ ಕೆಲಸ ಮಾಡುತ್ತಿದ್ದಾರೆ. ಈ ದೇಶ ಉಳಿಸಬೇಕು ಎಂದು ಹೇಳಿದರು.

ಹೈದರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆ ಆಡಳಿತ ಮಂಡಳಿ ಸದಸ್ಯ ಡಾ. ರಜನೀಶ್ ವಾಲಿ ಮಾತನಾಡಿ, ಯುವಕರು ನಿತ್ಯ ಮೊಬೈಲ್‌ನಲ್ಲಿ ಕನಿಷ್ಠ ಹತ್ತು ನಿಮಿಷ ಈ ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿದವರ ಬಗ್ಗೆ ಓದಬೇಕು ಎಂದರು.

ಬಸವಮುಕ್ತಿ ಮಂದಿರದ ಶಿವಯೋಗೀಶ್ವರ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು. ರಥಯಾತ್ರೆ ಸಹ ಸಂಚಾಲಕಿ ಸುಜ್ಞಾತ ಕುಲಕರ್ಣಿ ನಿರೂಪಿಸಿದರು. ಸಂತೋಷಕುಮಾರ ಹಂಗರಗಿ ಸ್ವಾಗತಿಸಿದರೆ, ನಾಗರಾಜ ಸುಲ್ತಾನಪೂರ ವಂದಿಸಿದರು.

**'ದೇಶ ಉಳಿದರೆ ನಾವೆಲ್ಲ ಉಳಿಯುತ್ತೇವೆ'**

'ದೇಶ ಉಳಿದರೆ ಕಾವಿ, ಮಠ ಮಂದಿರಗಳು, ಹೆಣ್ಣು ಮಕ್ಕಳ ಮಾನ-ಮರ್ಯಾದೆ ಹಾಗೂ ನಾವೆಲ್ಲ ಉಳಿಯುತ್ತೇವೆ. ನಮ್ಮ ದೇಶದಿಂದ ವಿಭಜನೆಗೊಂಡು ಪ್ರತ್ಯೇಕವಾಗಿರುವ ದೇಶಗಳಲ್ಲಿ ದೇವಸ್ಥಾನ, ಕಾವಿ ಬಟ್ಟೆ, ನಮ್ಮ ಸಂಸ್ಕೃತಿ ಇಲ್ಲ. ಅದನ್ನು ನಂಬುವ ಜನರೂ ಇಲ್ಲ' ಎಂದು ಸಚಿವೆ ಶೋಭಾ ಕರಂದ್ಲಾಜೆ ಹೇಳಿದರು.

**ದೇಶದ ಬಗ್ಗೆ ಮಕ್ಕಳು ಚಿಂತಿಸಬೇಕು.**

ಪ್ರತಿಯೊಬ್ಬರೂ ತಮ್ಮ ಸಾಮರ್ಥ್ಯಕ್ಕೆ ತಕ್ಕಂತೆ ಈ ದೇಶಕ್ಕೆ ಕೊಡುಗೆ ಕೊಡಬೇಕು. 2047ಕ್ಕೆ ವಿಕಸಿತ ಭಾರತ ಆಗುತ್ತದೆ. ವಿಕಸಿತ ಭಾರತ ಮಾಡುವುದು ವಿದ್ಯಾರ್ಥಿಗಳ ಜವಾಬ್ದಾರಿ. ಆ ದಾರಿಯಲ್ಲಿ ಸಾಗಬೇಕು. ವಿದ್ಯಾರ್ಥಿಗಳು ರಾಷ್ಟ್ರೀಯ ವಿಚಾರಧಾರೆಯಲ್ಲಿ ಮುನ್ನಡೆಯಬೇಕು ಎಂದು ಸಲಹೆ ಮಾಡಿದರು.

**'ಒಂದು ಕುಟುಂಬದಿಂದ ಸ್ವಾತಂತ್ರ್ಯ ಸಿಕ್ಕಿಲ್ಲ'** 'ಅಹಿಂಸೆಯಿಂದಲೇ ಈ ದೇಶಕ್ಕೆ ಸ್ವಾತಂತ್ರ್ಯ ಸಿಕ್ಕಿದೆ, ಒಂದೇ ಕುಟುಂಬದ ಬಗ್ಗೆ ತಿಳಿಸುವ ಕೆಲಸ ನಮ್ಮ ಸರ್ಕಾರಗಳು ಮಾಡಬಾರದು. ಭಾರತಕ್ಕೆ ಒಂದು ಕುಟುಂಬದಿಂದ ಸ್ವಾತಂತ್ರ್ಯ ಸಿಕ್ಕಿಲ್ಲ' ಎಂದು ಎಬಿವಿಪಿ ರಾಷ್ಟ್ರೀಯ ಸಂಘಟನಾ ಕಾರ್ಯದರ್ಶಿ ಶಾಲಿನಿ ವರ್ಮಾ ಹೇಳಿದರು.

ರಾಣಿ ಚನ್ನಮ್ಮ, ರಾಣಿ ಅಬ್ಬಕ್ಕ ಸೇರಿದಂತೆ ಅನೇಕರ ತ್ಯಾಗ, ಬಲಿದಾನದಿಂದ ಈ ದೇಶಕ್ಕೆ ಸ್ವಾತಂತ್ರ್ಯ ಸಿಕ್ಕಿದೆ. ಅದರ ಬಗ್ಗೆ ತಿಳಿಸುವ ಕೆಲಸ ಎಬಿವಿಪಿ ಮಾಡುತ್ತಿದೆ ಎಂದರು.

**ರಥಯಾತ್ರೆ ಎರಡು ಸಾವಿರ ಕಿ.ಮೀ ಸಂಚಾರ**

ಎಬಿವಿಪಿ ರಾಜ್ಯ ಕಾರ್ಯದರ್ಶಿ ಸಚಿನ್ ಕುಳಗೇರಿ ಪ್ರಾಸ್ತಾವಿಕವಾಗಿ ಮಾತನಾಡಿ, ರಾಣಿ ಚನ್ನಮ್ಮ, ರಾಣಿ ಅಬ್ಬಕ್ಕ ಅವರ ಸಾಧನೆ ಮೇಲೆ ಬೆಳಕು ಚೆಲ್ಲಲು ಎಬಿವಿಪಿಯಿಂದ ಎರಡು ರಥಯಾತ್ರೆ ಹಮ್ಮಿಕೊಳ್ಳಲಾಗಿದೆ. ಒಂದು ರಥಯಾತ್ರೆ ಬೀದರ್‌ನಿಂದ, ಇನ್ನೊಂದು ಧಾರವಾಡದಿಂದ ಆರಂಭಗೊಂಡಿದೆ. ಎರಡೂ ರಥಗಳು ಎರಡು ಸಾವಿರ ಕಿ.ಮೀ ಕ್ರಮಿಸಲಿವೆ. ಸೆ. 25ರಂದು ಬೆಳಗಾವಿಯಲ್ಲಿ ಸಮಾವೇಶಗೊಳ್ಳಲಿವೆ. ಇದಾದ ನಂತರ ರಥಗಳು ಹರಿದ್ವಾರಕ್ಕೆ ತಲುಪಲಿವೆ ಎಂದು ತಿಳಿಸಿದರು.

50 ಲಕ್ಷ ಸದಸ್ಯರನ್ನು ಹೊಂದಿರುವ ಜಗತ್ತಿನ ಅತಿದೊಡ್ಡ ಸಂಘಟನೆ ಎಬಿವಿಪಿ. ನಮ್ಮ ನಿಜವಾದ ರೋಲ್ ಮಾಡೆಲ್‌ಗಳನ್ನು ಯುವಪೀಳಿಗೆಗೆ ಪರಿಚಯಿಸಲು ಈ ರಥಯಾತ್ರೆ ಹಮ್ಮಿಕೊಳ್ಳಲಾಗಿದೆ ಎಂದು ಉದ್ದೇಶ ವಿವರಿಸಿದರು.

**ಮಾರ್ಗದುದ್ದಕ್ಕೂ ರಥಕ್ಕೆ ಹೂಮಳೆ**

ಬೀದರ್‌ನ ಸಿದ್ಧಾರೂಢ ಮಠದಿಂದ ಆರಂಭಗೊಂಡ ರಥಯಾತ್ರೆಗೆ ಮಾರ್ಗುದುದ್ದಕ್ಕೂ ಹೂಮಳೆಗೆರೆದು ಸ್ವಾಗತಿಸಲಾಯಿತು.

ಗುಂಪಾ, ಕುಂಬಾರವಾಡ ಕ್ರಾಸ್, ರಾಂಪೂರೆ ಕಾಲೊನಿ ಕ್ರಾಸ್, ಬಿವಿಬಿ ಕಾಲೇಜು ಮೂಲಕ ಹಾದು ಬಸವ ಮುಕ್ತಿ ಮಂದಿರ ತಲುಪಿತು. ರಸ್ತೆಯುದ್ದಕ್ಕೂ ವಿವಿಧ ಶಾಲಾ-ಕಾಲೇಜಿನ ವಿದ್ಯಾರ್ಥಿಗಳು, ಸಿಬ್ಬಂದಿ ಸಾಲಾಗಿ ನಿಂತು ರಥದ ಮೇಲೆ ಹೂಮಳೆಗರೆದರು. ಅಲಂಕರಿಸಿದ ರಥದಲ್ಲಿ ರಾಣಿ ಕಿತ್ತೂರು ಚನ್ನಮ್ಮ, ರಾಣಿ ಅಬ್ಬಕ್ಕನವರ ಮೂರ್ತಿಗಳ ಮೆರವಣಿಗೆ ಮಾಡಲಾಯಿತು. ಬಳಿಕ ರಥವು ಹುಮನಾಬಾದ್ ಕಡೆಗೆ ಪಯಣ ಬೆಳೆಸಿತು.

ಚಿದಂಬರಾಶ್ರಮದ ಶಿವಕುಮಾರ ಸ್ವಾಮೀಜಿ, ಸ್ವಾಗತ ಸಮಿತಿ ಕಾರ್ಯದರ್ಶಿ ಶಶಿ ಹೊಸಳ್ಳಿ, ಉಪಾಧ್ಯಕ್ಷ ರೇವಣಸಿದ್ದಪ್ಪ ಜಲಾದೆ, ರತ್ನಾ ಪಾಟೀಲ, ಸಂಚಾಲಕ ಗುರುನಾಥ ರಾಜಗೀರಾ, ಮುಖಂಡರಾದ ರಘುನಾಥರಾವ್ ಮಲ್ಕಾಪುರೆ, ಸಂತೋಷ ಹಂಗರಗಿ, ಹೇಮಂತ, ಚಂದ್ರಶೇಖರ ಬಿರಾದಾರ, ವೀರೇಶ ಸ್ವಾಮಿ, ಅಶೋಕ ಶೆಂಬೆಳ್ಳಿ, ರೇವಣಸಿದ್ದ ಜಾಡರ, ಈಶ್ವರ ರುಮ್ಮಾ, ಅಶೋಕ ಹೊಕ್ರಾಣಿ, ಭೀಮಣ್ಣಾ ಸೋರಳ್ಳಿ, ಗೋರಖನಾಥ ಕುಂಬಾರ, ನಾಗರಾಜ, ಸ್ನೇಹಾ, ಪ್ರಾರ್ಥನಾ, ಆನಂದ, ಮಹೇಶ, ಪವನ ಕುಂಬಾರ ಇತರರಿದ್ದರು.

# ಕಪ್ಪು ಮಸಿ ಬಳಿದ ಪ್ರಕರಣ ಖಂಡಿಸಿ ನೌಕರರಿಂದ ಬೃಹತ್ ಪ್ರತಿಭಟನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಸೆ.19: ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತರಿಗೆ ಮತ್ತು ಲೋಕೋಪಯೋಗಿ ಇಲಾಖೆಯ ಅಧೀಕ್ಷಕ ಅಭಿಯಂತರರಿಗೆ ಕಪ್ಪು ಮಸಿ ಬಳಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿಗಳನ್ನು ಬಂಧಿಸಿ ಕಠಿಣ ಕಾನೂನು ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿ ಶುಕ್ರವಾರ ರಾಜ್ಯ ಸರ್ಕಾರಿ ನೌಕರರ ಸಂಘದ ನೇತೃತ್ವದಲ್ಲಿ ನೂರಾರು ನೌಕರರು ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಬೃಹತ್ ಪ್ರತಿಭಟನಾ ಪ್ರದರ್ಶನ ಮಾಡಿದರು. ಪ್ರತಿಭಟನೆಕಾರರು ನಂತರ ಜಿಲ್ಲಾಧಿಕಾರಿ ಬಿ. ಫೌ-ಜಿಯಾ ತರನ್ನುಮ್ ಮತ್ತು ನಗರ ಪೋಲಿಸ್ ಆಯುಕ್ತ ಡಾ. ಶರಣಪ್ಪ ಎಸ್.ಡಿ., ಅವರಿಗೆ ಮನವಿ ಪತ್ರ ಸಲ್ಲಿಸಿ, ಕಳೆದ 18ರಂದು ನಗರಾಭಿವೃದ್ಧಿ ಪ್ರಾಧಿಕಾರದ ಕಚೇರಿ ಆವರಣದಲ್ಲಿ ಎಂಎಸ್‌ಕೆ ಮಿಲ್ ಹತ್ತಿರ ನೂತನವಾಗಿ ನಿರ್ಮಿಸಿರುವ ತರಕಾರಿ ಮಾರುಕಟ್ಟೆಯ ನಾಮಫಲಕದ ವಿಚಾರವಾಗಿ ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತರು ಹಾಗೂ ಲೋಕೋಪಯೋಗಿ ಇಲಾಖೆಯ



ಅಧೀಕ್ಷಕ ಅಭಿಯಂತರರ ಕರ್ತವ್ಯಕ್ಕೆ ಅಡ್ಡಿಪಡಿಸಿ ಪೋಲಿಸರ ಸಮ್ಮುಖದಲ್ಲಿಯೇ ಅವರ ಮುಖಕ್ಕೆ ಕಪ್ಪು ಮಸಿ ಬಳಿದು ಬೆದರಿಕೆ ಹಾಕಲಾಗಿದೆ ಎಂದು ಆರೋಪಿಸಿದರು. ಇಂತಹ ಘಟನೆ ಖಂಡನಾರ್ಹ. ಕೂಡಲೇ ಪ್ರಕರಣದ ಎಲ್ಲ ಆರೋಪಿಗಳನ್ನು ಬಂಧಿಸಿ ಕಠಿಣ ಕಾನೂನಿನ ಅಡಿ ಶಿಕ್ಷೆಯನ್ನು ವಿಧಿಸಬೇಕು ಎಂದು ಒತ್ತಾಯಿಸಿದ ಅವರು, ನಗರದಲ್ಲಿ ಕರ್ತವ್ಯ ನಿರತ ಸರ್ಕಾರಿ ನೌಕರರ ಕರ್ತವ್ಯಕ್ಕೆ ಅಡ್ಡಿಪಡಿಸುವ, ಹಣದ ಬೇಡಿಕೆ ಒಡ್ಡುವ, ಅನಾವಶ್ಯಕ ಮಾಹಿತಿ ಕೇಳಿದರೆ ತೊಂದರೆ ಕೊಟ್ಟು ಕರ್ತವ್ಯ ನಿರತ ನೌಕರರಿಗೆ ಅವಹೇಳನ ಮಾಡಿ ಮಾನಸಿಕ ಹಿಂಸೆ ನೀಡಿ ಭಯದ ವಾತಾವರಣದಲ್ಲಿ ಕರ್ತವ್ಯ ನಿರ್ವಹಿಸುವಂತಾಗಿದೆ ಎಂದು ಕಳವಳ ವ್ಯಕ್ತಪಡಿಸಿದರು. ಇಂತಹ ಘಟನೆಗಳಿಗೆ ಕಡಿವಾಣ ಹಾಕಿ ಸರ್ಕಾರಿ ನೌಕರರು ಮತ್ತು ಅಧಿಕಾರಿಗಳು ಭಯ ಮುಕ್ತ ವಾತಾವರಣದಲ್ಲಿ ಕರ್ತವ್ಯ ನಿರ್ವಹಿಸಿದಲ್ಲಿ ಮಾತ್ರ ಸರ್ಕಾರದ ಯೋಜನೆಗಳು ಯಶಸ್ವಿಯಾಗಿ ಸಾರ್ವಜನಿಕರಿಗೆ ತಲುಪುತ್ತವೆ. ಇಂತಹ ಘಟನೆ ಮರುಕಳಿಸದಂತೆ ನೌಕರರಿಗೆ ಸೂಕ್ತ ರಕ್ಷಣೆ ನೀಡುವಂತೆ, ಕಪ್ಪು ಮಸಿ ಬಳಿದ ಕೃತ್ಯದ ಹಿಂದೆ ಇರುವ ಎಲ್ಲ ವ್ಯಕ್ತಿಗಳನ್ನು ಬಂಧಿಸಿ ಕಾನೂನಿನ ಅಡಿ ಶಿಕ್ಷೆಗೆ ಒಳಪಡಿಸುವಂತೆ ಒತ್ತಾಯಿಸಿದ ಅವರು, ವಿಳಂಬವಾದಲ್ಲಿ ಜಿಲ್ಲೆಯ ಎಲ್ಲ ಸರ್ಕಾರಿ ನೌಕರರು ತಮ್ಮ ಕರ್ತವ್ಯವನ್ನು ನಿಲ್ಲಿಸಿ ಆಡಳಿತ ಯಂತ್ರವನ್ನು ಬಂದ್ ಮಾಡಿ ಹೋರಾಟ ಮಾಡಬೇಕಾಗುತ್ತದೆ ಎಂದು ಎಚ್ಚರಿಸಿದರು. ಸಂಘದ ಜಿಲ್ಲಾಧ್ಯಕ್ಷ ಬಸವರಾಜ್ ಬಳೂಂಡಗಿ ಅವರ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ಮಹೇಶ್ ಹೂಗಾರ್, ಧರ್ಮರಾಜ್ ಜವಳಿ, ಶರಣರಾಜ್ ಚಪ್ಪರಬಂದಿ, ಮಲ್ಲಿನಾಥ ಮಂಗಲಗಿ, ಶಾಂತಕುಮಾರ್ ಪಾಟೀಲ್, ಮಾರ್ಥಂಡಶಾಸ್ತ್ರಿ, ಸಿದ್ಧಲಿಂಗಯ್ಯ ಮಠಪತಿ, ಶಶಿಕಾಂತ್ ಹೋಳಕರ್, ಪಪ್ಪು ಪಟೇಲ್, ಮುಸ್ತಾಕ್ ಮೊಹಮ್ಮದ್, ರಮೇಶ್ ನಾಯಕ್, ಚಂದ್ರಕಾಂತ ಏರಿ, ಎಂ.ಬಿ. ಪಾಟೀಲ್, ಸಂತೋಷ ರಂಗು, ಮಹಾಂತೇಶ್, ಲಕ್ಷ್ಮೀಕಾಂತ್ ಶೇಗಜಿ, ಗಿರಿಜಾ, ಖುಷಿರಬಾನು ಮುಂತಾದವರು ಪಾಲ್ಗೊಂಡಿದ್ದರು.

# ಬೆಂಬಲ ಬೆಲೆ ಯೋಜನೆಯಡಿ ಖರೀದಿ ಕೇಂದ್ರಗಳು ಪ್ರಾರಂಭಿಸಲು ಕ್ರಮವಹಿಸಿ: ಸಿದ್ರಾಮಯ್ಯ ಎಸ್.ಸ್ವಾಮಿ



ಮಲ್ಲಮ್ಮ ನುಡಿ ವಾರ್ತೆ

ಬೀದರ, ಸೆ.19 : ಜಿಲ್ಲೆಯಲ್ಲಿ ಈಗಾಗಲೇ ಹೆಸರು ಹಾಗೂ ಉದ್ದು ಬೆಳೆಯು ಕಟಾವು ಆಗಿದ್ದು ತಕ್ಷಣ ಬೆಂಬಲ ಬೆಲೆ ಯೋಜನೆಯಡಿ ಖರೀದಿ ಕೇಂದ್ರಗಳು ಪ್ರಾರಂಭಿಸಲು ಮಾರುಕಟ್ಟೆ ಇಲಾಖೆ ಅಧಿಕಾರಿ ಕ್ರಮ ವಹಿಸಬೇಕೆಂದು ಬೀದರ ಜಿಲ್ಲಾ ಕೃಷಿಕ ಸಮಾಜದ ಅಧ್ಯಕ್ಷ ಸಿದ್ರಾಮಯ್ಯ ಎಸ್.ಸ್ವಾಮಿ ತಿಳಿಸಿದರು.

ಅವರು ಶುಕ್ರವಾರ ಬೀದರ ಜಂಟಿ ಕೃಷಿ ನಿರ್ದೇಶಕರ ಕಛೇರಿಯಲ್ಲಿ ನಡೆದ ಕೃಷಿಕ ಸಮಾಜದ ಕಾರ್ಯಕಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ರೈತರು ಹೆಚ್ಚಿನ ಪ್ರಮಾಣದಲ್ಲಿ ಬೆಳೆ ವಿಮೆಗೆ ನೋಂದಣಿ ಮಾಡಿಕೊಂಡಿರುತ್ತಾರೆ ಆಗಸ್ಟ ಮಾಹೆಯಲ್ಲಿ ಸುರಿದಿರುವ ಸತತ ಮಳೆಯಿಂದಾಗಿ ಬೆಳೆ ಹಾನಿಯಾಗಿರುವ ರೈತರಿಗೆ 72 ಗಂಟೆಯೊಳಗೆ ದೂರು ನೀಡಲು ಸಾಧ್ಯವಾಗದ ಪಕ್ಷದಲ್ಲಿ ವಿಮಾ ಕಂಪನಿ ಪ್ರತಿನಿಧಿಯವರು ದೂರು ದಾಖಲಿಸಿಕೊಳ್ಳಬೇಕು ಮತ್ತು ದೂರು ದಾಖಲಿಸಿದ ರೈತರ ಸರ್ವೆ ಪೂರ್ಣಗೊಳಿಸಿ ರೈತರಿಗೆ ತಕ್ಷಣ ಪರಿಹಾರ ಪಾವತಿಗಾಗಿ ಕ್ರಮವಹಿಸಲು ವಿಮಾ ಕಂಪನಿಯ ಜಿಲ್ಲಾ ಪ್ರತಿನಿಧಿಯಾದ ದಸ್ತಗಿರ ಅವರಿಗೆ ತಿಳಿಸಿದರು. ಆಗಸ್ಟ ಮಾಹೆಯಲ್ಲಿ ಸುರಿದಿರುವ ಸತತ ಮಳೆಯಿಂದಾಗಿ ಜಿಲ್ಲೆಯಲ್ಲಿ 93138 ಹೇ. ಪ್ರದೇಶದಲ್ಲಿ ಬೆಳೆ ಹಾನಿಯಾಗಿರುವುದು ವರದಿ ಮಾಡಲಾಗಿರುತ್ತದೆ ಹಾಗೂ ಜಿಲ್ಲಾಧಿಕಾರಿಯವರ ಆದೇಶದ ಮೇರೆಗೆ ಜಂಟಿ ಸಮೀಕ್ಷೆ ಪ್ರಗತಿಯಲಿದೆಯೆಂದು ಅಧ್ಯಕ್ಷರು ತಿಳಿಸಿದರು. ಈ ಸಭೆಯಲ್ಲಿ ಬೀದರ ಜಂಟಿ ಕೃಷಿ ನಿರ್ದೇಶಕಿ ದೇವಿಕಾ ಆರ್., ಜಿಲ್ಲಾ ಕೃಷಿಕ ಸಮಾಜದ ಉಪಾಧ್ಯಕ್ಷ ಉಮಕಾಂತ ವಿ., ಪ್ರಧಾನ ಕಾರ್ಯದರ್ಶಿ ಸಂಗಮೇಶ ವಾಲೆ ಸೇರಿದಂತೆ ಜಿಲ್ಲಾ ಕೃಷಿಕ ಸಮಾಜದ ಸದಸ್ಯರುಗಳು ಉಪಸ್ಥಿತರಿದ್ದರು. ಜಂಟಿ ಕೃಷಿ ನಿರ್ದೇಶಕರ ಕಚೇರಿಯ ಕೃಷಿ ಅಧಿಕಾರಿ ಕೈಲಾಸನಾಥ ಅವರು ಸಭೆಯಲ್ಲಿದ್ದ ಜಿಲ್ಲಾ ಕೃಷಿ ಸಮಾಜ ಬೀದರ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಿದರು.

# ಮಳಖೇಡ ರೋಡ್ ನಿಲ್ದಾಣದಲ್ಲಿ ನಿಲ್ಲಲಿದೆ ಎಕ್ಸ್‌ಪ್ರೆಸ್ ರೈಲು

ಮಲ್ಲಮ್ಮ ನುಡಿ ವಾರ್ತೆ

ಸೇಡಂ, ಸೆ.19: ಸೇಡಂನ ಮಳಖೇಡ ರೋಡ್ ನಿಲ್ದಾಣದಲ್ಲಿ ತಿರುಪತಿ-ನಿಜಾಮುದ್ದೀನ್ ರಾಯಲಸೀಮಾ ಎಕ್ಸ್‌ಪ್ರೆಸ್ ರೈಲು

ನಿಲುಗಡೆಗೆ ರೈಲ್ವೇ ಇಲಾಖೆ ಆದೇಶಿಸಿದೆ. ನಮ್ಮ ಮನವಿಗೆ ಸ್ಪಂದಿಸಿದ ಕೇಂದ್ರ ರೈಲ್ವೆ ಖಾತೆಯ ರಾಜ್ಯ ಸಚಿವರಾದ ವಿ.ಸೋಮಣ್ಣ ಅವರಿಗೆ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಇಲಾಖೆ ಸಚಿವರಾದ ಡಾ.ಶರಣಪ್ರಕಾಶ



ಪಾಟೀಲ ಧನ್ಯವಾದ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿರುವ ಅವರು,

ಕಳೆದ ಕೆಲವು

ದಿನಗಳಿಂದ ಹಿಂದೆ ಕೇಂದ್ರ ರೈಲ್ವೆ ಖಾತೆಯ ರಾಜ್ಯ ಸಚಿವರನ್ನು ಭೇಟಿ ಮಾಡಿ, ತಿರುಪತಿ-ನಿಜಾಮುದ್ದೀನ್ ರಾಯಲಸೀಮಾ ಎಕ್ಸ್‌ಪ್ರೆಸ್ ರೈಲು ಸೇಡಂ ವಾಯ

ಮಳಖೇಡ ರೋಡ್ ನಿಲ್ದಾಣದಲ್ಲಿ ನಿಲುಗಡೆ ಕುರಿತು ಮನವಿ ಸಲ್ಲಿಸಲಾಗುತ್ತು, ಸೇಡಂ ಕ್ಷೇತ್ರದ ಜನರ ಹಾಗೂ ಪ್ರಯಾಣಿಕರ ಪರವಾಗಿ ವಿ.ಸೋಮಣ್ಣ ಅವರಿಗೆ ಸಚಿವ ಡಾ

ಶರಣಪ್ರಕಾಶಪಾಟೀಲ ಕೃತಜ್ಞತೆಗಳನ್ನು ತಿಳಿಸಿದ್ದಾರೆ.

ಇನ್ನು ಮುಂದೆ ಸೇಡಂ ವಾಯ ಮಳಖೇಡ ರೋಡ್ ನಿಲ್ದಾಣದಲ್ಲಿ ತಿರುಪತಿ-ನಿಜಾಮುದ್ದೀನ್ ರಾಯಲಸೀಮಾ ಎಕ್ಸ್‌ಪ್ರೆಸ್ ರೈಲು ನಿಲುಗಡೆಯಾಗಿರುವುದು ಸಂತಸದ ಸಂಗತಿ ಎಂದು ಸಚಿವರು ಹರ್ಷ ವ್ಯಕ್ತಪಡಿಸಿದ್ದಾರೆ.

# ಉಸಿರುಗಟ್ಟಿ ಮೂವರು ಕಾರ್ಮಿಕರ ಸಾವು

ಚೆನ್ನೈ, ಸೆ.19: ತಮಿಳುನಾಡಿನ ತೂತುಕುಡಿ ಜಿಲ್ಲೆಯ ಹಳೆಯ ಬಂದರ್‌ನಲ್ಲಿ ಬಾರ್ಜ್‌ನೊಳಗೆ ಬ್ಯಾಲಸ್ಟ್ ಟ್ಯಾಂಕ್ ಸ್ವಚ್ಛಗೊಳಿಸುವಾಗ ರಾಜಸ್ಥಾನದ ಒಬ್ಬರು ಸೇರಿದಂತೆ ಮೂವರು ನೈರ್ಮಲ್ಯ ಕಾರ್ಮಿಕರು ಉಸಿರುಗಟ್ಟು ಸಾವನ್ನಪ್ಪಿದ್ದಾರೆ.

ಕಾರ್ಮಿಕರನ್ನು ರಾಜಸ್ಥಾನದ ಸಂದೀಪ್ ಕುಮಾರ್ (25), ತೂತುಕುಡಿ ಜಿಲ್ಲೆಯ ಪುನ್ನಕಾಯಲ್‌ನ ಜೆನಿಸನ್ ಥಾಮಸ್ (35) ಮತ್ತು ತಿರುನಲ್ವೇಲಿ ಜಿಲ್ಲೆಯ ಉವರಿಯ ಸಿರೋನ್ ಜಾರ್ಜ್ (23) ಎಂದು ಗುರುತಿಸಲಾಗಿದೆ. ಮುಕ್ತ ಇನ್ಫ್ರಾ ಒಡೆತನದ ಬಾರ್ಜ್, ಶ್ರೀಲಂಕಾ ಮತ್ತು ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳಿಗೆ ಸರಬರಾಜು ಮಾಡಲು ನಿರ್ಮಾಣ ಸಾಮಗ್ರಿಗಳನ್ನು ಲೋಡ್ ಮಾಡಲು ಹಳೆಯ ಬಂದರಿನಲ್ಲಿ ಹುಡುಗ ನಿಂತಿತ್ತು. ಹಡಗಿನ ಕೆಳಗಿನ ಭಾಗದಲ್ಲಿ ಸಂಗ್ರಹವಾಗಿದ್ದ ವಿಷಕಾರಿ ಅನಿಲವನ್ನು ಉಸಿರಾಡಿದ ನಂತರ ಇವರು ಕುಸಿದು ಬಿದ್ದು ಸಾವನ್ನಪ್ಪಿದ್ದಾರೆ ಎಂದು ತನಿಖಾಧಿಕಾರಿಗಳು ತಿಳಿಸಿದ್ದಾರೆ.

# ಕಕ್ಷಿದಾರರಿಗೆ ತ್ವರಿತವಾಗಿ ನ್ಯಾಯ ಒದಗಿಸಲು ನೂತನ ನ್ಯಾಯಾಲಯ ಸಂಕೀರ್ಣ ಸದ್ಬಳಕೆ ಮಾಡಿಕೊಳ್ಳಿ:ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ ವಿಭು ಬಕ್ರು

ಯಾದಗಿರಿ:ಸೆ:19: ನ್ಯಾಯಾಲಯಕ್ಕೆ ನ್ಯಾಯ ಕೋರಿ ಬರುವ ಕಕ್ಷಿದಾರರಿಗೆ ತ್ವರಿತವಾಗಿ ನ್ಯಾಯ ದೊರಕಿಸುವಲ್ಲಿ ನೂತನ ನ್ಯಾಯಾಲಯ ಸಂಕೀರ್ಣ ಅತ್ಯಂತ ಉಪಯುಕ್ತವಾಗಲಿದೆ ಎಂದು ಕರ್ನಾಟಕ ಹೈಕೋರ್ಟ್ ನ ಮುಖ್ಯ ನ್ಯಾಯಮೂರ್ತಿಗಳಾದ ಶ್ರೀ ವಿಭು ಬಕ್ರು ಅವರು ಹೇಳಿದರು.

ಯಾದಗಿರಿಯಲ್ಲಿ 35.5 ಕೋ. ರೂ ವೆಚ್ಚದಲ್ಲಿ ಹೊಸದಾಗಿ ನಿರ್ಮಿಸಲಾದ ಜಿಲ್ಲಾ ನ್ಯಾಯಾಲಯ ಸಂಕೀರ್ಣ ಹಾಗೂ ಎರಡು ಕೋ. ರೂ ವೆಚ್ಚದಲ್ಲಿ ನಿರ್ಮಿಸಲಾಗಿರುವ ಬಾರ್ ಅಸೋಸಿಯೇಶನ್ ನೂತನ ಕಟ್ಟಡ ಉದ್ಘಾಟಿಸಿ ಮಾತನಾಡಿದ ಅವರು, ನೂತನ ನ್ಯಾಯಾಲಯ ಸಂಕೀರ್ಣವು ಆಧುನಿಕ ಸೌಲಭ್ಯಗಳನ್ನು ಹೊಂದಿದೆ. ವೇಗವಾಗಿ ಅಭಿವೃದ್ಧಿ ಹೊಂದುತ್ತಿರುವ ಹೊಸ ಯಾದಗಿರಿ ಜಿಲ್ಲೆಗೆ ಇದು ಸಂತಸದ ಕ್ಷಣವಾಗಿದೆ.

ಕಾನೂನು ಬಂಧುಗಳು ಮತ್ತು ದಾವೆ ಹೂಡುವವರು ಸುಗಮವಾಗಿ ಕಾರ್ಯನಿರ್ವಹಿಸಲು, ಸಾಮಾನ್ಯ ಜನರಿಗೆ ನ್ಯಾಯ ಒದಗಿಸಲು ಇದು ಅನುಕೂಲಕರವಾಗಲಿದೆ ಎಂದು ಹೇಳಿದರು. ಅದರಂತೆ ನ್ಯಾಯ ವಿತರಣೆಯನ್ನು ಖಚಿತಪಡಿಸಿಕೊಳ್ಳಲು ಈಗ ಲಭ್ಯವಾಗಿರುವ ಮೂಲಸೌಲಭ್ಯಗಳನ್ನು ಬಳಸಿಕೊಳ್ಳಬೇಕು. ಸುಗಮ ನ್ಯಾಯಾಲಯ ಕಲಾಪಗಳಿಗೂ ಇದು ಅನುಕೂಲವಾಗಲಿ ಎಂದು ಹೇಳಿದರು.

ಯಾದಗಿರಿ ಜಿಲ್ಲಾ ಆಡಳಿತಾತ್ಮಕ ನ್ಯಾಯಾಧೀಶರು ಮತ್ತು ಹೈಕೋರ್ಟ್ ನ್ಯಾಯಮೂರ್ತಿಗಳಾದ ಕೆ.ಎಸ್. ಹೇಮಲೇಖಾ ಅವರು, ಜಿಲ್ಲಾ ನ್ಯಾಯಾಲಯಕ್ಕೆ ಹೊಸ ಕಟ್ಟಡ ನಿರ್ಮಾಣವು ನ್ಯಾಯಾಂಗದಲ್ಲಿ ಒಂದು



ಹೊಸ ಮೈಲಿಗಲ್ಲು ಮತ್ತು ಒಂದು ಉಜ್ವಲ ಉದಾಹರಣೆಯಾಗಿದೆ. ಇದರ ಸ್ಥಾಪನೆಯಿಂದ ಸಮಾಜ ಹಾಗೂ ನಾಗರಿಕರಿಗೆ ನ್ಯಾಯದಾನ, ಪಾರದರ್ಶಕ ಸೇವೆ ಕಲ್ಪಿಸಲು ಅನುಕೂಲವಾಗಲಿದೆ ಎಂದರು.

ಅದರಂತೆ ತಾವು ಯಾದಗರಿ ಆಡಳಿತಾತ್ಮಕ ನ್ಯಾಯಾಧೀಶರಾದ ತಕ್ಷಣ ಇಂತಹ ಹೊಸ ಜಿಲ್ಲೆಗೆ ಸುಸಜ್ಜಿತ ನ್ಯಾಯಾಲಯದ ಸಂಕೀರ್ಣ ದೊರೆತಿರುವುದು ಸಂತಸ ತಂದಿದೆ ಎಂದು ಬಣ್ಣಿಸಿದರು.

ವಕೀಲರ ಸಂಘವನ್ನು ಹೊಂದಿರುವ ನ್ಯಾಯಾಲಯ ಸಂಕೀರ್ಣವನ್ನು 10 ಎಕರೆ ಭೂಮಿಯಲ್ಲಿ 35.5 ಕೋಟಿ.ರೂ ವೆಚ್ಚದಲ್ಲಿ ನಿರ್ಮಿಸಲಾಗಿದ್ದು, ಕೆಲಸವನ್ನು ಲೋಕೋಪಯೋಗಿ ಇಲಾಖೆಗೆ ವಹಿಸಲಾಗಿದೆ. ನ್ಯಾಯಾಲಯವು ಎಂಟು ನ್ಯಾಯಾಲಯ ಸಭಾಂಗಣಗಳನ್ನು ಹೊಂದಿದೆ, ಇದರಲ್ಲಿ ಪ್ರಧಾನ ಜಿಲ್ಲೆಯ ನ್ಯಾಯಾಲಯ ಸಭಾಂಗಣಗಳು ಸೇರಿವೆ ಮತ್ತು ಹೆಚ್ಚುವರಿ ನ್ಯಾಯಾಧೀಶರಿಗೂ ಸಹ ನ್ಯಾಯಾಲಯ ಸಭಾಂಗಣಗಳಿವೆ.

ಬಾರ್ ಅಸೋಸಿಯೇಷನ್ ಕಟ್ಟಡ, ವಾಹನ ಪಾರ್ಕಿಂಗ್, ಕ್ಯಾಂಟೀನ್, ಉದ್ಯಾನ ಮತ್ತು ಪುರುಷರು ಮತ್ತು ಮಹಿಳೆಯರಿಗೆ ಶೌಚಾಲಯಗಳನ್ನು ಸಹ ಸಂಕೀರ್ಣದಲ್ಲಿ ನಿರ್ಮಿಸಲಾಗಿದೆ. ಹೈಕೋರ್ಟ್ ನ್ಯಾಯಾಧೀಶರಾದ ನ್ಯಾಯಮೂರ್ತಿ ಎಚ್.ಪಿ. ಸಂದೇಶ್ ಮತ್ತು ಅಶೋಕ್ ಕಿಣಗಿ; ಕರ್ನಾಟಕ ಹೈಕೋರ್ಟ್‌ನ ನಿವೃತ್ತ ಮುಖ್ಯ ನ್ಯಾಯಮೂರ್ತಿ ಮತ್ತು ಸೆಕ್ಯುರಿಟೀಸ್ ಮೇಲ್ಮನವಿ ನ್ಯಾಯಮಂಡಳಿಯ ಅಧ್ಯಕ್ಷ ನ್ಯಾಯಮೂರ್ತಿ ಪಿ.ಎಸ್. ದಿನೇಶ್ ಕುಮಾರ್; ಕರ್ನಾಟಕ ಹೈಕೋರ್ಟ್‌ನ ರಿಜಿಸ್ಟ್ರಾರ್ ಜನರಲ್ ಕೆ.ಎಸ್. ಭರತ್ ಕುಮಾರ್; ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶ ಮರುಳಸಿದ್ದಾರಾಧ್ಯ; ಜಿಲ್ಲಾಧಿಕಾರಿ ಹರ್ಷಲ್ ಭೋಯರ್; ಪೊಲೀಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ್; ಸಿಇಒ ಲವಿಶ್ ಓರ್ಡಿಯಾ; ಬಾರ್ ಅಸೋಸಿಯೇಷನ್ ಅಧ್ಯಕ್ಷ ಆರ್. ಎಸ್. ಪಾಟೀಲ್ ಮತ್ತು ಇತರರು ಉಪಸ್ಥಿತರಿದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.